ಸಂಪುಟ : 13 Volume ಸಂಚಿಕೆ : 214 Issue ಪುಟಗಳು : 08 Pages ಗುರುವಾರ 09 ಅಕ್ಟೋಬರ್ 2025 ₹2 RNINO:KARKAN/2011/48371 BDR/054/2026-20274 www.mallammanudi.in mallammanudi@gmail.com 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

' ತಿರಸ್ಕಾರಕ್ಕೆ ತಿರಸ್ಕಾರವೇ ಮದ್ದಲ್ಲ ಪ್ರೀತಿಯೇ ದಿವ್ಯಾಷಧ ' .

–ಗೌತಮ ಬುದ್ಧ .

2 ನಾಳೆಯಿಂದ 24ನೇ ಕಲ್ಯಾಣ ಪರ್ವಆರಂಭ

4 ಬುಧೇರಾದಲ್ಲಿ ಗ್ಯಾರಂಟಿ ಅನುಷ್ಠಾನ

8 ಪಾಕಿಸ್ತಾನ ರಕ್ಷಣಾ ಸಚಿವ

## ಪ್ರಾಣಿ ಸಂಪತ್ತು ಕೊಲ್ಲುವವರ ವಿರುದ್ಧ ಕಠಿಣ ಕ್ರಮ ಶತಸಿದ್ಧ: ಸಿಎಂ ಎಚ್ಚರಿಕೆ



ಬೆಂಗಳೂರು ಅ 8 :ಪ್ರಾಣಿ ಸಂಪತ್ತು ಇಲ್ಲದೆ ಅರಣ್ಯ ಸಂಪತ್ತಿಗೆ ಮೌಲ್ಯವೇ ಇಲ್ಲ. ಹೀಗಾಗಿ ಪ್ರಾಣಿ ಸಂಪತ್ತನ್ನು ಕೊಲ್ಲುವವರ ವಿರುದ್ಧ ಕಠಿಣ ಕ್ರಮ ಶತಸಿದ್ಧ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ಪಷ್ಟ ಎಚ್ಚರಿಕೆ ನೀಡಿದರು.ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ನಡೆದ 71ನೇ ವನ್ಯಜೀವಿ ಸಪ್ತಾಹದ ಸಮಾರೋಪ ಸಮಾರಂಭದಲ್ಲಿ ಪರಿಸರ, ಅರಣ್ಯ ಸಂರಕ್ಷಕರಿಗೆ ಮುಖ್ಯಮಂತ್ರಿ ಪದಕ ವಿತರಿಸಿ ಮಾತನಾಡಿದರು.ಸಾಕು ಹಸುವನ್ನು ತಿಂದಿದೆ ಎನ್ನುವ ಕಾರಣಕ್ಕೆ ಹುಲಿಗಳಿಗೆ ವಿಷ ಹಾಕುವುದನ್ನು ಸಹಿಸಲು ಸಾಧ್ಯವಿಲ್ಲ. ಯಾರೇ ಅರಣ್ಯ ಮತ್ತು ಪ್ರಾಣಿ ಸಂಪತ್ತನ್ನು ಕೊಲ್ಲಲು ಮುಂದಾದರೆ ಅಂಥವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು. ಅವರು ಎಷ್ಟೇ ದೊಡ್ಡವರಾಗಿದ್ದರೂ ಮುಲಾಜು ನೋಡದೆ ಕಾನೂನು ಕ್ರಮ ಕೈಗೊಳ್ಳಲಾಗಿವುದು ಎಂದರು.

ಮಾನವ–ವನ್ಯಜೀವಿ ಸಹಬಾಳ್ವೆಯ ಪರಿಸರ ಪೂರಕವಾದ ಆಶಯ ಮತ್ತು ಉದ್ದೇಶಕ್ಕಾಗಿ ವನ್ಯಜೀವಿ ಸಪ್ತಾಹವನ್ನು ಆಚರಿಸಲಾಗುತ್ತಿದೆ. ಅರಣ್ಯ ಪರಿಸರ ಆರೋಗ್ಯಕರವಾಗಿ ವಿಸ್ತರಣೆ ಆದಷ್ಟೂ ಮನುಷ್ಯ ಪರಿಸರ ಹೆಚ್ಚು ಆರೋಗ್ಯಕರವಾಗಿರುತ್ತದೆ. ಅರಣ್ಯದ ಉಳಿವು ಭೂಮಿಯ ಉಳಿವು ಎನ್ನುವುದನ್ನು ಮರೆಯಬಾರದು ಎಂದರು. ಆನೆ ಮತ್ತು ಹುಲಿ ಸಂಪತ್ತಿನಲ್ಲಿ ನಮ್ಮ ರಾಜ್ಯ ಮೊದಲ ಮತ್ತು ಎರಡನೇ ಸ್ಥಾನದಲ್ಲಿದೆ. ಇದರ ಜೊತೆಗೆ ಪ್ರಾಣಿ ಮತ್ತು ಮನುಷ್ಯರ ಸಂಘರ್ಷ ತಪ್ಪಿ ಸಹಬಾಳ್ವೆ ಏರ್ಪಡಬೇಕು. ಇದಕ್ಕಾಗಿ ಪ್ರಾಣಿಗಳು ಕಾಡು ಬಿಟ್ಟು ಹೊರಗೆ ಏಕೆ ಬರುತ್ತಿವೆ ಎನ್ನುವ ಬಗ್ಗೆ ಅಧ್ಯಯನಗಳು ನಡೆದು ವೈಜ್ಞಾನಿಕ ಪರಿಹಾರಗಳನ್ನು ಕಂಡುಕೊಳ್ಳಬೇಕಿದೆ ಎಂದರು. ಹುಲಿ, ಆನೆಗಳ ಹತ್ಯೆ ಪ್ರಕರಣಗಳ ಬಗ್ಗೆ ಕಳವಳ ವ್ಯಕ್ತಪಡಿಸಿದ ಮುಖ್ಯಮಂತ್ರಿಗಳು ಅರಣ್ಯಾಧಿಕಾರಿಗಳು ಹೆಚ್ಚು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಬೇಕು. ಹುಲಿ ಹತ್ಯೆ ಮಾಡಿದವರು ಮತ್ತು ಪ್ರಾಣಿ ಸಂಪತ್ತನ್ನು ಕೊಲ್ಲುವವರ ವಿರುದ್ಧ ಕಠಿಣ ಕ್ರಮ ಶತಸಿದ್ಧ ಎಂದು ಮುಖ್ಯಮಂತ್ರಿಗಳು ಎಚ್ಚರಿಸಿದರು. ದಿನೇ ದಿನೇ ಅರಣ್ಯ ಪ್ರದೇಶ ಕಡಿಮೆ ಆಗುತ್ತಿದ್ದರೆ ಮನುಷ್ಯ ಕುಲ ಉಳಿಯಲು ಸಾಧ್ಯವಿಲ್ಲ. ಆದ್ದರಿಂದ ಅರಣ್ಯದ ಉಳಿವು ಮನುಷ್ಯನ ಉಳಿವು ಎನ್ನುವುದನ್ನು ಪ್ರತಿಯೊಬ್ಬರೂ ಅರ್ಥ ಮಾಡಿಕೊಳ್ಳಬೇಕು ಎಂದರು.ಅರಣ್ಯ ಮತ್ತು ಪರಿಸರ ಸಚಿವರಾದ ಈಶ್ವರ್ ಖಂಡ್ರೆ, ಅರಣ್ಯ ರಾಯಬಾರಿ ಅನಿಲ್ ಕುಂಬ್ಳೆ, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರಾದ ಪೊನ್ನಣ್ಣ, ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್ ಸೇರಿ ಹಲವು ಗಣ್ಯರು ಉಪಸ್ಥಿತರಿದ್ದರು.

## 525 ಗ್ರಾ. ಪಂ.ಗಳಲ್ಲಿ 'ನೀರಿದ್ದರೆ ನಾಳೆ' ಯೋಜನೆ ಅನುಷ್ಠಾನ : ಭೋಸರಾಜು



ಬೆಂಗಳೂರು ಅ 08:ರಾಜ್ಯದ 15 ಜಿಲ್ಲೆಗಳ, 27 ತಾಲ್ಲೂಕಗಳಲ್ಲಿನ ಅಂತರ್ಜಲ ಅತಿಬಳಕೆಯ ಪಟ್ಟಿಯಲ್ಲಿರುವ 252 ಗ್ರಾಮ ಪಂಚಾಯ್ತಿಗಳಲ್ಲಿ "ನೀರಿದ್ದರೆ ನಾಳೆ" ಯೋಜನೆಯನ್ನು ಮೊದಲ ಹಂತದಲ್ಲಿ ಅನುಷ್ಠಾನಗೊಳಿಸಲಾಗುವುದು. ಈ ಮಹತ್ವಕಾಂಕ್ಷಿ ಯೋಜನೆಗೆ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಚಾಲನೆ ನೀಡಲಿದ್ದಾರೆ ಎಂದು ಸಣ್ಣ ನೀರಾವರಿ, 2ನೇ ಪುಟನೋಡಿ

## ಪಟಾಕಿ ಕಾರ್ಖಾನೆಯಲ್ಲಿ ಸ್ಫೋಟ :6 ಜನರ ಸಜೀವ ದಹನ




ಅಮರಾವತಿ:ಅ.8: ಪಟಾಕಿ ತಯಾರಿಕಾ ಘಟಕದಲ್ಲಿ ಭೀಕರ ಸ್ಫೋಟ ಸಂಭವಿಸಿ, 6 ಜನರು ಸಜೀವ ದಹನವಾಗಿರುವ ಘಟನೆ ಆಂಧ್ರಪ್ರದೇಶದ ಅಂಬೇಡ್ಕರ್ ಕೊನಸೀಮಾ ಜಿಲ್ಲೆಯಲ್ಲಿ ಸಂಭವಿಸಿದೆ.

ರಾಯವರಂ ಮಂಡಲದ ರಾಯವರಂ ಲಕ್ಷ್ಮಿ ಗಣಪತಿ ಪಟಾಕಿ ತಯಾರಿಕಾ ಕೇಂದ್ರದಲ್ಲಿ ಬೆಂಕಿ ಅವಘಡ ಸಂಭವಿಸಿದೆ. ಪಟಾಕಿ ತಯಾರಿಸುತ್ತಿದ್ದಾಗ ಅವಘಡ ಸಂಭವಿಸಿದೆ. ಕಾರ್ಖಾನೆಯಲ್ಲಿ ಕೆಲಸ ಮಾಡುತ್ತಿದ್ದ 6 ಮಂದಿ ಸ್ಥಳದಲ್ಲೇ ಮೃತಪಟ್ಟಿದ್ದು, ಎಂಟು ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ.

ಘಟನಾ ಸ್ಥಳಕ್ಕೆ ಪೊಲೀಸರು ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ಧಾವಿಸಿ, ಬೆಂಕಿ ನಂದಿಸುವ ಕಾರ್ಯವನ್ನು ಆರಂಭಿಸಿದ್ದಾರೆ. ಮೃತರು ಮತ್ತು ಗಾಯಗೊಂಡವರನ್ನು ಕಾರ್ಖಾನೆಯಲ್ಲಿ ಕೆಲಸ ಮಾಡುವ ಕಾರ್ಮಿಕರು ಎಂದು ಗುರುತಿಸಲಾಗಿದೆ ಎಂದು ಜಿಲ್ಲಾ ಡಿಎಸ್ಪಿ ರಾಹುಲ್ ಮೀನಾ ತಿಳಿಸಿದ್ದಾರೆ.

# ಪ್ರತೀಕಾರ ತಡೆದವರು ಯಾರು ಕಾಂಗ್ರೆಸ್ ದೇಶಕ್ಕೆ ತಿಳಿಸಲಿ: ಪ್ರಧಾನಿ



ಮುಂಬೈ:ಅ.8: 26/11 ಮುಂಬೈ ಭಯೋತ್ಪಾದಕ ದಾಳಿಯನಂತರಭಾರತಪ್ರತೀಕಾರತೀರಿಸಿಕೊಳ್ಳುವುದನ್ನು ತಡೆದವರು ಯಾರು ಎಂಬುದನ್ನು ಕಾಂಗ್ರೆಸ್, ದೇಶದ ಮುಂದೆ ಬಹಿರಂಗಪಡಿಸಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಬುಧವಾರ ಹೇಳಿದ್ದಾರೆ.

ಇಂದು ನವಿ ಮುಂಬೈನಲ್ಲಿ ಹೊಸದಾಗಿ ನಿರ್ಮಿಸಲಾದ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಉದ್ಘಾಟಿಸಿ ಮಾತನಾಡಿದ ಪ್ರಧಾನಿ ಮೋದಿ, "ಮಾಜಿ ಕೇಂದ್ರ ಗೃಹ ಸಚಿವರೂ ಆಗಿರುವ ಕಾಂಗ್ರೆಸ್ ನಾಯಕರೊಬ್ಬರು, 2008 ರಲ್ಲಿ 26/11 ಮುಂಬೈ ಭಯೋತ್ಪಾದಕ ದಾಳಿಯ ನಂತರ ಭಾರತದ ಸೇನಾ ಪ್ರತೀಕಾರವನ್ನು ಒಂದು ದೇಶ ತಡೆಯಿತು ಎಂದು ಹೇಳಿದ್ದಾರೆ. ಪಕ್ಷ ಆ ಬಗ್ಗೆ ಸ್ಪಷ್ಟಪಡಿಸಬೇಕು" ಎಂದರು.

"ಕಾಂಗ್ರೆಸ್‌ನ ಈ ದೌರ್ಬಲ್ಯ ಭಯೋತ್ಪಾದಕರನ್ನು ಬಲಪಡಿಸಿತು ಮತ್ತು ದೇಶದ ಭದ್ರತೆಯನ್ನು ದುರ್ಬಲಗೊಳಿಸಿತು" ಎಂದು ಪ್ರಧಾನಿ ಮೋದಿ ವಾಗ್ದಾಳಿ ನಡೆಸಿದರು.

ಮುಂಬೈ ಭಯೋತ್ಪಾದಕ ದಾಳಿಯ ನಂತರ ಭಾರತವು ಸೇನಾ ಪ್ರತೀಕಾರ ತೀರಿಸಿಕೊಳ್ಳುವುದನ್ನು ಯಾರು ತಡೆದರು ಎಂದು ತಿಳಿಯುವ ಹಕ್ಕು ದೇಶಕ್ಕೆ ಇದೆ ಎಂದು ಮೋದಿ ಹೇಳಿದರು.

"ನಮಗೆ, ನಮ್ಮ ರಾಷ್ಟ್ರ ಮತ್ತು ಅದರ ನಾಗರಿಕರ ಸುರಕ್ಷತೆ ಮತ್ತು ಭದ್ರತೆಗಿಂತ ಬೇರೇನೂ ಮುಖ್ಯವಲ್ಲ" ಎಂದು ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಪ್ರಾರಂಭಿಸಲಾದ ಆಪರೇಷನ್ ಸಿಂದೂರ್ ಅನ್ನು ಉಲ್ಲೇಖಿಸಿ ಮೋದಿ ಹೇಳಿದರು.

"ಮುಂಬೈ ಆರ್ಥಿಕ ರಾಜಧಾನಿ

ನಗರ ಮಾತ್ರವಲ್ಲ, ಭಾರತದ ಅತ್ಯಂತ ಚೈತನ್ಯಶೀಲ ನಗರಗಳಲ್ಲಿ ಒಂದಾಗಿದೆ. 2008ರಲ್ಲಿ ಭಯೋತ್ಪಾದಕರು ಮುಂಬೈ ಮೇಲೆ ದಾಳಿ ಮಾಡಲು ಇದೇ ಕಾರಣ.

ಆದರೆ ಅಂದಿನ ಕಾಂಗ್ರೆಸ್ ಸರ್ಕಾರ ದೌರ್ಬಲ್ಯದ ಸಂದೇಶವನ್ನು ನೀಡಿತು" ಎಂದು ಪ್ರಧಾನಿ ಮೋದಿ ಟೀಕಿಸಿದರು.

ಇತ್ತೀಚಿಗೆ ಹಿರಿಯ ಕಾಂಗ್ರೆಸ್ ನಾಯಕ ಮತ್ತು ಮಾಜಿ ಕೇಂದ್ರ ಗೃಹ ಸಚಿವ ಪಿ. ಚಿದಂಬರಂ ಅವರು, ಮುಂಬೈ ದಾಳಿಯ ನಂತರ ನಮ್ಮ ಭದ್ರತಾ ಪಡೆಗಳು ಪಾಕಿಸ್ತಾನದ ಮೇಲೆ ದಾಳಿ ಮಾಡಲು ಸಿದ್ಧವಾಗಿದ್ದವು. ಆದರೆ ಅಂತರಾಷ್ಟ್ರೀಯ ಒತ್ತಡದಿಂದಾಗಿ, ಭಾರತ, ಪಾಕಿಸ್ತಾನದ ಮೇಲೆ ದಾಳಿ ಮಾಡುವುದನ್ನು ನಿಲ್ಲಿಸಿತು ಎಂದು ಹೇಳಿದ್ದರು.

## ಭದ್ರಿಪೂರದಲ್ಲಿ ಪಾಟೀಲ್ ದಂಪತಿಯಿಂದ ಪೂಜೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಅ.8: ನೆರೆಯ ಜಹೀರಾಬಾದನ ಭದ್ರಿಪೂರದ ಮಠದಲ್ಲಿ ದತ್ತಗಿರಿ ಮಹಾರಾಜರ ಸಾನಿಧ್ಯದಲ್ಲಿ ಜರುಗಿದ ಜಪಯಜ್ಞ ಕಾರ್ಯಕ್ರಮದಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ್ ಭಾಗವಹಿಸಿ ವಿಶೇಷ ಪೂಜೆ ಸಲ್ಲಿಸಿದರು. ಬೆಳಗ್ಗೆ ಮಠದಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ್ ಹಾಗೂ ರಾಜರಾಜೇಶ್ವರಿ ದೇವಸ್ಥಾನ ಟ್ರಸ್ಟ್ ಅಧ್ಯಕ್ಷೆ ಪ್ರೇಮಾ ಪಾಟೀಲ್ ದಂಪತಿಗಳು ಧಾರ್ಮಿಕ ಪರಂಪರೆಯಂತೆ ಪೂಜೆ ನೆರವೇರಿಸುವ ಮೂಲಕ ಲೋಕ ಕಲ್ಯಾಣಕ್ಕಾಗಿ ಪ್ರಾರ್ಥನೆ ಸಲ್ಲಿಸಿ, ಶ್ರೀಮಠದ ಪೂಜ್ಯರಿಂದ ಆಶೀರ್ವಾದ ಪಡೆದರು.

## ಮುಡಾ ಬಿ ರಿಪೋರ್ಟ ಇಂದು ಆದೇಶ

ಬೆಂಗಳೂರು:ಅ.8: ಸಿಎಂ ಸಿದ್ದರಾಮಯ್ಯ ಮತ್ತು ಅವರ ಕುಟುಂಬದ ವಿರುದ್ಧದ ಮುಡಾ ನಿವೇಶನ ಹಂಚಿಕೆ ಹಗರಣ ಸಂಬಂಧ ಲೋಕಾಯುಕ್ತ 'ಬಿ' ರಿಪೋರ್ಟ್ ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಯ ವಿಚಾರಣೆ ಪೂರ್ಣಗೊಂಡಿದೆ. ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ನಾಳೆಗೆ ಆದೇಶ ಕಾಯ್ದಿರಿಸಿದೆ. ಬಿ ರಿಪೋರ್ಟ್ ಪ್ರಶ್ನಿಸಿ ದೂರುದಾರ ಸ್ನೇಹಮಯಿ ಕೃಷ್ಣ ಸಲ್ಲಿಸಿದ್ದ ಅರ್ಜಿ ಸಲ್ಲಿಸಿದ್ದರು. ಬಿ ರಿಪೋರ್ಟ್ ಒಪ್ಪಬೇಕಾ? ಅಥವಾ ಮರುತನಿಖೆಗೆ ಆದೇಶಿಸಬೇಕಾ? ಅನ್ನೋ ಬಗ್ಗೆ ನಾಳೆ ಗೊತ್ತಾಗಲಿದೆ.

ಬಿ ರಿಪೋರ್ಟ್ ಪ್ರಶ್ನಿಸಿ ದೂರುದಾರ ಸ್ನೇಹಮಯಿ ಕೃಷ್ಣ ಪ್ರೊಟೆಸ್ಟ್ ಅರ್ಜಿ ಹಾಕಿದ್ದರು. ಈ ಹಿಂದೆ ತನಿಖೆ ಪೂರ್ಣವಾದ ಬಳಿಕ 'ಬಿ' ರಿಪೋರ್ಟ್ ಬಗ್ಗೆ ತೀರ್ಮಾನ ಮಾಡೋದಾಗಿ ಕೋರ್ಟ್ ಹೇಳಿತ್ತು. ಕಳೆದ 6 ತಿಂಗಳಿಂದ ತನಿಖೆಯಲ್ಲಿ ಪ್ರಗತಿ ಆಗದ ಹಿನ್ನೆಲೆ ಮತ್ತೊಮ್ಮೆ ಅರ್ಜಿ ಸಲ್ಲಿಸಿ 'ಬಿ' ರಿಪೋರ್ಟ್ ಬಗ್ಗೆ ಆದೇಶ ಮಾಡಲು ಸ್ನೇಹಮಯಿ ಕೃಷ್ಣ ಮನವಿ ಮಾಡಿದ್ದರು. ಇಂದು ಕೋರ್ಟ್ ಕಲಾಪದ ಅವಧಿ ಮುಕ್ತಾಯ ಹಿನ್ನೆಲೆ ಆದೇಶ ನಾಳೆಗೆ ಮುಂದೂಡಿಕೆಯಾಗಿದೆ.

## ಬಿಜೆಪಿ ಮುಖಂಡನ ಹತ್ಯೆ: ನಾಲ್ವರ ಬಂಧನ



ಬೆಂಗಳೂರು ಅ.8–ಗಂಗಾವತಿ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ವೆಂಕಟೇಶ್ ಕೊಲೆ ಪ್ರಕರಣ ಸಂಬಂಧ ನಾಲ್ವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.


ಗಂಗಾವತಿ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ವೆಂಕಟೇಶ್ ಕೊಲೆ ಪ್ರಕರಣ ಸಂಬಂಧ ಐವರು ಆರೋಪಿಗಳ ಪೈಕಿ ನಾಲ್ವರು ಆರೋಪಿಗಳನ್ನು ಬಳ್ಳಾರಿ ಜಿಲ್ಲೆ ಕಂಪ್ಲಿಯಲ್ಲಿ ಪೊಲೀಸರು ಬಂಧಿಸಿದ್ದಾರೆ.

ಧನಂಜಯ್, ಮೈಲಾರಿ ಅಲಿಯಾಸ್ ವಿಜಯ್,ಸಲೀಂ, ಭೀಮ ಎಂಬುವರನ್ನು ಪೊಲೀಸರು ಬಂಧಿಸಿದ್ದಾರೆ.ಕೊಪ್ಪಳ ಜಿಲ್ಲೆಯ ಗಂಗಾವತಿ ನಗರದ ಲೀಲಾವತಿ 2ನೇ ಪುಟನೋಡಿ

## ಮಾಜಿ ಪರಿಷತ್ ಸದಸ್ಯ ಪ್ರೊ. ನರಹರಿ ನಿಧನ



ಬೆಂಗಳೂರು:ಅ.8: ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದ ರಾಷ್ಟ್ರೀಯ ಸ್ವಯಂಸೇವಕ ಸಂಘದ ಹಿರಿಯ ಮುಖಂಡ, ಮಾಜಿ ವಿಧಾನ ಪರಿಷತ್ ಸದಸ್ಯ ಪ್ರೊ. ಕೃ. ನರಹರಿ ತಮ್ಮ 93ನೇ ವಯಸ್ಸಿನಲ್ಲಿ ಕೊನೆಯುಸಿರೆಳೆದಿದ್ದಾರೆ. 2ನೇ ಪುಟನೋಡಿ



ಬೀದರ:ಸಿದ್ದಾರೆಡ್ಡಿ ಫೌಂಡೇಶನ್ ಬೀದರ್ ವತಿಯಿಂದ ಗುರಮ್ಮ ಸಿದ್ದಾರೆಡ್ಡಿ ಅವರು ಪ್ರತಿ ವರ್ಷ ಮೆಡಿಕಲ್ ಸೀಟು ಸಿಕ್ಕ ಇಬ್ಬರು ಗ್ರಾಮೀಣ ವಿದ್ಯಾರ್ಥಿ ಗಳಿಗೆ ತಲಾ ರೂ.50,000 ಸಹಾಯಧನ ನೀಡುತ್ತಿದ್ದು ,ಅದರಂತೆ ಇಂದು ಅ.8ರಂದು ಚೆಕ್ ನೀಡುವ ಮೂಲಕ ಬಡ ವಿದ್ಯಾರ್ಥಿಗೆ ಸಹಾಯ ಮಾಡಿದರು.

## ಹಿಮಾಚಲ ಪ್ರದೇಶ ಭೂಕುಸಿತ: ಸಾವಿನ ಸಂಖ್ಯೆ 16 ಕ್ಕೆ ಏರಿಕೆ

ಬಿಲಾಸ್‌ಪುರ: ಅ.8:ಹಿಮಾಚಲ ಪ್ರದೇಶದ ಬಿಲಾಸ್‌ಪುರ ಜಿಲ್ಲೆಯಲ್ಲಿ ಮಂಗಳವಾರ ಸಂಜೆ ಸಂಭವಿಸಿದ್ದ ಭಾರಿ ಭೂಕುಸಿತ ಹಾಗೂ ಬಸ್ ದುರಂತದಲ್ಲಿ ಸಾವನ್ನಪ್ಪಿದವರ ಸಂಖ್ಯೆ 16ಕ್ಕೆ ಏರಿಕೆಯಾಗಿದೆ.

ಖಾಸಗಿ ಬಸ್ ಮೇಲೆ ಪರ್ವತ ಬಿದ್ದು ಕನಿಷ್ಠ 16 ಜನ ಸಾವನ್ನಪ್ಪಿ ಹಲವರು ಗಾಯಗೊಂಡಿದ್ದಾರೆ. 30 ರಿಂದ 35 ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಬಸ್,ಮರೋಟನ್‌ನಿಂದ ಘುಮಾರ್ವಿನ್‌ಗೆ ತೆರಳುತ್ತಿತ್ತು. ಈ ವೇಳೆ ಝುಂಡುಟ್ಟಾ ವಿಧಾನಸಭಾ ವಿಭಾಗದ ಭಾಲುಘಾಟ್ ಪ್ರದೇಶದಲ್ಲಿ ಬಸ್ ಮೇಲೆಯೇ ಗುಡ್ಡ ಕುಸಿದಿದೆ.

ಬಸ್‌ನಲ್ಲಿ ಸಿಲುಕಿ ಬದುಕುಳಿದವರಿಗಾಗಿ ರಕ್ಷಣಾ ತಂಡಗಳು ಹುಡುಕಾಟ ನಡೆಸುತ್ತಿದ್ದು, ಸಾವಿನ ಸಂಖ್ಯೆ 16 ಕ್ಕೆ ಏರಿಕೆಯಾಗಿದೆ ಎಂದು ಬಿಲಾಸ್ಪುರ ಎಸ್‌ಪಿ ಸಂದೀಪ್ ಧವಲ್ ಪಿಟಿಐಗೆ ತಿಳಿಸಿದ್ದಾರೆ.

"ಇಂದು ಮತ್ತೊಂದು ಶವ ಪತ್ತೆಯಾಗುವುದರೊಂದಿಗೆ ಸಾವಿನ ಸಂಖ್ಯೆ 16 ಕ್ಕೆ ಏರಿದೆ. ಎರಡು ದಿನಗಳ ನಿರಂತರ ಮಳೆಯಿಂದಾಗಿ ಬೆಟ್ಟದ ಇಳಿಜಾರು ಅಸ್ಥಿರಗೊಂಡ ನಂತರ, ಸುಮಾರು 25 ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಬಸ್ ಭಾಲುಘಾಟ್ ಪ್ರದೇಶದಲ್ಲಿ ಕುಸಿದು ಬಿದ್ದ ಪರ್ವತದ ಕೆಳಗೆ ಸಿಲುಕಿ ನಲುಗಿತ್ತು. ಹಲವಾರು ಪ್ರಯಾಣಿಕರು ಇನ್ನೂ ಸಿಲುಕಿಕೊಂಡಿರುವ ಶಂಕೆ ವ್ಯಕ್ತವಾಗಿದ್ದು, ಬದುಕುಳಿಯುವ ಸಾಧ್ಯತೆಗಳು ಕ್ಷೀಣಿಸುತ್ತಿವೆ ಎಂದು ತಿಳಿಸಿದ್ದಾರೆ.

ಮಂಗಳವಾರ ತಡರಾತ್ರಿ ಕಳಪೆ ಗೋಚರತೆ ಮತ್ತು ನಿರಂತರ ಮಣ್ಣು ಕುಸಿತದಿಂದಾಗಿ ಸ್ಥಗಿತಗೊಳಿಸಲಾದ ರಕ್ಷಣಾ ಪ್ರಯತ್ನಗಳು ಬುಧವಾರ ಬೆಳಗಿನ ಜಾವ ಮತ್ತೆ ಪುನರಾರಂಭಗೊಂಡವು.

ಪೊಲೀಸರು, ಅಗ್ನಿಶಾಮಕ ಸಿಬ್ಬಂದಿ, ಗೃಹರಕ್ಷಕರು ಮತ್ತು ಸ್ಥಳೀಯ ಸ್ವಯಂಸೇವಕರೊಂದಿಗೆ ಎರಡು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ (ಎನ್‌ಡಿಆರ್‌ಎಫ್) ತಂಡಗಳು ಅವಶೇಷಗಳ ಮೂಲಕ ಕೆಲಸ ಮಾಡುತ್ತಿವೆ. ನಾಪತ್ತೆಯಾದವರನ್ನು ಪತ್ತೆಹಚ್ಚಲು ಶ್ವಾನ ದಳಗಳನ್ನು ಸಹ ನಿಯೋಜಿಸಲಾಗಿದ್ದು, ದೊಡ್ಡ ಬಂಡೆಗಳನ್ನು ಸ್ಥಳಾಂತರಿಸಲು ಭಾರೀ ಯಂತ್ರೋಪಕರಣಗಳನ್ನು ಬಳಸಲಾಗುತ್ತಿದೆ. ಇಲ್ಲಿಯವರೆಗೆ, 15 ಶವಗಳನ್ನು ವಶಪಡಿಸಿಕೊಳ್ಳಲಾಗಿದೆ. ಬಲಿಯಾದವರಲ್ಲಿ

2ನೇ ಪುಟನೋಡಿ

## ಪಾಕ್‌ನಲ್ಲಿ ಘರ್ಷಣೆ; 11 ಸೈನಿಕರು, ಟಿಟಿಪಿಯ 19 ಉಗ್ರರು ಸಾವು



ಇಸ್ಲಾಮಾಬಾದ್:ಅ.8: ಪಾಕಿಸ್ತಾನದ ಖೈಬರ್ ಪಖ್ತುಂಖ್ವಾ ಪ್ರಾಂತ್ಯದಲ್ಲಿ ನಿಷೇಧಿತ ತೆಹ್ರೀಕ್–ಇ–ತಾಲಿಬಾನ್ ಪಾಕಿಸ್ತಾನ ಸಂಘಟನೆಯ ಉಗ್ರರು ಮತ್ತು ಪಾಕಿಸ್ತಾನ ಭದ್ರತಾ ಪಡೆಗಳ ನಡುಗೆ ಘರ್ಷಣೆ ಏರ್ಪಟ್ಟಿದೆ. ಘಟನೆಯಲ್ಲಿ 11 ಪಾಕಿಸ್ತಾನಿ ಸೈನಿಕರು, ಟಿಟಿಪಿಯ 19 ಉಗ್ರರು ಮೃತಪಟ್ಟಿದ್ದಾರೆ.

ಅ.7–8 ರ ರಾತ್ರಿ ಫಿಟ್ನಾ ಅಲ್–ಖವಾರಿಜ್ ಎಂದು ಕರೆಯಲ್ಪಡುವ ಗುಂಪಿನ ಭಯೋತ್ಪಾದಕರಿರುವ ಮಾಹಿತಿ ಮೇರೆಗೆ ಅಫ್ಘಾನಿಸ್ತಾನದ ಗಡಿಯಲ್ಲಿರುವ ಒರಾಕ್ಜೈ ಜಿಲ್ಲೆಯಲ್ಲಿ ಪಾಕ್ ಭದ್ರತಾ ಪಡೆಗಳು ಕಾರ್ಯಾಚರಣೆ ಆರಂಭಿಸಿದ ಬಳಿಕ ಈ ಘಟನೆ ನಡೆದಿದೆ.

ಭದ್ರತಾ ಪಡೆಗಳು ಮತ್ತು ಉಗ್ರರ ನಡುವಿನ ಭೀಕರ ಗುಂಡಿನ ಚಕಮಕಿಯಲ್ಲಿ, 19 ಭಯೋತ್ಪಾದಕರು ಸಾವನ್ನಪ್ಪಿದ್ದಾರೆ ಎಂದು ಮಿಲಿಟರಿ ಹೇಳಿಕೆಯಲ್ಲಿ ತಿಳಿಸಲಾಗಿದೆ. ಲೆಫ್ಟಿನೆಂಟ್ ಕರ್ನಲ್ ಮತ್ತು ಮೇಜರ್ ಸೇರಿದಂತೆ 11 ಪಾಕಿಸ್ತಾನಿ ಸೈನಿಕರು ಸಹ ಪ್ರಾಣ ಕಳೆದುಕೊಂಡಿದ್ದಾರೆ.

ನಿಷೇಧಿತ ಟಿಟಿಪಿ 2022 ರ ನವೆಂಬರ್‌ನಲ್ಲಿ ಸರ್ಕಾರದೊಂದಿಗೆ ಕದನ ವಿರಾಮ ಕೊನೆಗೊಳಿಸಿದ ನಂತರ, ಪಾಕಿಸ್ತಾನವು ವಿಶೇಷವಾಗಿ

2ನೇ ಪುಟನೋಡಿ

**ಶುಭ್ ಮನ್ ಗಿಲ್ ಗೆ ನಾಯಕತ್ವ :ಆಸ್ಟ್ರೇಲಿಯಾ ವಿರುದ್ಧದ ಮುಂಬರುವ ಏಕದಿನ ಸರಣಿಗೆ ಭಾರತ ತಂಡಕ್ಕೆ ರೋಹಿತ ಶರ್ಮಾ ಬದಲು ಗಿಲ್‌ಗೆ ನಾಯಕತ್ವ**

# ಈಶಾನ್ಯ ಶಿಕ್ಷಕರ ಮತಕ್ಷೇತ್ರದ ಚುನಾವಣೆ

## ಕಲಬುರಗಿ ನಗರಾಭಿವೃದ್ಧಿ ಕಚೇರಿಯಲ್ಲಿ ಸಲಹಾ ಕೇಂದ್ರ ಸ್ಥಾಪನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.08–ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಸದಸ್ಯರ ಪದಾವಧಿಯು ದಿನಾಂಕ: 11–11–2026ಕ್ಕೆ ಮುಕ್ತಾಯಗೊಳ್ಳಲಿದ್ದು,ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ–2026ಕ್ಕೆ ಸಂಬಂಧಿಸಿದಂತೆ ದೂರು ಸ್ವೀಕರಿಸಲು ಹಾಗೂ ಮತದಾರರರಿಗೆ ಮಾಹಿತಿ ನೀಡಲು ಕಲಬುರಗಿ ಮಿನಿ ವಿಧಾನಸೌಧದಲ್ಲಿನ ಕೋಣೆ ಸಂಖ್ಯೆ–11ರಲ್ಲಿನ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರ ಕಚೇರಿಯಲ್ಲಿ ದೂರು ಮೇಲ್ವಿಚಾರಣೆ ತಂಡ ಹಾಗೂ ಮತದಾರರ ಮಾಹಿತಿ ಮತ್ತು ಸಲಹಾ ಕೇಂದ್ರ (Complaints Monitoring Cell & Voters helpdesk) ವನ್ನು ಸ್ಥಾಪಿಸಿ ಈ ಕೆಳಕಂಡ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿ ಹಾಗೂ ಸಿಬ್ಬಂದಿಗಳನ್ನು ನೇಮಿಸಿ ಈಶಾನ್ಯ ಶಿಕ್ಷಕರ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳು ಆದ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಆದೇಶ ಹೊರಡಿಸಿದ್ದಾರೆ.

ಈ ಸಲಹಾ ಕೇಂದ್ರದ ದೂರವಾಣಿ ಸಂಖ್ಯೆ 08472–278606/ 9008440605 ಇದ್ದು, ಸಾರ್ವಜನಿಕರು ಈ ಸಲಹಾ ಕೇಂದ್ರಕ್ಕೆ ಸಂಪರ್ಕಿಸಿ ಮತದಾರರ ನೋಂದಣಿ ಹಾಗೂ ಚುನಾವಣೆ ಕುರಿತಾದ ಮಾಹಿತಿ ಪಡೆಯಬಹುದಾಗಿದೆ. ಯಾವುದೇ ದೂರುಗಳಿದ್ದದಲ್ಲಿ ದಾಖಲಿಸಬಹುದಾಗಿದೆ.ಅರ್ಹತಾ ದಿನಾಂಕ: 01–11–2025ಕ್ಕೆ ಅನ್ವಯಿಸುವಂತೆ ಮತದಾರರ ಪಟ್ಟಿಯನ್ನು ಸಿದ್ದಪಡಿಸಲು ವೇಳಾಪಟ್ಟಿಯನ್ನು ಹೊರಡಿಸಿದ್ದು, ನಾಂಕ:25.11.2025 ರಂದು ಕರಡು ಮತದಾರರ ಪಟ್ಟಿ ಪ್ರಕಟಿಸಿ,ದಿನಾಂಕ:25.11.2025 ರಿಂದ 10.12.2025ರ ವರೆಗೆ ಆಕ್ಷೇಪಣೆಗಳನ್ನು ಅಹ್ವಾನಿಸಿ, ದಿನಾಂಕ:30.12.2025 ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ. ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಗಳನ್ವಯ ಹೊಸದಾಗಿ ಮತದಾರರ ಪಟ್ಟಿಯನ್ನು ಸಿದ್ದಪಡಿಸಬೇಕಾಗಿದ್ದು, ಈ ಕಾರ್ಯಕ್ಕಾಗಿ ಅರ್ಹ ಮತದಾರರು ನೋಂದಣಿಗಾಗಿ ಮಾಹಿತಿ ಕೋರಿದ್ದಲ್ಲಿ ಸೂಕ್ತ ಮಾಹಿತಿಯನ್ನು ನೀಡಿ, ಅವರ ಹೆಸರನ್ನು ನೋಂದಾಯಿಸಲು ಅಲ್ಲದೇ ಈಗಾಗಲೇ ನೋಂದಣಿಯಾಗಿದ್ದಲ್ಲಿ ಅವರ ಮತದಾರರ ಪಟ್ಟಿಯ ಭಾಗ ಸಂಖ್ಯೆ ಹಾಗೂ ಕ್ರಮ ಸಂಖ್ಯೆಯ ಮಾಹಿತಿ ನೀಡುವುದು ಇದನ್ನು ಹೊರತುಪಡಿಸಿಯು ಸಹ ಮತದಾರರ ನೋಂದಣಿ ಪ್ರಕ್ರೀಯೆ ಪ್ರಾರಂಭದಿಂದ ಈ ಚುನಾವಣೆಯ ಫಲಿತಾಂಶ ಘೋಷಣೆಯಾಗುವವರೆಗೂ ಲಿಖಿತವಾಗಿ, ಮೌಖಿಕವಾಗಿ ಹಾಗೂ ದೂರವಾಣಿ ಮುಖಾಂತರ



ಸ್ವೀಕೃತವಾಗುವಂತಹ ದೂರುಗಳ ಮೇಲೆ ಸಹಾಯಕ ಮತದಾರರ ನೋಂದಣಾಧಿಕಾರಿಗಳು ಹಾಗೂ ಸಹಾಯಕ ಚುನಾವಣಾಧಿಕಾರಿಗಳ ನಿರ್ದೇಶನದ ಮೇರೆಗೆ ಕ್ರಮ ಕೈಗೊಳ್ಳಲು ದೂರು ಮೇಲ್ವಿಚಾರಣೆ ತಂಡ ಹಾಗೂ ಮತದಾರರ ಮಾಹಿತಿ ಮತ್ತು ಸಲಹಾ ಕೇಂದ್ರವನ್ನು ಸ್ಥಾಪಿಸಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳನ್ನು ನೇಮಿಸಲಾಗಿದೆ.

ದೂರು ಮೇಲ್ವಿಚಾರಣೆ ತಂಡ ಹಾಗೂ ಮತದಾರರ ಮಾಹಿತಿ ಮತ್ತು ಸಲಹಾ ಕೇಂದ್ರಕ್ಕೆ ನೇಮಿಸಲಾದ ಜಿಲ್ಲಾ ಮಟ್ಟದ ಅಧಿಕಾರಿ, ಸಿಬ್ಬಂದಿಗಳ ವಿವರ ಹಾಗೂ ಮೊಬೈಲ್ ಸಂಖ್ಯೆಗಳ ವಿವರ ಇಂತಿದೆ. ಕಲಬುರಗಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮುನ್ನಾವರ್ ದೌಲಾ ಇವರ ಮೋಬೈಲ್ ಸಂಖ್ಯೆ: 9986108000, ತಹಸೀಲ್ದಾರ ವಿಠಾಬಾಯಿ ಮೋಬೈಲ್ ಸಂ. 9008440605 ಹಾಗೂ ಸಿನಿಯರ್ ಪ್ರೊಗ್ರಾಮರ್ ರಮೇಶ ಸಿಂಗ್ ರಜಪೂತ ಮೋಬೈಲ್ ಸಂ. 8431521983ಗೆ ಸಂಪರ್ಕಿಸಬೇಕು.

ಅಫಜಲಪೂರ ತಾಲೂಕು: ಗ್ರೇಡ್–2 ತಹಸೀಲ್ದಾರ ಶರಣಬಸವ ಮೋ: 7899132333 ಹಾಗೂ ಶಿರಸ್ತೆದಾರ ಮಂಜುನಾಥ ಜೋಗ ಮೋಬೈಲ್ ಸಂಖ್ಯೆ:9901755150, ಜೇವರ್ಗಿ ತಾಲೂಕು ಗ್ರೇಡ್–2 ತಹಸೀಲ್ದಾರ ಗೋಪಾಲ ಕಪೂರ ಮೋಬೈಲ್ ಸಂಖ್ಯೆ 9739478018 ಹಾಗೂ ಶಿರಸ್ತೆದಾರ ದೇವಿಂದ್ರ ಮೊಬೈಲ್ ಸಂಖ್ಯೆ 9538560700, ಚಿತ್ತಾಪೂರ ತಾಲೂಕು:ಗ್ರೇಡ್–2 ತಹಸೀಲ್ದಾರ ರಾಜಕುಮಾರ ಎಂ. ಇವರ ಮೊಬೈಲ್ ಸಂಖ್ಯೆ 8105190111 ಹಾಗೂ ಶಿರಸ್ತೆದಾರ ಅಶ್ವಥ ನಾರಾಯಣ ಮೋಬೈಲ್ ಸಂ. 9448652111, ಸೇಡಂ ತಾಲೂಕು: ಗ್ರೇಡ್–2 ತಹಸೀಲ್ದಾರ ಭೀಮಣ್ಣ ಕುದುರಿ ಮೋ: 9901625928 ಹಾಗೂ ಶಿರಸ್ತೆದಾರ ರಾಜಕುಮಾರ ಮೋಬೈಲ್ ಸಂಖ್ಯೆ 6361376408, ಚಿಂಚೋಳಿ ತಾಲೂಕು:ಗ್ರೇಡ್–2 ತಹಸೀಲ್ದಾರ ವೆಂಕಟೇಶ ದುಗ್ಗನ್ ಮೋಬೈಲ್ 9945939641 ಹಾಗೂ ಶಿರಸ್ತೇದಾರ ಅಶೋಕ ಕುಲಕರ್ಣಿ ಇವರ ಮೊಬೈಲ್ ಸಂಖ್ಯೆ 9449437000.

ಗುಲಬರ್ಗಾ ತಾಲೂಕು: ಗ್ರೇಡ್–2 ತಹಸೀಲ್ದಾರ ಗಂಗಾಧರ ಪಾಟೀಲ–8105477749 ಹಾಗೂ ಶಿರಸ್ತೇದಾರ್ ದಯಾನಂದ ರೆಡ್ಡಿ ಮೋ:9731738788, ಶಹಾಬಾದ ತಾಲೂಕು:ಗ್ರೇಡ್–2 ತಹಸೀಲ್ದಾರ ಗುರುರಾಜ ಸಂಗಾವಿ ಮೋಬೈಲ್ ಸಂ. 8147126716 ಹಾಗೂ ಶಿರಸ್ತೇದಾರ್ ರಾಜೇಶ ದೇವಣಿ ಮೋ:9632410622, ಕಮಲಾಪೂರ ತಾಲೂಕು:ಗ್ರೇಡ್–2 ತಹಶೀಲ್ದಾರ ಶಿವಕುಮಾರ ಸಾಬಾ ಮೋ: 8722584444 ಹಾಗೂ ಶಿರಸ್ತೇದಾರ್ ದೀಪಕ ಶೆಟ್ಟಿ ಮೋ:9972898112, ಕಾಳಗಿ ತಾಲೂಕು: ಗ್ರೇಡ್–2 ತಹಶೀಲ್ದಾರ ರಾಜೇಶ್ವರಿ ಮೊಬೈಲ್ ಸಂ. 9945454043 ಹಾಗೂ ಶಿರಸ್ತೇದಾರ್ ಸಂತೋಷ ಕೇಶ್ವಾರ ಇವರ ಮೋಬೈಲ್ ಸಂ. 9901164297 ಹಾಗೂ ಯಡ್ರಾಮಿ ತಾಲೂಕು:ಗ್ರೇಡ್–2 ತಹಶೀಲ್ದಾರ ಯಲ್ಲಪ್ಪ ಸುಬೇದಾರ ಮೊಬೈಲ್ ಸಂ. 9986518344 ಹಾಗೂ ಶಿರಸ್ತೇದಾರ್ ಇವರ ಮೊಬೈಲ್ ಸಂ. ಮಹಾನಿಂಗ ಮೊಬೈಲ್ ಸಂಖ್ಯೆ: 8310770063.

ದೂರು ಮೇಲ್ವಿಚಾರಣೆ ತಂಡ ಹಾಗೂ ಮತದಾರರ ಮಾಹಿತಿ ಮತ್ತು ಸಲಹಾ ಕೇಂದ್ರ (Complaints Monitoring Cell & Voters helpdesk)ಕ್ಕೆ ನೇಮಕ ಮಾಡಲಾದ ಅಧಿಕಾರಿ ಹಾಗೂ ಸಿಬ್ಬಂದಿಗಳು ತಕ್ಷಣದಿಂದಲೇ ಕಾರ್ಯನಿರ್ವಹಿಸಿ ಲಿಖಿತವಾಗಿ /ಮೌಖಿಕವಾಗಿ /ದೂರವಾಣಿ ಮುಖಾಂತರ ಸ್ವೀಕೃತವಾಗುವ ಎಲ್ಲಾ ರೀತಿಯ ಸಲಹೆ ಹಾಗೂ ದೂರುಗಳಿಗೆ ದಾಖಲಾಧಾರಿತವಾದ ವಹಿಯನ್ನು ನಿರ್ವಹಿಸಿ ನಿಯಮಾನುಸಾರ ವಿಲೇಗೊಳಿಸಿ ಕಾಲೋಚಿತಗೊಳಿಸಬೇಕೆಂದು ಅವರು ಸೂಚಿಸಿದ್ದಾರೆ.

## ಕೋರವಾರ ಜವಾಹರ ನವೋದಯ ವಿದ್ಯಾಲಯ: ಪ್ರವೇಶ ಪರೀಕ್ಷೆಗೆ ಅರ್ಜಿ ಸಲ್ಲಿಕೆ ಕೊನೆಯ ದಿನಾಂಕ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಅ.08–ಕೋರವಾರ (ಕಲಬುರಗಿ–02) ಜವಾಹರ ನವೋದಯ ವಿದ್ಯಾಲಯದಲ್ಲಿ 2026–27ನೇ ಸಾಲಿನಲ್ಲಿ 9ನೇ ಹಾಗೂ 11ನೇ ತರಗತಿಗಳ ಪ್ರವೇಶ ಪರೀಕ್ಷೆಗೆ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆ ಕೊನೆಯ ದಿನಾಂಕವನ್ನು 2025ರ ಅಕ್ಟೋಬರ್ 21ರವರೆಗೆ ವಿಸ್ತರಿಸಲಾಗಿದೆ ಎಂದು ಕೋರವಾರ (ಕಲಬುರಗಿ–02) ಜವಾಹರ ನವೋದಯದ ಪ್ರಾಚಾರ್ಯರು ತಿಳಿಸಿದ್ದಾರೆ.

ಕೋರವಾರ ನವೋದಯ ವಿದ್ಯಾಲಯಕ್ಕೆ ಒಳಪಡುವ ತಾಲೂಕುಗಳಾದ ಚಿಂಚೋಳಿ, ಚಿತ್ತಾಪೂರ ಹಾಗೂ ಸೇಡಂ ಶೈಕ್ಷಣಿಕ ವರ್ಷ 2025–26 ನೇ ಸಾಲಿನಲ್ಲಿ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಶಾಲೆಯಲ್ಲಿ 8ನೇ ತರಗತಿಯಲ್ಲಿ ಹಾಗೂ 10ನೇ ತರಗತಿಯಲ್ಲಿ ಓದುತ್ತಿರುವ ಅರ್ಹ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

9ನೇ ತರಗತಿಯ ಪ್ರವೇಶ ಪರೀಕ್ಷೆಗೆ https://cbseitms.nic.in/2025/nvsix_9 ಲಿಂಕ್ ಮೂಲಕ ಹಾಗೂ 11ನೇ ತರಗತಿಗೆ ಪ್ರವೇಶ ಪರೀಕ್ಷೆಗೆ ಇಣಣಿಥಿ:// ಛಿಭಜುಣಟ.ಟುಛಿ.ಟಿ/2025/ ಟಿತಿಥು_11 ಲಿಂಕ್ ಮೂಲಕ 2025ರ ಅಕ್ಟೋಬರ್ 21ರೊಳಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. ಈ ಹಿಂದೆ ಅರ್ಜಿ ಸಲ್ಲಿಕೆ ಕೊನೆಯ ದಿನಾಂಕವನ್ನು 2025ರ ಅಕ್ಟೋಬರ್ 7 ರಂದು ನಿಗದಿಪಡಿಸಲಾಗಿತ್ತು.

ಈ ಪ್ರವೇಶ ಪರೀಕ್ಷೆಯು ದಿನಾಂಕ:07–02–2026 ರಂದು ಜರುಗಲಿದೆ. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕೋರವಾರ ಜವಾಹರ ನವೋದಯ ವಿದ್ಯಾಲಯದ ಮೊಬೈಲ್ ಸಂಖ್ಯೆ 8951741851, 8618468593, 9648963192 ಹಾಗೂ 8495866274 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.




ಕಲಬುರಗಿ: ಅತಿವೃಷ್ಟಿ ಅನಾವೃಷ್ಟಿಯಿಂದ ಅಪಾರ ಪ್ರಮಾಣದ ಬೆಳೆಹಾನಿಯಾದ ಜಿಲ್ಲೆಗಳನ್ನು ಹಸಿಬರಗಾಲ ಘೋಷಿಸಬೇಕು ಹಾಗೂ ಕೇಂದ್ರ ಸರ್ಕಾರ ಕೂಡಲೇ ಪರಿಹಾರ ಒದಗಿಸಬೇಕೆಂದು ಒತ್ತಾಯಿಸಿ ಜಿಲ್ಲಾಧಿಕಾರಿಗಳ ಕಚೇರಿ ಎದುರು ಕರ್ನಾಟಕ ರಾಜ್ಯ ರೈತ ಕಾರ್ಮಿಕರ ಸೇವಾ ಸಂಘ,ಪ್ರಗತಿಪರ ಸಂಘಟನೆಗಳು ಪ್ರತಿಭಟನೆ ನಡೆಸಿದವು. ಚಂದು ಜಾಧವ, ಶೌಕತ್ ಅಲಿ ಆಲೂರ, ಸುನೀಲ ಮಾರುತಿ ಮಾನ್ನಡೆ ಸೇರಿದಂತೆ ಇತರರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ಬಾಂಡ್ ಮೊತ್ತ ಭರಿಸದೇ ಇರುವ ಪ್ರಯುಕ್ತ ಅಕ್ಟೋಬರ್ 9 ರಂದು ಯರಗಲ ಗ್ರಾಮದಲ್ಲಿ ಜಮೀನು ಹರಾಜು ಪ್ರಕ್ರಿಯೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.08.–(ಅಡಿಟ Misc No:453/2020, ಅಡಿ NO:14/2019 (RG Nagar PS V/s Jakeer & Ors) reg ಮಾನ್ಯ ನ್ಯಾಯಾಲಯದ ಆದೇಶದಂತೆ ಬಾಂಡ್ ಮೊತ್ತ ಭರಿಸದೇ ಇರುವುದರಿಂದ ಅರ್ಜುನ ತಂದೆ ಮರೆಪ್ಪಾ ಇವರಿಗೆ ಸೇರಿದ ಚಿತ್ತಾಪುರ ತಾಲೂಕಿನ ಯರಗಲ ಗ್ರಾಮದಲ್ಲಿನ ಸ.ನಂ: 4/*/1 ವಿ: 3–30 ಎ.ಗುಂ. ಜಮೀನಿನ ಹರಾಜು ಪ್ರಕ್ರಿಯೆಯನ್ನು ದಿನಾಂಕ: 09–10–2025 ರಂದು ಬೆಳಿಗ್ಗೆ 11 ಗಂಟೆಗೆ ಚಿತ್ತಾಪುರ ತಾಲ್ಲೂಕಿನ ಚಿತ್ತಾಪುರ ಹೋಬಳಿಯ ಯರಗಲ ಗ್ರಾಮದಲ್ಲಿ ನಿಗದಿಪಡಿಸಲಾಗಿದೆ. ಆಸಕ್ತಿಯುಳ್ಳವರು ಈ ಜಮೀನಿನ ಹರಾಜು ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಬಹುದಾಗಿದೆ ಎಂದು ಚಿತ್ತಾಪುರ ತಹಶೀಲ್ದಾರರು ತಿಳಿಸಿದ್ದಾರೆ.

ನ್ಯಾಯಾಲಯದ ಆದೇಶದಂತೆ ಬಾಂಡ್ ಮೊತ್ತ ಭರಿಸುವಂತೆ ನೋಟೀಸ್–37 ಮತ್ತು ನೋಟೀಸ್–38 ನೀಡಲಾಗಿತ್ತು. ಆದರೆ ಚಿತ್ತಾಪುರ ಕಂದಾಯ ನಿರೀಕ್ಷಕರು ಅರ್ಜುನ ತಂದೆ ಮರೆಪ್ಪಾ ಅವರು ಯರಗಲ ಗ್ರಾಮದಲ್ಲಿ ಹಾಗೂ ಶಹಾಬಾದ ಪಟ್ಟಣದಲ್ಲಿ ವಾಸವಿರುವುದಿಲ್ಲ ಎಂದು ವರದಿ ಸಲ್ಲಿಸಿರುತ್ತಾರೆ. ಆದ್ದರಿಂದ ಪಹಣಿ ಮಾಲೀಕರಾದ ಅರ್ಜುನ ತಂದೆ ಮರೆಪ್ಪಾ ಇವರು ಚಿತ್ತಾಪುರ ತಾಲೂಕಿನ ಯರಗಲ ಗ್ರಾಮದಲ್ಲಿ ವಾಸವಿರದೇ ಇರುವುದರಿಂದ ಇವರಿಗೆ ಸೇರಿದ ಯರಗಲ ಗ್ರಾಮದಲ್ಲಿನ ಸ.ನಂ: 4/*/1 ವಿ: 3–30 ಎ.ಗುಂ. ಜಮೀನನ್ನು ಮೇಲ್ಕಂಡ ದಿನದಂದು ಹರಾಜು ಪ್ರಕ್ರಿಯೆ ನಡೆಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

## 59 ಅಲೆಮಾರಿಗಳಿಗೆ ಶೇ 1ರಷ್ಟು ಪ್ರತ್ಯೇಕ ಮೀಸಲಾತಿ ನೀಡಲು ಆಗ್ರಹಿಸಿ ಮನವಿ

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ: 59 ಅಲೆಮಾರಿಗಳಿಗೆ ಶೇ 1ರಷ್ಟು ಪ್ರತ್ಯೇಕ ಮೀಸಲಾತಿ ನೀಡಲು ಹಾಗೂ ವಿವಿಧ ಬೇಡಿಕೆಗಳ ಈಡೇರಿಸುವಂತೆ ಆಗ್ರಹಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿಯಿಂದ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳು, ಪ್ರಧಾನ ಮಂತ್ರಿಗಳು, ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು.

101 ಪರಿಶಿಷ್ಟರ ಮೀಸಲಾತಿ ವರ್ಗೀಕರಿಸಲು ಆಗ್ರಹಿಸಿ ರಾಜ್ಯದಲ್ಲಿ ಕಳೆದ 35 ವರ್ಷಗಳಿಂದ ಹೋರಾಟ ನಡೆಸಲಾಯಿತು. ಈ ಹೋರಾಟದ ಫಲವಾಗಿ ಸುಪ್ರೀಂ ಕೋರ್ಟ್ 7 ಜನ ನ್ಯಾಯಾಧೀಶರ ಪೀಠ ತಾ. 01–08–2024ರಂದು ಐತಿಹಾಸಿಕ ತೀರ್ಪು ನೀಡಿತು. ಈ ತೀರ್ಪನ್ನು ಆಧರಿಸಿ ಗೌರವಾನ್ವಿತ ನ್ಯಾಯಮೂರ್ತಿ ಹೆಚ್.ಎನ್. ನಾಗಮೋಹನ್ ದಾಸ್ ಆಯೋಗ ಸರ್ಕಾರಕ್ಕೆ ವರದಿ ಸಲ್ಲಿಸಿತು. ಈ ವರದಿಯನ್ನು ಪರಿಷ್ಕರಿಸಿ ರಾಜ್ಯ ಸರ್ಕಾರದ "ಸಚಿವ ಸಂಪುಟ" ಮಾದಿಗ ಮತ್ತು ಮಾದಿಗ ಸಂಬಂಧಿತ ಜಾತಿಗಳಿಗೆ ಶೇ.6, ಹೊಲೆಯ ಮತ್ತು ಹೊಲೆಯ ಸಂಬಂಧಿತ ಜಾತಿಗಳಿಗೆ ಶೇ 6 ಮತ್ತು ಬೋವಿ, ಕೊರಮ, ಕೊರಚ, ಲಮಾಣಿ ಹಾಗೂ 59 ಅಲೆಮಾರಿ ಜಾತಿಗಳಿಗೆ ಶೇ. 5 ಮೀಸಲಾತಿ ಕಲ್ಪಿಸಿ 3 ಗುಂಪುಗಳನ್ನಾಗಿಸಿ ವರ್ಗೀಕರಿಸಿದೆ.

ಗೌರವಾನ್ವಿತ ನ್ಯಾಯಮೂರ್ತಿ ಹೆಚ್.ಎನ್. ನಾಗಮೋಹನ್ ದಾಸ್ ಆಯೋಗ 59 ಅಲೆಮಾರಿ ಮತ್ತು ಅರೆ ಅಲೆಮಾರಿ ಜಾತಿಗಳು ಪ್ರವರ್ಗ–ಎ, ಶೇ.1 ರಷ್ಟು, ಪ್ರವರ್ಗ–ಸಿ, ಮಾದಿಗ ಮತ್ತು ಮಾದಿಗ ಸಂಬಂಧಿತ 18 ಪ್ರವರ್ಗ–ಬಿ, ಜಾತಿಗಳಿಗೆ ಶೇ.6, ಹೊಲೆಯ ಮತ್ತು ಹೊಲೆಯ ಸಂಬಂಧಿತ 17 ಜಾತಿಗಳಿಗೆ ಶೇ. 5, ಮತ್ತು ಬೋವಿ, ಕೊರಮ, ಕೊರಚ, ಲಮಾಣಿ ಜಾತಿಗಳಿಗೆ ಶೇ 4. ಹಾಗೂ ಎ.ಕೆ., ಎ.ಡಿ., ಮತ್ತು ಎಎ ಜಾತಿಗಳಿಗೆ ಶೇ. 1 ಮೀಸಲಾತಿ ಕಲ್ಪಿಸಲು ಸರ್ಕಾರಕ್ಕೆ ವರದಿ ಸಲ್ಲಿಸಿತು. ಗೌರವಾನ್ವಿತ ನ್ಯಾಯಮೂರ್ತಿ ಹೆಚ್.ಎನ್. ನಾಗಮೋಹನ್ ದಾಸ್ ವರದಿಯು ಸುಪ್ರೀಂ ಕೋರ್ಟ್ ನಿರ್ದೇಶನಕ್ಕೆ ಪೂರಕವಾಗಿತ್ತು. ಸುಪ್ರೀಂ ಕೋರ್ಟ್ ನಿರ್ದೇಶನದಂತೆ 101 ಪರಿಶಿಷ್ಟ ಜಾತಿಗಳಲ್ಲಿ ಹಿಂದುಳಿದಿರುವುದರಲ್ಲಿ ಹಿಂದುಳಿದಿರುವಿಕೆಯ ಡಾಟಾ (ಅಂಖಿಂ) ಸಂಗ್ರಹಿಸಿ ಸಲ್ಲಿಸಿದ್ದ ವರದಿಯನ್ನು ಸರ್ಕಾರ ಕಡೆಗಣಿಸಿದ ಹಾಗೂ ವರದಿಗೆ ಕವಡೆ ಕಾಸಿನ ಕಿಮ್ಮತ್ತು ನೀಡಿಲ್ಲ.

ಪ್ರಬಲ ಜಾತಿಗಳು ಬೀಸುವ ದೊಣ್ಣೆ ಏಟಿನಿಂದ ತಪ್ಪಿಸಿಕೊಳ್ಳಲು ಹಾಗೂ ರಾಜಕೀಯ ಲಾಭದ ಹಿನ್ನೆಲೆಯಲ್ಲಿ ವರ್ಗೀಕರಣ ಮಾಡಿದೆ. 59 ಅಲೆಮಾರಿ ಹಾಗೂ ಅರೆ ಅಲೆಮಾರಿ ಜಾತಿಗಳಿಗೆ ಈ ವರ್ಗೀಕರಣ ಮರಣ ಶಾಸನವಾಗಿ ಪರಿಣಮಿಸಿದೆ. 59 ಅಲೆಮಾರಿ ಹಾಗೂ ಅರೆ ಅಲೆಮಾರಿ ಜಾತಿಗಳು ತೀರ ಹಿಂದುಳಿದಿದ್ದು ಆರ್ಥಿಕ, ಸಾಮಾಜಿಕ. ಶೈಕ್ಷಣಿಕ ಔದ್ಯೋಗಿಕ ಮತ್ತು ರಾಜಕೀಯವಾಗಿ ಮುಂದುವರೆದಿರುವ ಬೋವಿ, ಜಾತಿಗಳೊಟ್ಟಿಗೆ ಅಲೆಮಾರಿಗಳನ್ನು ಸೇರಿಸಿ ವರ್ಗೀಕರಿಸಿರುವುದು ಉಲ್ಲಂಘನೆಯಾಗಿರುತ್ತದೆ ಹಾಗೂ ಸಾಮಾಜಿಕ ನ್ಯಾಯ–ಕ್ಕೆ ವ್ಯತಿರಿಕ್ತವಾಗಿದೆ. ಲಮಾಣಿ, ಕೊರಮ, ಕೊರಚ, ಸ್ಪೃಶ್ಯ ಸುಪ್ರೀಂ ಕೋರ್ಟ್ ತೀರ್ಪಿನ

ಅಷ್ಟೇ ಅಲ್ಲದೆ ಎ.ಕೆ., ಎ.ಡಿ., ಎ.ಎ. ಮೂಲ ಜಾತಿಗಳನ್ನು ಸಮರ್ಪಕವಾಗಿ ಗುರುತಿಸದೆ ವರ್ಗೀಕರಿಸಿರುವುದು ಹಾಸ್ಯಸ್ಪದವಾಗಿದೆ. ಸರ್ಕಾರದ ಬಡವರ ವಿರೋಧಿ ಕ್ರಮವನ್ನು ಪ್ರತಿಭಟಿಸಿ 59 ಅಲೆಮಾರಿ ಜಾತಿಗಳು ಬೆಂಗಳೂರು ನಗರದ ಫ್ರೀಡಂ ಪಾರ್ಕ್ ಪ್ರತಿಭಟನೆ ನಡೆಸುತ್ತಿದ್ದರೂ ಸಹ ಗಮನಿಸದೆ ನಿರ್ಲಕ್ಷಿಸಿದೆ. ಆದ್ದರಿಂದ 59 ಅಲೆಮಾರಿ ಜಾತಿಗಳಿಗೆ ಪ್ರತ್ಯೇಕ ಶೇ.1 ರಷ್ಟು ಮೀಸಲಾತಿ ಕಲ್ಪಿಸಲು ಒತ್ತಾಯಿಸಿದೆ. ಅಲ್ಲದೆ ಪರಿಶಿಷ್ಟ ಜಾತಿ, ಪ.ವರ್ಗದ ವಿವಿಧ ಹಕ್ಕೊತ್ತಾಯಗಳನ್ನು ಈ ಕೆಳಕಂಡಂತೆ ಪಟ್ಟಿ ಮಾಡಿ ನ್ಯಾಯಕ್ಕೆ ಆಗ್ರಹಿಸಿ ರಾಜ್ಯಾದ್ಯಂತ 31 ಜಿಲ್ಲೆಗಳಲ್ಲಿಯೂ ದ.ಸಂ.ಸ. ಹಾಗೂ ಆರ್.ಪಿ.ಐ.(ಬಿ), ಬೃಹತ್ ಪ್ರತಿಭಟನೆ ನಡೆಸಿ ಈ ಮನವಿ ಸಲ್ಲಿಸಿದೆ. ಕೂಡಲೇ ಸರ್ಕಾರ ನಮ್ಮ ಎಲ್ಲಾ ಹಕ್ಕೊತ್ತಾಯಗಳನ್ನು ಈಡೇರಿಸಲು ಒತ್ತಾಯಿಸಿದೆ. ಎಂದು ಮನವಿಯಲ್ಲಿ ತಿಳಿಸಿದ್ದಾರೆ. ಜಿಲ್ಲಾಧ್ಯಕ್ಷ ಜಗನ್ನಾಥ ಎಸ್. ಬೀಜನಳ್ಳಿಕರ್, ವಿಭಾಗಿ ಕಾರ್ಯಧ್ಯಕ್ಷ ಹಂಪಣ್ಣ ಹುಳಾಗಡ್ಡಿ, ಜಿಲ್ಲಾ ಉಪಾಧ್ಯಕ್ಷ ಚಂದ್ರಕಾಂತ ಡಿ ಕೋಲಕುಂದಾ, ತಾಲೂಕ ಉಪಾಧ್ಯಕ್ಷ ನರಸಪ್ಪ ಕಾಮರಡಗಿ, ಮಲ್ಲಿಕಾರ್ಜುನ ತಾರಫೈಲ್, ಬಸವರಾಜ ಬಿಲಗುಂದಿ, ಆಂಜನೇಯ ಆಲೂರ ಇದ್ದರು.

## ಆರೋಪಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲು ಮನವಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಮಾಡಮಗೇರಿ ಗ್ರಾಮ ಪಂಚಾಯಿತಿಯ ಪಿಡಿಓ ಜಯಗೌಡ ಸಿದಗೌಡ ಪಾಟೀಲ ಅವರ ಮೇಲೆ ಹಲ್ಲೆ ಮಾಡಿ, ಸರ್ಕಾರಿ ಕರ್ತವ್ಯಕ್ಕೆ ಅಡ್ಡಿಪಡಿಸಿದ ಆರೋಪಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಹಾಗೂ ಗೂಂಡಾ ಕಾಯ್ದೆ (Goonda Act) ಅಡಿಯಲ್ಲಿ ರೌಡಿ ಶೀಟರ್ ತೆರೆಯಬೇಕೆಂದು ಕರ್ನಾಟಕ ರಾಜ್ಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ (ಬಿ–ಗ್ರೇಡ್) ಹುದ್ದೆ ಉನ್ನತೀಕರಣ ಸಂಘ (ರಿ) ಬೆಂಗಳೂರು ವತಿಯಿಂದ ತಾಲ್ಲೂಕು ಪಂಚಾಯತಿ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ರಾಜ್ಯ ನಿದೇಶಕಿ ಕು.

ರಾಜೇಶ್ವರಿ ಸಾಹು, ಪಿಡಿಓ ಸುಧಾರಾಣಿ ಧಂದೆ, ಕವಿತಾ ಕಾಗೆ, ಸುನೀತಾ ಶೃಂಗೇರಿ, ಭಾರತಿ ಮಣೂರೆ, ರಮೇಶ, ವಾಸೀಮ್ ಪಟೇಲ್, ಭೋರಮ್ಮಾ, ಮಹಾನಂದ, ಅಮರ ಎಕಲುರೆ, ರಮೇಶ ರಾಜಾಪೂರ, ಬಂಡಪ್ಪ ಧನ್ನಿ, ಸಿದ್ರಾಮ ಚಿಂಚೂಳಿ, ಶಿವಾನಂದ, ಸುರೇಖಾ, ಗಾಯತ್ರಿ ಸೇರಿದಂತೆ ಇತರರು ಇದ್ದರು.

## ಕೇಂದ್ರ ಕಾರಾಗೃಹದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.08– ಕಲಬುರಗಿ ಕೇಂದ್ರ ಕಾರಾಗೃಹದ ಒಳಾವರಣದಲ್ಲಿ ಮಂಗಳವಾರ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸಲಾಯಿತು.


ಜಯಂತಿ ಅಂಗವಾಗಿ ಈ ಸಂಸ್ಥೆಯ ಮುಖ್ಯಸ್ಥರಾದ ಡಾ॥ ಅನಿತಾ ಆರ್. ರವರು ಮಹರ್ಷಿ ವಾಲ್ಮೀಕಿರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಪೂಜೆ ಸಲ್ಲಿಸಿದರು. ಈ ಸಂಸ್ಥೆಯ ಸಹಾಯಕ ಅಧೀಕ್ಷಕ ಚನ್ನಪ್ಪ, ಸಂಸ್ಥೆಯ ಜೈಲರ್‌ಗಳಾದ ಸುನಂದ, ಸಾಗರ ಪಾಟೀಲ, ಶ್ರೀಮಂತಗೌಡ ಪಾಟೀಲ, ಶಾಮ ಬಿದ್ರಿ ಹಾಗೂ ಕಾರಾಗೃಹದ ಲಿಪಿಕ/ ಕಾರ್ಯನಿರ್ವಾಹಕ ಅಧಿಕಾರಿ/ಸಿಬ್ಬಂದಿಗಳು ಉಪಸ್ಥಿತರಿದ್ದರು.

ಶ್ರೀ. ಮಹರ್ಷಿ ವಾಲ್ಮೀಕಿ ಜಯಂತಿ ಪ್ರಯುಕ್ತ ಕಾರಾಗೃಹದಲ್ಲಿ ಬಂದಿಗಳಿಂದ ಭಜನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಈ ಸಂಸ್ಥೆಯ ಶಿಕ್ಷಕರಾದ ನಾಗರಾಜ ಮುಲಗೆ ಕಾರ್ಯಕ್ರಮ ನಿರೂಪಿಸಿದರು.

## ಸಿಂಧನಕೇರಾ ಗ್ರಾಮದ ಪಕ್ಕದಲ್ಲಿರುವ ತಾಲ್ಲೂಕು ಮಟ್ಟದ ತ್ಯಾಜ್ಯ ವಿಲೇವಾರಿ ಘಟಕ ಸ್ಥಳಾಂತರಿಸಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ತಾಲ್ಲೂಕಿನ ಸಿಂಧನಕೇರಾ ಗ್ರಾಮದ ಪಕ್ಕದಲ್ಲಿರುವ ತಾಲ್ಲೂಕು ಮಟ್ಟದ ತ್ಯಾಜ್ಯ ವಿಲೇವಾರಿ ಘಟಕದಿಂದ ಉಂಟಾಗುತ್ತಿರುವ ಮಾಲಿನ್ಯ ಮತ್ತು ಆರೋಗ್ಯ ಸಮಸ್ಯೆಗಳ ಕುರಿತು ದೂರು ಹಾಗೂ ಘಟಕವನ್ನು ಪರವಾನಗಿ ರದ್ದುಗೊಳಿಸುವ ಡಿಸೆಂಬರ್–2025 ರಂದು ರಿನಿವಲ್ ಇರುವುದರಿಂದ ರಿನಿವಲ್ ಮಾಡದಿರಲು ಕರ್ನಾಟಕ ಪರಿಸರ ಮಾಲಿನ್ಯ ನಿಂತ್ರಣ ಮಂಡಳಿ ಇವರಿಗೆ ಸಲ್ಲಿಸಿದ ಮನವಿ ಪತ್ರದಲ್ಲಿ ಆಶ್ರಯ ದೀಪ ಚಾರಿಟೇಬಲ್ ಟ್ರಸ್ಟ್ (ರಿ) ಅಧ್ಯಕ್ಷ ಭೀಮರೆಡ್ಡಿ ಎಸ್.ಸಿಂಧನಕೇರಾ ರವರು ವಿನಂತಿಸಿದ್ದಾರೆ.



ಕಳೆದ ಸುಮಾರು ಎರಡು ವರ್ಷಗಳಿಂದ ಸಿಂಧನಕೇರಾ ಗ್ರಾಮದ ಪಕ್ಕದಲ್ಲಿ ಆರೋಗ್ಯ ಮತ್ತು ಪರಿಸರಕ್ಕೆ ಹಾನಿ ಉಂಟಾಗುತ್ತಿದೆ. ಉದಾಹರಣೆಗೆ ಆನೆಕಾಲು ರೋಗ, ಜನರಿಗೆ ಧೃಢಪಟ್ಟ ಪ್ರಕರಣಗಳು, ಡೆಂಘುಜ್ವರ, ಮಲೇರಿಯಾ, ಜನರು ಬಾಧಿತರಾಗಿದ್ದಾರೆ, ಗ್ರಾಮಸ್ಥರಿಗೆ ಚರ್ಮರೋಗಗಳು ಹರಡುತ್ತಿವೆ, ಕುಡಿಯುವ ನೀರಿನಲ್ಲಿ ಕಸ ಮತ್ತು ವಿಷಕಾರಿ ಅಂಶಗಳು ಸೇರಿ ಹೊಟ್ಟೆನೋವು ಚರ್ಮದ ಸಮಸ್ಯೆ ಉಸಿರಾಟ ತೊಂದರೆಗಳು ಕೂಡ ಕಾಣಿಸಿಕೊಳ್ಳುತ್ತಿವೆ, ಸಾಯಂಕಾಲ ಹೊಗೆ, ಗರ್ಭದಿಂದ ಉಸಿರಾಲು ತೊಂದರೆ, ಊಟ ಮಾಡುವಾಗಲೂ ನೋಣಗಳು, ಸೊಳ್ಳೆಗಳ ಕಾಟ, ಸಣ್ಣ ಮಕ್ಕಳಲ್ಲಿ ನರ ದೌರ್ಬಲ್ಯ, ಕಂಡುಬರುತ್ತಿವೆ ಇವುಗಳ ಕಾರಣದಿಂದ ಗ್ರಾಮವು ಸಂಪೂರ್ಣ ಅಸ್ವಚ್ಛತೆ ಹಾಗೂ ಆರೋಗ್ಯಕ್ಕೆ ಅಪಾಯಕಾರಿ ವಾತಾವರಣಕ್ಕೆ ತುತ್ತಾಗಿದೆ. ಕಳೆದ 20 ವರ್ಷಗಳಿಂದ ಗ್ರಾಮಸ್ಥರು ಈ ಸಮಸ್ಯೆಗಳ ಬಗ್ಗೆ ಹೋರಾಟ ನಡೆಸಿದರೂ ಯಾವುದೇ ಕ್ರಮ ಕೈಗೊಳ್ಳಲಿಲ್ಲ. ಈ ಹಿನ್ನಲೆಯಲ್ಲಿ ಗ್ರಾಮಸ್ಥರ ಪರವಾಗಿ ವಿನಂತಿ ಮಾಡಲಾಗಿತ್ತು. ಸಿಂಧನಕೇರಾ ಗ್ರಾಮದ ಪಕ್ಕದಲ್ಲಿರುವ ತ್ಯಾಜ್ಯ ವಿಲೇವಾರಿ ಘಟಕದ ರಿನಿವಲ್ (ಪುನರ್ ನವಿಕರಣ) ಕೊಡದಂತೆ ತಡೆಯಬೇಕು ಹಾಗೂ ಪರವಾನಗಿ ರದ್ದುಗೊಳಿಸಬೇಕು, ತಕ್ಷಣ ಸ್ಥಳ ಪರಿಶೀಲನೆ ನಡೆಸಿ ಘಟಕವನ್ನು ಬೇರೆ ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲು ಆದೇಶ ನೀಡಬೇಕೆಂದು ಭೀಮರೆಡ್ಡಿ ಸಿಂಧನಕೇರಾರವರು ಕರ್ನಾಟಕ ಪರಿಸರ ಮಾಲಿನ್ಯ ನಿಂತ್ರಣ ಮಂಡಳಿ ಇವರಿಗೆ ಸಲ್ಲಿಸಿದ ಪತ್ರದಲ್ಲಿ ತಿಳಿಸಿದ್ದಾರೆ. ಗ್ರಾಮಸ್ಥ ಆರೋಗ್ಯ ಮತ್ತು ಪರಿಸರ ಹಿತ ದೃಷ್ಠಿಯಿಂದ ಶೀಘ್ರ ಕೈಗೊಳ್ಳಬೇಕು ಎಂದು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಉಪಾಧ್ಯಕ್ಷ ಅರವಿಂದ ಜೋಗಿರೆ, ಭೀಮಾರ್ಮಿ ಉಪಾಧ್ಯಕ್ಷ ಶೇಖ ಫಿರ್ದೋಸ್, ಸಾಮಾಜಿಕ ಕಾರ್ಯಕರ್ತ ಅನೀಲ ದೊಡ್ಡಿ, ಯುವರಾಜ್ ಎಸ್.ಐಹೊಳ್ಳಿ, ಮಲ್ಲೇಶ ಮಿತ್ರ ಉಪಸ್ಥಿತರಿದ್ದರು.

## ಜಿ.ಪಂ. ಕಚೇರಿಯಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.08– ಶ್ರೀ ಮಹರ್ಷಿ ವಾಲ್ಮೀಕಿ ಜಯಂತೋತ್ಸವ ಅಂಗವಾಗಿ ಕಲಬುರಗಿ ಜಿಲ್ಲಾ ಪಂಚಾಯಿತಿ ಕಚೇರಿಯಲ್ಲಿ ಬುಧವಾರ ಕಲಬುರಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಅವರು ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಡಿಎಸ್ ರವರಾದ ಲಕ್ಷ್ಮಣ ಶೃಂಗೇರಿ, ಡಿಆರ್‌ಡಿಎ ಪಿಡಿ ರಾದ ಜಗದೇವಪ್ಪ ಬಿ ಸೇರಿದಂತೆ ಜಿಲ್ಲಾ ಪಂಚಾಯತ್ ಅಧಿಕಾರಿಗಳು ಹಾಗು ಸಿಬ್ಬಂದಿ ವರ್ಗಗಳು ಉಪಸ್ಥಿತರಿದ್ದರು.

# ಬುಧೇರಾದಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿ ವತಿಯಿಂದ ಜಾಗೃತಿ ಅಭಿಯಾನ



ಬೀದರ.ಅ.08:ರಾಜ್ಯಸರ್ಕಾರದ ಜನಪರ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ *ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ* ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚ ಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು ಬೀದರ ದಕ್ಷಿಣ ಕ್ಷೇತ್ರದ ಚಟನಳ್ಳಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಬುಧೇರಾ ಗ್ರಾಮದಲ್ಲಿ ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ,

ಗೃಹ ಲಕ್ಷ್ಮಿ ಯೋಜನೆ: ಹಲವು ಮಹಿಳೆಯರಿಗೆ ಬ್ಯಾಂಕ್ ಖಾತೆ ಹಾಗೂ ಆಧಾರ್ ಜೋಡಣೆ (ಓಕಅಖ) ಸಮಸ್ಯೆಯಿಂದ ಹಣ ಜಮಾವಣೆಯಾಗಿರಲಿಲ್ಲ. ಅಂತಹ ಪ್ರಕರಣಗಳನ್ನು ಸಮಿತಿ ಗುರುತಿಸಿ, ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸಮಸ್ಯೆ ಬಗೆಹರಿಸುತ್ತಿದೆ.

ಅನ್ನಭಾಗ್ಯ ಯೋಜನೆ:ಪಡಿತರ ಚೀಟಿ ತಿದ್ದುಪಡಿಗೆ ಸಂಬಂಧಿಸಿದಂತೆ ಗ್ರಾಮ ಒನ್ ಕೇಂದ್ರಗಳಲ್ಲಿ ಎದುರಾಗುತ್ತಿದ್ದ ತೊಂದರೆಗಳನ್ನು ನಿವಾರಿಸುವಲ್ಲಿ ತಂಡವು ಸಕ್ರಿಯವಾಗಿ ಕೆಲಸ ಮಾಡಿದೆ. ಅಲ್ಲದೆ, ಕಳ್ಳ ಸಾಗಣಿಕೆಯಂತಹ ಪ್ರಕರಣಗಳ ಬಗ್ಗೆಯೂ ನಿಗಾ ವಹಿಸಿ, ಅಧಿಕಾರಿಗಳ ಗಮನಕ್ಕೆ ತರುತ್ತಿದೆ. ಮತ್ತು ಶಕ್ತಿ ಯೋಜನೆ, ಗೃಹ ಜ್ಯೋತಿ, ಯುವನಿಧಿ, ಯೋಜನಗಳ ಮಹತ್ವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು. ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಉದಯಕುಮಾರ ಚಟನಳ್ಳಿ, ಶಿವಕುಮಾರ ಕುತ್ತಾಬಬಾದ್, ಸೇವಾದಳ್ ಅಧ್ಯಕ್ಷ ಮೋಹಿನ್ ಪಠಾಣ್, ಮುಖಂಡರಾದ ರಾಜಕುಮಾರ ಸಜ್ಜನಶೇಟಿ, ಮಹಮ್ಮದ್ ಫಯಿಸಲ್, ಮುಜೀಬುದ್ದಿನ್, ಸುಭಾಷ್, ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.

# ಶಿಕ್ಷಣದ ಉದ್ದೇಶ ಸಮಾಜದ ಕಲ್ಯಾಣ : ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಅ 08 :ಶಿಕ್ಷಣದ ಉದ್ದೇಶ ಕೇವಲ ಜ್ಞಾನವನ್ನು ಗಳಿಸುವುದಲ್ಲ, ಅದನ್ನು ಸಮಾಜದ ಕಲ್ಯಾಣಕ್ಕಾಗಿ ಉಪಯೋಗಿಸುವುದಾಗಿದೆ. ಹಾಗಾಗಿ ವಿದ್ಯಾರ್ಥಿಗಳು ಶಿಕ್ಷಣದಲ್ಲಿ ಪಡೆಯುವ ಜ್ಞಾನವನ್ನು ಉತ್ತಮ ಸಮಾಜ ನಿರ್ಮಾಣ ಹಾಗೂ ದೇಶದ ಅಭಿವೃದ್ಧಿಗೆ ಬಳಸಿಕೊಳ್ಳಬೇಕು ಎಂದು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಕರೆನೀಡಿದರು. ಬೆಂಗಳೂರು ವಿಶ್ವವಿದ್ಯಾನಿಲಯದ 60ನೇ ಘಟಿಕೋತ್ಸವದ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು. ಈ ಘಟಿಕೋತ್ಸವವು ಶೈಕ್ಷಣಿಕ ಸಾಧನೆ,




ಸಂಶೋಧನೆ ಮತ್ತು ಸಾಮಾಜಿಕ ಸೇವೆಯ ಆರು ದಶಕಗಳ ಪಯಣವನ್ನು ಸ್ಮರಿಸುತ್ತದೆ ಎಂದು ಹೇಳಿದರು.

ರಾಜ್ಯಪಾಲರು ವಿಶ್ವವಿದ್ಯಾಲಯದ ಶೈಕ್ಷಣಿಕ ಪರಂಪರೆಯನ್ನು ಶ್ಲಾಘಿಸಿ, "ಜ್ಞಾನಂ ವಿಜ್ಞಾನಸಹಿತಂ" ಎಂಬ ಧ್ಯೇಯವಾಕ್ಯದ ಅರ್ಥವನ್ನು ಬದುಕಿನಲ್ಲಿ ಅಳವಡಿಸಿಕೊಂಡು, ವಿಶ್ವವಿದ್ಯಾನಿಲಯವು ಶ್ರೇಷ್ಠತೆಯ ದಿಕ್ಕಿನಲ್ಲಿ ನಿರಂತರವಾಗಿ ಮುಂದುವರಿಯುತ್ತಿದೆ. ವಿಶ್ವವಿದ್ಯಾಲಯವು ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಸಂಸ್ಥೆಗಳೊಂದಿಗೆ ಸಹಕಾರದ ಮೂಲಕ ಉನ್ನತ ಶಿಕ್ಷಣದಲ್ಲಿ ಶ್ರೇಷ್ಠತೆಯನ್ನು ಸಾಧಿಸಿರುವುದು ಹೆಮ್ಮೆಯಾಗಿದೆ ಎಂದರು.

ರಾಜ್ಯಪಾಲರು ಗೌರವ ಪದವಿ ಪುರಸ್ಕೃತರನ್ನು ಅಭಿನಂದಿಸಿ, "ನೀವು ಸಮಾಜ ಮತ್ತು ರಾಷ್ಟ್ರದ ಹಿತಕ್ಕಾಗಿ ಸೇವೆಯನ್ನು ಮುಂದುವರಿಸಬೇಕು. 60ನೇ ಘಟಿಕೋತ್ಸವದ ಸಂದರ್ಭದಲ್ಲಿ ಪದವಿ ಪಡೆದ ವಿದ್ಯಾರ್ಥಿಗಳಿಗೆ ಈಗ ನೀವು ಶಿಕ್ಷಣದಿಂದ ಅನುಭವ ಮತ್ತು ಕ್ರಿಯೆಯ ಹಾದಿಗೆ ಪ್ರವೇಶಿಸುತ್ತಿದ್ದೀರಿ. ಹೊಸ ಸವಾಲುಗಳು ಮತ್ತು ಅವಕಾಶಗಳನ್ನು ಎದುರಿಸಲು ನಿಮ್ಮಲ್ಲಿ ಆತ್ಮವಿಶ್ವಾಸ ಇರಲಿ, ಎಂದು ಪ್ರೇರೇಪಿಸಿದರು.

ಸ್ವಾಮಿ ವಿವೇಕಾನಂದರ "ಎದ್ದೇಳಿ, ಎಚ್ಚರಗೊಳ್ಳಿ, ಗುರಿ ತಲುಪುವವರೆಗೆ ನಿಲ್ಲಬೇಡಿ" ಎಂಬ ಮಾತುಗಳನ್ನು ಉಲ್ಲೇಖಿಸಿ, ರಾಜ್ಯಪಾಲರು ವಿದ್ಯಾರ್ಥಿಗಳಿಗೆ ದೇಶದ ' ಅಭಿವೃದ್ಧಿಗೆ ತಮ್ಮ ಜ್ಞಾನ ಮತ್ತು ಕೌಶಲ್ಯಗಳನ್ನು ಬಳಸಿಕೊಳ್ಳಿ ಎಂದ ಅವರು, ಡಾ. ಸರ್ವಪಳ್ಳಿ ರಾಧಾಕೃಷ್ಣನ್ ಅವರ 'ರಾಷ್ಟ್ರಗಳು ಶಿಕ್ಷಣ ಸಂಸ್ಥೆಗಳಲ್ಲಿ ನಿರ್ಮಾಣವಾಗುತ್ತವೆ' ಎಂಬ ಚಿಂತನೆಯನ್ನು ಉಲ್ಲೇಖಿಸಿ, ರಾಜ್ಯಪಾಲರು

ವಿಶ್ವವಿದ್ಯಾಲಯಗಳನ್ನು ಶ್ರೇಷ್ಠತೆಯ ಕೇಂದ್ರಗಳನ್ನಾಗಿ ಮಾಡುವ ಅಗತ್ಯವಿದೆ ಎಂದು ಹೇಳಿದರು. ಮೇಕ್ ಇನ್ ಇಂಡಿಯಾ, ಡಿಜಿಟಲ್ ಇಂಡಿಂ–ಯಾ, ಸ್ಟಾರ್ಟಅಪ್ ಇಂಡಿಯಾ, ಸ್ಟ್ಯಾಂಡ್ ಅಪ್ ಇಂಡಿಯಾ, ವೆಂಚರ್ ಕ್ಯಾಪಿಟಲ್ ಫಂಡ್ ಯೋಜನೆಗಳ ಅವಕಾಶಗಳನ್ನು ಬಳಸಿಕೊಂಡು ನವ ಭಾರತ ಮತ್ತು ಸ್ವಾವಲಂಬಿ ಭಾರತ ನಿರ್ಮಾಣಕ್ಕೆ ಮುನ್ನಡೆಸಬೇಕು ಎಂದು ಕರೆ ನೀಡಿದರು.

ರಾಜ್ಯಪಾಲರು ಶಿಕ್ಷಕರು ಮತ್ತು ಪೊ?ಷಕರ ಸೇವೆಯನ್ನು ಪ್ರಶಂಸಿಸಿ, "ವಿದ್ಯಾರ್ಥಿಗಳ ಯಶಸ್ಸು ಅವರ ಮಾರ್ಗದರ್ಶನದ ಪ್ರತಿಫಲ," ಎಂದು ಹೇಳಿದರು. ವಿಶ್ವವಿದ್ಯಾನಿಲಯಗಳು ಸಂಶೋಧನೆ,

ನಾವೀನ್ಯತೆ, ಸ್ಥಳೀಯ ಭಾಷೆಗಳ ಮೂಲಕ ಉನ್ನತ ಶಿಕ್ಷಣ ಪ್ರಚಾರ, ಪರಿಸರ ಸಂರಕ್ಷಣೆ ಮತ್ತು ಸ್ವಚ್ಛತಾ ಅಭಿಯಾನಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಜ್ಞಾನ, ಸೇವೆ, ಸತ್ಯ ಮತ್ತು ದೇಶಭಕ್ತಿಯ ಮೌಲ್ಯಗಳಿಂದ ನಿಮ್ಮ ಜೀವನ ಅರ್ಥಪೂರ್ಣವಾಗಲಿ,

ಎಂದು ಹಾರೈಸಿದರು. ಸಮಾರಂಭದಲ್ಲಿ ಮುಖ್ಯ ಅತಿಥಿಗಳಾದ ಡಾ. ಪ್ರಹ್ಲಾದ್ ರಾಮರಾವ್, ಕುಲಪತಿಗಳಾದ ಡಾ. ಜಯಕರ್ ಶೆಟ್ಟಿ ಮುಂತಾದ ಗಣ್ಯರು ಹಾಜರಿದ್ದರು.

## ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ 2026

# ಆಯಾ ತಾಲ್ಲೂಕು ಕೇಂದ್ರಗಳ ಚುನಾವಣೆ ಶಾಖೆಯಲ್ಲಿ ಸಲಹಾ ಕೇಂದ್ರ ಸ್ಥಾಪನೆ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.08 : ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಸದಸ್ಯರ ಪದಾವಧಿಯು ದಿನಾಂಕ:11–11–2026ಕ್ಕೆ ಮುಕ್ತಾಯಗೊಳ್ಳಲಿದೆ. ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ

2026ಕ್ಕೆ ಸಂಬಂಧಿಸಿದಂತೆ ಸ್ವೀಕೃತವಾಗುವ ದೂರು ಹಾಗೂ ಮತದಾರರ ಮಾಹಿತಿಗಾಗಿ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಚುನಾವಣೆ ಶಾಖೆಯಲ್ಲಿ ಹಾಗೂ ಆಯಾ ತಾಲ್ಲೂಕು ಕೇಂದ್ರಗಳ ಚುನಾವಣೆ ಶಾಖೆಯಲ್ಲಿ ಮತದಾರರ ಮಾಹಿತಿ ಮತ್ತು ಸಲಹಾ ಕೇಂದ್ರ (Voters helpdesk) ನೇಮಿಸಲಾಗಿದೆ. ಈ ಸಲಹಾ ಕೇಂದ್ರದ ದೂರವಾಣಿ ಸಂಖ್ಯೆ: 08482–226290 ಇರುತ್ತದೆ. ಆದ್ದರಿಂದ ಸಾರ್ವಜನಿಕರು ಈ ಸಲಹಾ ಕೇಂದ್ರ ತಂಡಕ್ಕೆ ಸಂಪರ್ಕಿಸಿ ಮತದಾರರ ನೋಂದಣಿ ಮತ್ತು ಚುನಾವಣೆಗೆ ಕುರಿತಾದ ಮಾಹಿತಿ ಪಡೆಯಬಹುದಾಗಿದೆ. ಯಾವುದೇ ದೂರುಗಳಿದ್ದಲ್ಲಿ ದಾಖಲಿಸಬಹುದಾಗಿದೆ ಎಂದು ಸಹಾಯಕ ಮತದಾರರ ನೋಂದಣಾಧಿಕರಿ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರ ಹಾಗೂ ಜಿಲ್ಲಾಧಿಕಾರಿಗಳು ಬೀದರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದಿನಾಂಕ:01.11.2025 ಕ್ಕೆ ಅನ್ವಯಿಸುವಂತೆ ಮತದಾರರ ಪಟ್ಟಿಯನ್ನು ಸಿದ್ದಪಡಿಸಲು ವೇಳಾಪಟ್ಟಿಯನ್ನು ಹೊರಡಿಸಿರುತ್ತದೆ. ಅದರನ್ವಯ ದಿನಾಂಕ:25.11.2025 ರಂದು ಕರಡು ಮತದಾರರ ಪಟ್ಟಿ ಪ್ರಚುರಪಡಿಸಿ ದಿನಾಂಕ:25.11.2025 ರಿಂದ 10.12.2025ರ ವರೆಗೆ ಆಕ್ಷೇಪಣೆಗಳನ್ನು ಅಹ್ವಾನಿಸಿ ದಿನಾಂಕ:30.12.2025 ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಚೂರಪಡಿಸಲಾಗುತ್ತದೆ. ಯಾವುದೇ ಒಂದು ಚುನಾವಣೆಯು ಪಾರದರ್ಶಕವಾಗಿ, ನ್ಯಾಯಸಮ್ಮತವಾಗಿ, ಯಾವುದೇ ಅಹಿತಕರ ಘಟನೆಗಳು ಜರುಗದೇ ಶಾಂತಿಯುತವಾಗಿ ಮುಕ್ತಾಯಗೊಳ್ಳಬೇಕಾದಲ್ಲಿ ಪ್ರಪ್ರಥಮವಾಗಿ ದೋಷರಹಿತವಾದಂತಹ ಮತದಾರರ ಪಟ್ಟಿ ಸಿದ್ಧಪಡಿಸಿಕೊಳ್ಳುವುದು ಅತ್ಯವಶ್ಯಕವಾಗಿರುತ್ತದೆ. ಈ ರೀತಿ ಮತದಾರರ ಪಟ್ಟಿ ಸಿದ್ಧಪಡಿಸುವಲ್ಲಿ ಅರ್ಹ ಮತದಾರರನ್ನು ಗುರುತಿಸುವಲ್ಲಿ ಆಯೋಗದ ಮೇಲ್ಕಂಡ ವೇಳಾಪಟ್ಟಿಯನ್ನು ಪ್ರಚುರಪಡಿಸಿ ಅರ್ಹರನ್ನು ನೋಂದಾಯಿಸಿ ಸಕ್ರೀಯ ಚುನಾವಣಾ ವ್ಯವಸ್ಥೆಯಲ್ಲಿ ಪಾಲ್ಗೊಳ್ಳುವಲ್ಲಿ ಮುಂಬರುವ ಚುನಾವಣೆಗಳಲ್ಲಿ ತಮ್ಮ ಅತ್ಯಮೂಲ್ಯವಾದ ಮತವನ್ನು ಚಲಾಯಿಸಿ ಅರ್ಹ ಅಭ್ಯರ್ಥಿಯನ್ನು ಆರಿಸಿ ಸುಭದ್ರ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಮತದಾರರ ಪ್ರಕ್ರೀಯೆಯು ಅತ್ಯಂತ ಮಹತ್ವ ಪೂರ್ಣ ಹಾಗೂ ಜವಾಬ್ದಾರಿಯುತ ಪ್ರಕ್ರೀಯೆಯಾಗಿರುತ್ತದೆ. ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಗಳನ್ವಯ ಹೊಸದಾಗಿ ಮತದಾರರ ಪಟ್ಟಿಯನ್ನು ಸಿದ್ಧಪಡಿಸಬೇಕಾಗಿರುವುದರಿಂದ ಈ ಕಾರ್ಯಕ್ಕಾಗಿ ಅರ್ಹ ಮತದಾರರು ನೋಂದಣಿಗಾಗಿ ಮಾಹಿತಿ ಕೋರಿದ್ದಲ್ಲಿ ಸೂಕ್ತ ಮಾಹಿತಿಯನ್ನು ನೀಡಿ, ಅವರ ಹೆಸರನ್ನು ನೋಂದಾಯಿಸಲು ಅಲ್ಲದೇ ಈಗಾಗಲೇ ನೋಂದಣಿಯಾಗಿದ್ದಲ್ಲಿ ಅವರ ಮತದಾರರ ಪಟ್ಟಿಯ ಭಾಗ ಸಂಖ್ಯೆ ಹಾಗೂ ಕ್ರಮ ಸಂಖ್ಯೆಯ ಮಾಹಿತಿ ನೀಡುವುದು ಇದನ್ನು ಹೊರತುಪಡಿಸಿಯು ಸಹ ಮತದಾರರ ನೋಂದಣಿ ಪ್ರಕ್ರೀಯೆ ಪ್ರಾರಂಭದಿಂದ ಈ ಚುನಾವಣೆಯ ಫಲಿತಾಂಶ ಘೋಷಣೆಯಾಗುವವರೆಗೂ ಲಿಖಿತವಾಗಿ, ಮೌಖಿಕವಾಗಿ ಹಾಗೂ ದೂರವಾಣಿ ಮುಖಾಂತರ ಸ್ವೀಕೃತವಾಗುವಂತಹ ದೂರುಗಳ ಮೇಲೆ ಸಹಾಯಕ ಮತದಾರರ ನೋಂದಣಾಧಿಕಾರಿಗಳು ಹಾಗೂ ಸಹಾಯಕ ಚುನಾವಣಾಧಿಕಾರಿಗಳ ನಿರ್ದೇಶನದ ಮೇರೆಗೆ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಚುನಾವಣೆ ಶಾಖೆಯಲ್ಲಿ ಹಾಗೂ ಆಯಾ ತಾಲ್ಲೂಕು ಕೇಂದ್ರಗಳ ಚುನಾವಣೆ ಶಾಖೆಯಲ್ಲಿ ಮತದಾರರ ಮಾಹಿತಿ ಮತ್ತು ಸಲಹಾ ಕೇಂದ್ರ (Voters helpdesk) ನೇಮಿಸಲಾಗಿದೆ.

ಜಿಲ್ಲಾಧಿಕರಿಗಳ ಕಛೇರಿ ಚುನಾವಣೆ ಶಾಖೆ ಬೀದರ: ಮಲಶೇಟ್ಟಿ ಚಿದ್ರೆ (08482–226290), (9900218488), ಪುರಂ ಶಾಂತನು ಶಿರಸ್ತೇದಾರರು (9916333950), ಶಿವಕುಮಾರ ಬೀದೆ ಮೋ.ದ.ಸ. (7259639007).

ತಹಸೀಲ ಕಛೇರಿ ಚುನಾವಣೆ ಶಾಖೆ ಬೀದರ: ಪ್ರೇಮದಾಸ ಬೋರಾಳೆ ಶಿರಸ್ತೇದಾರರು (08482–226459), (9741089037), ಶಂಕರ ಚೌಹಾಣ ಶಿರಸ್ತೇದಾರರು (08482–226459), (8317348038). ಸುನೀಲ್ ಎ.ದ.ಸ (8310404278). ತಹಸೀಲ ಕಛೇರಿ ಚುನಾವಣೆ ಶಾಖೆ ಔರಾದ (ಬಿ): ವೆಂಕಟೇಶ ಶಿರಸ್ತೇದಾರರು (08485–280024), (9538137844), ಪ್ರಭಾಕರ ಮೋ.ದ.ಸ. (9986719400). ತಹಸೀಲ ಕಛೇರಿ ಚುನಾವಣೆ ಶಾಖೆ ಕಮಲನಗರ: ಶಿವಾನಂದ ನವಾಡೆ ಶಿರಸ್ತೇದಾರರು (9008834904), ಶ್ರೀಕಾಂತ ಎ.ದ.ಸ (7349475717). ತಹಸೀಲ ಕಛೇರಿ ಚುನಾವಣೆ ಶಾಖೆ ಬಸವಕಲ್ಯಾಣ: ಅರುಣಕುಮಾರ ಶಿರಸ್ತೇದಾರರು (08481–250338), (9886589675). ಅರುಣಕುಮಾರ ಮೋ.ದ.ಸ (7795331327). ತಹಸೀಲ ಕಛೇರಿ ಚುನಾವಣೆ ಶಾಖೆ ಹುಲಸೂರ: ಸುನೀಲ್ ಸಜ್ಜನಶೆಟ್ಟಿ ಶಿರಸ್ತೇದಾರರ (9972894247), ಮಹೇಶ ಭೋಸ್ಲೆ ಮೋ.ದ.ಸ. (9449317201).

ತಹಸೀಲ ಕಛೇರಿ ಚುನಾವಣೆ ಶಾಖೆ ಹುಮನಾಬಾದ: ಮುನೇಶ್ವರಸ್ವಾಮಿ ಶಿರಸ್ತೇದಾರರು ತಹಸೀಲ್ ಕಛೇರಿ ಹುಮನಾಬಾದ (08483–270051), (9448543450), ವಸಂತ ಎ.ದ.ಸ. (8880556666).

ತಹಸೀಲ ಕಛೇರಿ ಚುನಾವಣೆ ಶಾಖೆ ಚಿಟಗುಪ್ಪಾ: ಸುಭಾಷ ಚಂದ್ರ ಶಿರಸ್ತೇದಾರರು ತಹಸೀಲ್ ಕಛೇರಿ ಚಿಟಗುಪ್ಪಾ (08482–277577), (9902977599), ಕರಬಸಪ್ಪಾ ಎ.ದ.ಸ (9019192284).

ತಹಸೀಲ ಕಛೇರಿ ಚುನಾವಣೆ ಶಾಖೆ ಭಾಲ್ಕಿ: ಗೋಪಾಲ ಹಿಪ್ಪರ್ಗಿ ಶಿರಸ್ತೇದಾರರು (08484–262218), (9986095678), ಕಲ್ಲಪ್ಪಾ ಎ.ದ.ಸ (7019730721). ಈ ಮೇಲಿನಂತೆ ನೇಮಕ ಮಾಡಲಾಗಿರುವಂತ ಮತದಾರರ ಮಾಹಿತಿ ಮತ್ತು ಸಲಹಾ ಕೇಂದ್ರ (Voters helpdesk) ವು ತಕ್ಷಣದಿಂದಲೇ ಕಾರ್ಯನಿರ್ವಹಿಸಿ ಲಿಖಿತವಾಗಿ / ಮೌಖಿಕವಾಗಿ / ದೂರವಾಣಿ ಮುಖಾಂತರ ಸ್ವೀಕೃತವಾಗುವಂತಹ ಎಲ್ಲಾ ರೀತಿಯ ಸಲಹೆ ಹಾಗೂ ದೂರುಗಳಿಗೆ ದಾಖಲಾಧಾರಿತವಾದ ವಹಿಯನ್ನು ನಿರ್ವಹಿಸಿ ನಿಯಮಾನುಸಾರ ವಿಲೇಗೊಳಿಸಿ ಕಾಲೋಚಿತಗೊಳಿಸಲು ಸೂಚಿಸಲಾಗಿದ್ದು ಸಾರ್ವಜನಿಕರು ಈ ತಂಡದ ಮುಖಾಂತರ ಈ ಮತದಾರರ ನೋಂದಣಿ ಹಾಗೂ ಚುನಾವಣೆ ಕುರಿತಾದ ಮಾಹಿತಿ ಹಾಗೂ ದೂರನ್ನು ದಾಖಲಿಸಬಹುದೆಂದು ಅವರು ತಿಳಿಸಿದ್ದಾರೆ.

# ಮಹರ್ಷಿ ವಾಲ್ಮೀಕಿ ಆದರ್ಶಗಳನ್ನು ಅಳವಡಿಸಿಕೊಳ್ಳಲು ಸಚಿವ ದರ್ಶನಾಪುರ ಕರೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಅ:8: ಆದಿಕವಿ ಮಹರ್ಷಿ ಶ್ರೀ ವಾಲ್ಮೀಕಿ ಅವರ ಆದರ್ಶಗಳನ್ನು ಅಳವಡಿಸಿಕೊಳ್ಳುವ ಮೂಲಕ ಬೇರೆಯವರ ಬಾಳಲ್ಲಿ ಬೆಳಕು ಮೂಡಿಸಬೇಕೆಂದು ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಹೇಳಿದರು.



ಜಿಲ್ಲಾಡಳಿತ, ಜಿ.ಪಂ, ನಗರಸಭೆ, ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಮಹರ್ಷಿ ಶ್ರೀ ವಾಲ್ಮೀಕಿ ಜಯಂತ್ಯೋತ್ಸವ ಸಮಿತಿ

ಸಂಯುಕ್ತಾಶ್ರಯದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಹರ್ಷಿ ಶ್ರೀ ವಾಲ್ಮೀಕಿ ಅವರು ರಾಮಾಯಣ ಬರೆಯುವ ಮೂಲಕ ಸರ್ವ ಕಾಲದ ಪೀಳಿಗೆಗೆ ಸನ್ಮಾರ್ಗದ ದಾರಿ ತೋರಿಸಿದ್ದಾರೆ. ಅವರು ಬರೆದ ಆ ಗ್ರಂಥ ಈಗಿನ ಸಮಾಜಕ್ಕೆ ದಾರಿದೀಪವಾಗಿದೆ ಎಂದು ಸಚಿವರು ಹೇಳಿದರು.

ಆದರ್ಶ, ಮೇರು ವ್ಯಕ್ತಿತ್ವದ ವ್ಯಕ್ತಿಗಳ ಜಯಂತಿ ಆಚರಿಸುವ ಉದ್ದೇಶವೆಂದರೇ ಅವರುಗಳು ಜೀವನದಲ್ಲಿ ಕಷ್ಟ ಪಟ್ಟು ಮಾಡಿದ ಸಾಧನೆಗಳು ಇಂದಿನ ವಿದ್ಯಾರ್ಥಿ, ಯುವಕರಿಗೆ ಗೊತ್ತಾಗಬೇಕೆಂಬ ಉತ್ತಮ ಕಲ್ಪನೆ ಇದೆ. ಅದನ್ನು ಎಲ್ಲರೂ ಅರ್ಥ ಮಾಡಿಕೊಂಡು ಪಾಲಿಸಬೇಕೆಂದು ಸಚಿವ ದರ್ಶನಾಪುರ ಹೇಳಿದರು. ಜೀವನದಲ್ಲಿ ಸಾಮಾಜಿಕ, ಧಾರ್ಮಿಕ, ರಾಜಕೀಯ ಹೀಗೆ ವಿವಿಧ ಕ್ಷೇತ್ರಗಳಲ್ಲಿ ಬೆಳೆಯಬೇಕೆಂದರೆ ಮುಖ್ಯವಾಗಿ ಶಿಕ್ಷಣ ಬೇಕು. ಅದನ್ನು ಎಲ್ಲರೂ ಪಡೆಯಬೇಕೆಂದರು.

ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ ಚಿಂಚನಸೂರ ಮಾತನಾಡಿದರು. ಅಧ್ಯಕ್ಷತೆ ವಹಿಸಿದ್ದ ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು, ಮಹರ್ಷಿ ವಾಲ್ಮೀಕಿ ಅವರು ಜೀವನದಲ್ಲಿ ಪರಿವರ್ತನೆ ಹೊಂದಿ ರಾಮಾಯಣ ಎಂಬ ಮಹಾಗ್ರಂಥ ರಚಿಸುವ ಮೂಲಕ ಜಗತ್ತಿಗೆ ದಾರ್ಶನಿಕರಾಗಿದ್ದಾರೆ. ಅವರ ಬದುಕೇ ಒಂದು ರೋಚಕವಾಗಿತ್ತು. ಅವರ ಆದರ್ಶಗಳು ಸಾರ್ವಕಾಲಿಕಕ್ಕೂ ಬೇಕು ಎಂದರು. ವಾಲ್ಮೀಕಿ ಸಮಾಜಕ್ಕೆ ತನ್ನದೇ ಆದ ಅಸ್ತಿತ್ವ, ಚರಿತ್ರೆ ಮತ್ತು ಇತಿಹಾಸವಿದೆ. ಸುರಪುರ ಸಂಸ್ಥಾನದ ದೊರೆಗಳು ಬ್ರೀಟಿಷರ ಹಾಗೂ ಮೊಗಲರ ವಿರುದ್ಧ ಹೋರಾಡಿ ಸೋಲಿಲ್ಲದ ಸರದಾರರೆಂದು ಅನಿಸಿಕೊಂಡಿದ್ದರು. ಶೂರರು, ಧೀರರ ವಂಶಸ್ಥರು ಎಂದು ಬಣ್ಣಿಸಿದರು.

ಸಾಹಿತಿ ತಿಪ್ಪಣ್ಣನಾಯಕ್ ವಿಶೇಷ ಉಪನ್ಯಾಸ ನೀಡಿದರು. ಡಿಸಿ ಹರ್ಷಲ್ ಭೋಯರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಎಸ್.ಪಿ. ಪ್ರಥ್ವಿಕ್ ಶಂಕರ್, ಯುಡಾ ಅಧ್ಯಕ್ಷ ಬಾಬುರಾವ ಕಾಡ್ಲೂರ್, ಸಮಾಜದ ಜಿಲ್ಲಾಧ್ಯಕ್ಷ ಗೌಡಪ್ಪಗೌಡ ಆಲ್ದಾಳ್, ಹೆಚ್ಚುವರಿ ಡಿಸಿ ರಮೇಶ ಕೊಲಾರ, ಎಸಿ ಶ್ರೀಧರ, ಕರವೇ ಜಿಲ್ಲಾಧ್ಯಕ್ಷ ಟಿ.ಎನ್.ಭೀಮುನಾಯಕ್ ಸೇರಿದಂತೆ ಇತರರಿದ್ದರು. ಸಚಿವರು, ಶಾಸಕರು, ಗಣ್ಯರು ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಸಿದ್ದಣ್ಣ ಅಣಬಿ ಸ್ವಾಗತಿಸಿದರು. ಚಂದ್ರಶೇಖರ ಗೋಗಿ, ಸಂಗಡಿಗ–ರಿಂದ ಸ್ವಾಗತ ಗೀತೆ,

ನಾಡ ಗೀತೆ ಜರುಗಿತು, ವಾಣಿಶ್ರೀ ನಿರೂಪಿಸಿದರು. ಇಂದು ಬೆಳಿಗ್ಗೆ ಇಲ್ಲಿನ ತಹಸಿಲ್ ಕಚೇರಿಯಿಂದ ಆರಂಭವಾದ ಶ್ರೀ ವಾಲ್ಮೀಕಿ ನಾಯಕ ಅವರ ಭಾವಚಿತ್ರದ ಮೆರವಣಿಗೆಗೆ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಚಾಲನೆ ನೀಡಿದರು. ಎಸ್ಪಿ ಪೃಥ್ವಿಕ್ ಶಂಕರ್, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಸಿದ್ದಣ್ಣ ಇತರರು ಉಪಸ್ಥಿತರಿದ್ದರು.

ಶಾಸ್ತ್ರಿ ಚೌಕ್, ನೇತಾಜಿ ಸರ್ಕಲ್, ಡಿಗ್ರಿ ಕಾಲೇಜು ಮಾರ್ಗವಾಗಿ ವಾಲ್ಮೀಕಿ ಭವನದವರೆಗೂ ಭಾರಿ ಭವ್ಯವಾಗಿ ನಡೆಯಿತು. ದಾರಿಯುದ್ದಕ್ಕೂ ಶಾಲಾ ಮಕ್ಕಳು, ಕುಂಭಹೊತ್ತು ಸಾಗಿದ ದೃಶ್ಯ ಮನಮೋಹಕವಾಗಿತ್ತು. ಯುವಕರ ಪಡೆ ಭಾರಿ ಉತ್ಸಾಹದಲ್ಲಿ ಭಾಗವಹಿಸುವ ಮೂಲಕ ಮೆರವಣಿಗೆಗೆ ರಂಗ ತಂದರು. ಜೈ ವಾಲ್ಮೀಕಿ ಎಂಬ ಘೋಷಣೆಗಳು ಮುಗಿಲು ಮುಟ್ಟಿದವು.

# ವಚನ ರಚನೆಗೆ ಪ್ರೇರಣೆ ನೀಡಿದ ಶರಣೆ ಗಂಗಾಂಬಿಕೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.8:12ನೇ ಶತಮಾನದಲ್ಲಿ ಮಹಿಳೆಯರಿಗೆ ಅಕ್ಷರ ಜ್ಞಾನ ಕಲ್ಪಿಸಿ, ವಚನಗಳ ರಚನೆಗೆ ಪ್ರೇರಣೆ ನೀಡಿದ ಶರಣೆ ಗಂಗಾಂಬಿಕೆ ಅವರ ಕಾರ್ಯ ಆದರ್ಶ ಮತ್ತು ಅನುಕರಣೀಯವಾದದ್ದು ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು.

ಪಟ್ಟಣದ ಹಿರೇಮಠದಲ್ಲಿ ಆಯೋಜಿಸಿದ್ದ ಗಂಗಾಂಬಿಕೆ ಜಯಂತಿ ಹಾಗೂ 492ನೇ ಮಾಸಿಕ ಶಿವಾನುಭವಗೋಷ್ಠಿ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಬಸವಣ್ಣನವರ ವ್ಯಕ್ತಿತ್ವ ಮತ್ತು ಶ್ರದ್ಧೆಯನ್ನು ಬಿಂಬಿಸುವ ವಚನಗಳನ್ನು ಗಂಗಾಂಬಿಕೆ ಬರೆದಿದ್ದಾರೆ. ಗಂಗಾಪ್ರಿಯ ಕೂಡಲಸಂಗ ಇವರ ವಚನಗಳ ಅಂಕಿತನಾಮವಾಗಿದೆ.

ಪ್ರತಿನಿತ್ಯ ಶರಣರ, ಸಜ್ಜನರ ಸತ್ಸಂಗದಲ್ಲಿ ಕಾಲ ಕಳೆಯುವುದರಿಂದ ಸಾಂಸಾರಿಕ ಜಂಜಾಟದಲ್ಲಿ ಮುಳುಗಿರುವ ಮಾನವರಿಗೆ ಮಾನಸಿಕ ನೆಮ್ಮದಿ, ಸಂತೃಪ್ತಿ ಲಭಿಸಲು ಸಾಧ್ಯವಿದೆ. ಹಾಗಾಗಿ, ಎಲ್ಲರೂ ತಪ್ಪದೇ ಪ್ರತಿದಿನ ವಚನಗಳ ಅಧ್ಯಯನದಲ್ಲಿ ತೊಡಗಬೇಕು ಎಂದು ಹೇಳಿದರು.

ಆರತಿ ನಿಜಲಿಂಗಪ್ಪ ಪಾತ್ರೆ ಅನುಭಾವ ನೀಡಿದರು.

ವಿದ್ಯಾರ್ಥಿಗಳಾದ ರೋಹಿತ ರಮೇಶ ಮೂಲಗೆ, ಶ್ರೀದೇವಿ ಮಾರುತಿ ಗಾಯಕವಾಡ್ ಮಾತನಾಡಿದರು.

ಇದೇ ಸಂದರ್ಭದಲ್ಲಿ ಪಾರ್ವತಿ ಜಗನ್ನಾಥ ಧೂಮ್ಮನಸೂರೆ, ಮಲ್ಲಮ್ಮ ನಾಗನಕೇರೆ ಅವರನ್ನು ಸನ್ಮಾನಿಸಲಾಯಿತು. ವಿದ್ಯಾವತಿ ಸೋಮನಾಥಪ್ಪ ಅಷ್ಟೂರೆ ಅಧ್ಯಕ್ಷತೆ ವಹಿಸಿದ್ದರು. ಸ್ವರೂಪಾ ಬಂಡೆಪ್ಪ ಬಳತೆ ವಚನ ಪಠಣ ಮಾಡಿದರು. ಶ್ರೀದೇವಿ ಶಾಂತಯ್ಯ ಸ್ವಾಮಿ ವಚನ ಸಂಗೀತ ನಡೆಸಿ ಕೊಟ್ಟರು. ಅಕ್ಕಮಹಾದೇವಿ ಶಿವರಾಜ ಪಾಟೀಲ ನಿರೂಪಿಸಿದರು.

## ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ: ಸಾರ್ವಜನಿಕರಲ್ಲಿ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.08 : ದಿನಾಂಕ: 22–09–2025 ರಿಂದ ನಡೆಯುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಈಗಾಗಲೇ ಬೀದರ ತಾಲ್ಲೂಕಿನ ಎಲ್ಲಾ ಗ್ರಾಮೀಣ ಪ್ರದೇಶದ ಪ್ರತಿಯೊಂದು ಮನೆಯ ಎಲ್ಲಾ ಸದಸ್ಯರನ್ನೊಳಗೊಂಡು ಸಮೀಕ್ಷೆ ನಡೆಯುತ್ತಿದ್ದು, ಎಲ್ಲಿಯಾದರು ಸಮೀಕ್ಷೆ ತಪ್ಪಿದರೆ ಕಂಟ್ರೋಲ್ ರೂಮ್ ನಂಬರಿಗೆ (08482–226459) ಕರೆಮಾಡಿ ತಮ್ಮ ವಿಳಾಸ ಮತ್ತು ಮೊಬೈಲ್ ನಂಬರ್ ನೀಡಿದಲ್ಲಿ ಗಣತಿದಾರರನ್ನು ನಿಮ್ಮ ವಿಳಾಸಕ್ಕೆ ಕಳುಹಿಸಿ ತಕ್ಷಣ ಸಮೀಕ್ಷೆ ಕೈಗೊಳ್ಳಲು ಕ್ರಮವಹಿಸಲಾಗುವುದು. ಪ್ರಯುಕ್ತ ಎಲ್ಲಾ ಸಾರ್ವಜನಿಕರು ಸಮೀಕ್ಷೆಯಿಂದ ಹೊರಗೂಲಿಯದೇ ತಮ್ಮ ವಿಳಾಸ ಸಂಖ್ಯೆ ನೀಡಿ ಸಮೀಕ್ಷೆ ಮಾಡಿಸಿಕೊಳ್ಳಲು ಬೀದರ ತಾಲ್ಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೀದ್ರಿ ಕಲೆಗೆ ಹೆಚ್ಚು ಆದ್ಯತೆ ಕೊಡಿ : ಶಿಲ್ಪಾ ಶರ್ಮಾ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 08 : ನಗರದ ಮೈಲೂರ ರಸ್ತೆಯಲ್ಲಿರುವ ಜಿಎನ್‌ಡಿ ಇಂಜಿನೀಯರಿಂಗ್ ಕಾಲೇಜನಲ್ಲಿ ನಡೆದ ಬೀದ್ರಿ ಕಲೆ ಮತ್ತು ಕೌಶಲ್ಯ ಅಭಿವೃದ್ಧಿ ಕೇಂದ್ರದ ಉದ್ಘಾಟನೆ ಸಮಾರಂಭದಲ್ಲಿ ಬೀದರಿನ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿ

ಮಾತನಾಡುತ್ತ ಬೀದ್ರಿ ಕಲೆಗೆ ದೇಶ ಹಾಗೂ ವಿದೇಶಗಳಲ್ಲಿ ಹೆಚ್ಚು ಬೇಡಿಕೆ ಇದ್ದು, ಇದರಲ್ಲಿ ಹೊಸ ಹೊಸ ವಿನ್ಯಾಸದೊಂದಿಗೆ ಸಾಗಬೇಕು ಮತ್ತು ಗುಣಮಟ್ಟದ ಉತ್ಪನ್ನಕ್ಕೆ ಹೆಚ್ಚು ಮಹತ್ವ ಕೊಡಬೇಕು ಎಂದು ಒತ್ತಿ ಹೇಳಿದರು.

ಬೀದ್ರಿ ಕಲೆಗೆ ಬೇಡಿಕೆ ಜಾಸ್ತಿ ಇದ್ದು, ಆದರೆ ತಯ್ಯಾರಿಕರು ಕಡಿಮೆ ಸಂಖ್ಯೆಯಲ್ಲಿ ಇದ್ದಾರೆ. ಇದಕ್ಕೆ ಹೊಸ ಜೀವ ಕೊಡುವುದ್ದಾಕ್ಕಾಗಿ ಗುರು ನಾನಕ ಝಿರಾ ಇಂಟರ್ಪ್ರನ್‌ಶಿಪ್ ರಿಸರ್ಚ ಮತ್ತು ಬ್ಯುಸೆನ್ಸ್ ಇಂಕುಬೇಷನ್ ಫೌಂಡೇಷನ್ ಮುಂದಾಗಿದ್ದು ಇಲ್ಲಿಯ ಜನತೆಗೆ ಒಂದು ಸುವರ್ಣ ಆವಕಾಶ ಕೊಟ್ಟಂತಾಗಿದೆ ಎಂದು ನುಡಿದರು.

ಇನ್ನೊರ್ವ ಅತಿಥಿ ಮಾಜಿ ಹೆಚ್ಚುವರಿ ಕಾರ್ಯದರ್ಶಿ ಕರ್ನಾಟಕ ಸರಕಾರ ಕೆ.ಜಯರಾಜ್ ಅವರು ಮಾತನಾಡುತ್ತ ಬಿದ್ರಿ ಕಲೆಯೂ ಮುಳುಗುವ ಹಂತದಲ್ಲಿದ್ದು, ಕಾಲೇಜಿಲ್ಲಿ ಕೇಂದ್ರ ಸ್ಥಾಪನೆಗೆ ಗುರು ನಾನಕ ಆಡಳಿತ ಮಂಡಳಿ ಮುಂದಾಗಿದ್ದು ಹರ್ಷ ತಂದಿದೆ ಎಂದು ನುಡಿದರು.

ಕೌಶಲ್ಯ ಅಭಿವೃದ್ಧಿ ಕೇಂದ್ರವನ್ನು ಸ್ಥಾಪಿಸುವುದು ಮತ್ತು ಶಿಕ್ಷಣವನ್ನು ನಾವೀನ್ಯತೆಯೊಂದಿಗೆ ಬೆರೆಸುವುದು ಸಂಸ್ಥೆಗೆ ಹೆಮ್ಮ ಮತ್ತು ತೃಪ್ತಿಯ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಡಾ. ಎಸ್.ಬಲಬೀರ್ ಸಿಂಗ್, ಶ್ರೀಮತಿ ಶೈನಿ ಪ್ರದೀಪ್ ಗುಂಟಿ, ಜಂಟಿ ನಿರ್ದೇಶಕರು ಜಿಲ್ಲಾ ಕೈಗಾರಿಕಾ




ಬಿದ್ರಿ ಕಲೆಯೂ ಕೇವಲ ಆರ್ಥಿಕ ಅಭಿವೃದ್ಧಿ ಅಲ್ಲದೆ ಒಟ್ಟಾರೆ ಸಮಾಜಿಕ ಅಭಿವೃದ್ಧಿಗೆ ಕಾರಣವಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಉಪಾಧ್ಯಕ್ಷೆ ಡಾ. ರೇಷ್ಮಾ ಕೌರ್ ಅವರು ಮಾತನಾಡುತ್ತ ನಮ್ಮ ಕಾಲೇಜಿನ ಆವರಣದಲ್ಲಿ ಕೇಂದ್ರ ಸ್ಥಾಪನೆಗೊಂಡಿದ್ದು ಹೆಮ್ಮೆಯ ವಿಷಯವಾಗಿದೆ. ಬಿದ್ರಿ ಕಲೆ ಮತ್ತು ವಿಷಯವಾಗಿದೆ, ಸಾಮಾಜಿಕ ಸಬಲೀಕರಣಕ್ಕಾಗಿ ಆತ್ಯಾಧುನಿಕ ಮೂಲಸೌಕರ್ಯವನ್ನು ಸ್ಥಾಪಿಉವುದು ಮತ್ತು ಕಲ್ಪನೆಗಳನ್ನು ವಾಸ್ತವ್ಯಕ್ಕೆ ತುರುವುದು ನಮ್ಮ ಗುರಿಯಾಗಿದೆ ಎಂದು ನುಡಿದರು.

ಕಾಲೇಜಿನ ಪ್ರಾಂಶುಪಾಲರಾದ ಡಾ. ವೀಣಾ ಎಸ್. ಸ್ವಾಗತ ಕೋರಿದರೆ, ರಾಕೇಶ್ ಮಾಥೂರಕರ್ ವಂದನಾರ್ಪಣೆ ಮಾಡಿದರು. ಈ ಕೇಂದ್ರ ಬೀದರಿನ ಶ್ರೀಮತಿ ಸು–ರೇಖಾ ಮೈನಳ್ಳಿ, ಗವರ್ನಿಂಗ್ ಕೌನ್ಸಿಲ್ ಸದಸ್ಯ ಮನೋರ್ ಸಿ, ಡಾ. ಸಮರ್ಥ ರಾಘವ, ಧ್ರುವಾ ಗುಪ್ತಾ, ಕಾಲೇಜಿನ ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು ಎಂದು ಡಾ. ವೀಣಾ ಎಸ್. ಪ್ರಾಂಶುಪಾಲರು ಗುರು ನಾನಕ ದೇವ್ ಇಂಜಿನೀಯರಿಂಗ್ ಕಾಲೇಜ್ ಬೀದರ ತಿಳಿಸಿದ್ದಾರೆ.

# ಸಡಗರದಿಂದ ಜರುಗಿದ ನವರಾತ್ರಿ ಮಹೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:- ಪಟ್ಟಣದ ದಾಡಗಿ ಬೇಸ್ ಕುಂಬಾರ ಗಲ್ಲಿಯಲ್ಲಿ ನವರಾತ್ರಿ ಮಹೋತ್ಸವ ಸಡಗರ ಸಂಭ್ರಮದಿಂದ ಜರಗಿತ್ತು. ಇಲ್ಲಿಯ ಸಂತ ಗೋರುಬ ಕಾಕಾ ಮಂದಿರದಲ್ಲಿ ಪ್ರತಿ ವರ್ಷದಂತೆ ಈ ವರ್ಷ ಕೂಡ ಭವಾನಿ ಮೂರ್ತಿ ಪ್ರತಿಷ್ಠಾಪನೆ ಮಾಡಲಾಗಿತ್ತು. ಒಂಬತ್ತು ದಿನಗಳ ವರೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ವೈಭವದಿಂದ ಜರುಗಿದವು. ಅಕ್ಟೋಬರ್ 7ರಂದು ನವರಾತ್ರಿ ಮಹೋತ್ಸವದ ಅಂಗವಾಗಿ ವಿಶೇಷ ಅನ್ನ ದಾಸೋಹ ಕಾರ್ಯಕ್ರಮ ಜರಗಿತು. ಅನ್ನ ದಾಸೋಹಕ್ಕೆ ಭಾಲ್ಕಿ ಪೊಲೀಸ್ ಉಪ ವಿಭಾಗದ ಡಿವೈಎಸ್ಪಿ ಶಿವಾನಂದ್ ಪಾವಡಶೆಟ್ಟಿ ಚಾಲನೆ ನೀಡಿ ದೇವಿಯ ದರ್ಶನ ಪಡೆದರು.

ದೇವಸ್ಥಾನ ಪಂಚ ಕಮಿಟಿಯ ಯುವಕರು ಡಿವೈಎಸ್ಪಿ ಶಿವಾನಂದ ಪಾವಡಶೆಟ್ಟಿ ಹಾಗೂ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಚಿಟಗುಪ್ಪ ಇವರಿಗೆ ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಪತ್ರಕರ್ತ ರಾಜಕುಮಾರ ಆರ್. ಹಡಪದ, ವಿಜಯಕುಮಾರ್ ಕುಂಬಾರ್, ಕಿರಣ್ ಕುಂಬಾರ್ ಅಶೋಕ್ ಕುಂಬಾರ್, ಹರಿದೇವ್ ಕುಂಬಾರ್, ಸಾಗರ್ ಕುಂಬಾರ್ ಸೇರಿದಂತೆ ಯುವಕರು, ಹಿರಿಯರು, ಮಹಿಳೆಯರು, ಮಕ್ಕಳು ಉಪಸ್ಥಿತರಿದ್ದರು. ಉತ್ಸವ ಅತಿ ವೈಭವದಿಂದ ಪಟ್ಟಣದಲ್ಲಿ ಯಶಸ್ವಿಯಾಗಿ ಜರುಗಿತು.

# ಹುಮನಾಬಾದ ಬಸ್ ನಿಲ್ದಾಣದಲ್ಲಿ ನಿಲ್ಲದ ಬಸ್ಸುಗಳು; ಪ್ರಯಾಣಿಕರ ಪರದಾಟ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಅ 8 ಇಲ್ಲಿನ ಘಟಕದ ಬಸ್ಸುಗಳು ಸಂಜೆಯಿಂದ ರಾತ್ರಿ ಸಮಯದಲ್ಲಿ ಹೈದ್ರಾಬಾದ ಮತ್ತುಕಲ್ಬುರ್ಗಿ ದಿಂದಬಸವಕಲ್ಯಾಣಕ್ಕೆ ಬರುವ ಬಸ್ಸುಗಳು ಮೊದಲೆ ಗಂಟೆ ಗೂಂದರಂತೆ ಇದ್ದು, ಅವುಗಳು ಸಹ ಹುಮನಾಬಾದ ವರ್ತೂಲ್ ರಸ್ತೆ ಅಥವಾ ರಿಂಗರೋಡ್- ಬಾಯಿಪಾಸ್ ರೋಡ್ ಮುಖಾಂತರ ಬಸವಕಲ್ಯಾಣಕ್ಕೆ,ಪ್ರಯಾಣಿಸುತ್ತಿದ್ದು ಪ್ರಯಾಣಿಕರು.ಪರದಾಡಿ ಸುಸ್ತಾಗಿ ಖಾಸಗಿ ವಾಹನಗಳಿಗೆ ಹೆಚ್ಚಿನ ದರ ನೀಡಿ ಪ್ರಯಾಣಿಸಬೇಕು ಇಲ್ಲವೇ ಹುಮನಾಬಾದ ಬಸನಿಲ್ದಾಣದಲ್ಲಿಯೆ ಮಲಗುವ ಪ್ರಸಂಗ ದಿನಾ ಒಂದಾದರೂ ಕಂಡು ಬರುತ್ತಿದು, ಪ್ರಯಾಣಿಕರು ನಿರ್ವಾಹಕ ಮತ್ತು ಚಾಲಕರಿಗೆ ಇದನ್ನು ಕೇಳಿದಾಗ ನಾವು ಹುಮನಾಬಾದ ಬಸ ನಿಲ್ದಾಣದಲ್ಲಿ ಹೋಗುವುದಿಲ್ಲಾ ಎಂದು ನೇರವಾಗಿ ಹೇಳುತ್ತಿದ್ದಾರೆ. ಹಾಗಾಗಿ ಬಸವಕಲ್ಯಾಣಕ್ಕೆ ಬರುವ ಪ್ರಯಾಣಿಕರು ರಾತ್ರಿ ಇಡೀ ಹುಮನಾಬಾದ ಬಸನಿಲ್ದಾಣದಲ್ಲಿ ಪರದಾಡುತ್ತಿದ್ದಾರೆ. ಆದಕಾರಣ ತಾವುಗಳು ಕಡ್ಡಾಯವಾಗಿ ಹುಮನಾಬಾದ ಬಸನಿಲ್ದಾಣಕ್ಕೆ ಬಂದು ಬಸನಿಲ್ದಾಣ ನಿಯಂತ್ರಣಾಧಿಕಾರಿ ಹತ್ತಿರ ನಿಲ್ದಾಣ ಸ್ವೀಕೃತಿ ಪಡೆದು ಬಸವಕಲ್ಯಾಣಕ್ಕೆ ಬರಬೇಕೆಂದು ಎಲ್ಲಾ ನಿರ್ವಾಹಕರಿಗೆ ಮತ್ತು ಚಾಲಕರಿಗೆ ಸೂಚನೆ ನೀಡಬೇಕೆಂದು ಬಸವಕಲ್ಯಾಣ ಘಟಕ ವ್ಯವಸ್ಥಾಪಕರಿಗೆ ಮನವಿ ಮೂಲಕ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಸಾಮಾಜಿಕ ಹೋರಾಟಗಾರರಾದ ರವಿ ನಾವದೇಕರ, ಶ್ರೀಶೈಲ್ ವಾತಡೆ ಡಾ, ವಿ,ಎಸ್ ರಾಜೋಳೆ, ಪ್ರಕಾಶ ನಿರಳೆ, ಉಮೇಶ ಸಂಗನೊರೆ, ಶಾಂತವೀರಯ್ಯ ಮಠಪತಿ, ಅಭಿಷೇಕ ವಾತಡೆ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಆಶಾ ಕಾರ್ಯಕರ್ತೆಯರು ಮಹರ್ಷಿ ವಾಲ್ಮೀಕಿಯವರ ಭಾವಚಿತ್ರಕ್ಕೆ ಪುಷ್ಪ ನಮನ

ಮಲ್ಲಮ್ಮ ನುಡಿ ವಾರ್ತೆ

ಲಿಂಗಸೂಗೂರು,ಅ.7:-ವಾಲ್ಮೀಕಿ ಜಯಂತಿ ಪ್ರಯುಕ್ತ ಪಟ್ಟಣದ ಗಡಿಯಾರ ಚೌಕದಲ್ಲಿರುವ ವಾಲ್ಮೀಕಿ ವೃತ್ತದಲ್ಲಿ ಆಶಾ ಕಾರ್ಯಕರ್ತೆಯರು ಮಹರ್ಷಿ ವಾಲ್ಮೀಕಿಯವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಜಯಂತಿಯನ್ನು ಆಚರಿಸಿದರು. ಈ ಸಂದರ್ಭದಲ್ಲಿ ಆಶಾ ಕಾರ್ಯಕರ್ತೆಯರಾದ ರೇಣುಕಾ ಹುಲಿಗುಡ್ಡ, ರಾಜೇಶ್ವರಿ, ರಾಜಕುಮಾರಿ ಬಳಿಗಾರ್, ಗಂಗಮ್ಮ, ಸುಮಿತ್ರ, ಶೃತಿ, ವಿಜಯಲಕ್ಷ್ಮಿ ಬಿ. ಮತ್ತು ರೇಣುಕಾ ಎಸ್. ಉಪಸ್ಥಿತರಿದ್ದರು. ಆಶಾ ಕಾರ್ಯಕರ್ತೆಯರು ಮಹರ್ಷಿ ವಾಲ್ಮೀಕಿಯವರ ಆದರ್ಶಗಳು ಹಾಗೂ ಅವರ ಮಾನವ ಸೇವಾ ತತ್ವವನ್ನು ಸ್ಮರಿಸಿ, ಸಮಾಜದಲ್ಲಿ ಶಾಂತಿ, ಸಮಾನತೆ ಮತ್ತು ಶಿಕ್ಷಣದ ಬೆಳವಣಿಗೆಗೆ ಅವರು ನೀಡಿದ ಕೊಡುಗೆಯನ್ನು ನೆನೆದು ಗೌರವ ವ್ಯಕ್ತಪಡಿಸಿದರು.

ವಾಲ್ಮೀಕಿ ಜಯಂತಿ ಆಚರಣೆ ಸರಳವಾಗಿ, ಭಕ್ತಿಭಾವದಿಂದ ನಡೆಯಿತು.

## ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ ಅಭಿಯಾನ:

# ಮಧ್ಯಸ್ಥಿಕೆ ಮೂಲಕ 105 ಪ್ರಕರಣಗಳು ಇತ್ಯರ್ಥ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.8-ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ನವದೆಹಲಿ ಭಾರತ ಸರ್ವೋಚ್ಚ ನ್ಯಾಯಾಲಯದೊಂದಿಗೆ ಸೇರಿ (ವಿಶೇಷ ಮಧ್ಯಸ್ಥಿಕೆ ಅಭಿಯಾನ) "ರಾಷ್ಟ್ರಕ್ಕಾಗಿ 90 ದಿನಗಳ ಮಧ್ಯಸ್ಥಿಕೆ" ಅಭಿಯಾನವನ್ನು ದಿನಾಂಕ: 01-07-2025 ರಿಂದ 07-10-2025ರ ವರೆಗೆ ಹಮ್ಮಿಕೊಳ್ಳಲಾಯಿತು. ಈ ಅಭಿಯಾನದಲ್ಲಿ ಸಾಕಷ್ಟು ಪ್ರಕರಣಗಳು ಮಧ್ಯಸ್ಥಿಕೆ ಮೂಲಕ ಇತ್ಯರ್ಥಗೊಂಡಿವೆ.

ಕಲಬುರಗಿ ಜಿಲ್ಲೆಯಲ್ಲಿ 5,777 ಪ್ರಕರಣಗಳಲ್ಲಿ ಮಧ್ಯಸ್ಥಿಕೆ ನಡೆಸಲಾಗಿತ್ತು. ಅವುಗಳಲ್ಲಿ 105 ಪ್ರಕರಣಗಳು ಮಧ್ಯಸ್ಥಿಕೆ ಮೂಲಕ ರಾ-ಜಿಯಾಗಿ ಇತ್ಯರ್ಥಗೊಂಡಿವೆ. ಇನ್ನು ಕೆಲವು ಪ್ರಕರಣಗಳು ಮಧ್ಯಸ್ಥಿಕೆಗಾಗಿ ಬಾಕಿ ಇವೆ. ಅದೇ ರೀತಿ ರಾಜ್ಯಾದ್ಯಂತ ಎಲ್ಲಾ ಜಿಲ್ಲೆಗಳಲ್ಲಿ ಮತ್ತು ಉಚ್ಚ ನ್ಯಾಯಾಲಯ ಬೆಂಗಳೂರು, ಧಾರವಾಡ ಹಾಗೂ ಕಲಬುರಗಿ ಪೀಠಗಳಲ್ಲಿ ಸಹ ಪ್ರಕರಣಗಳು ಇತ್ಯರ್ಥವಾಗಿವೆ ಎಂದು ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆ ಅವರು ತಿಳಿಸಿದ್ದಾರೆ.

# ಮನದುನ್ನತಿಗೆ ಆಧ್ಯಾತ್ಮವೇ ಭೂಮಿಕೆ - ಹಾರಕೂಡ ಶ್ರೀ.




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಅ 8 ಮನುಷ್ಯನಮನದಉನ್ನತೀಕರಣಕ್ಕಾಗಿ ಆಧ್ಯಾತ್ಮಮೂಲಭೂಮಿಕೆಯನ್ನು ಒದಗಿಸುತ್ತದೆಎಂದುಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನಕೋಹಿನೂರಗ್ರಾಮದ ಸದ್ಗುರು ಶ್ರೀ ಚನ್ನಮಲ್ಲೇಶ್ವರ ಜಾತ್ರಾಮಹೋತ್ಸವದಅಂಗವಾಗಿ ಏರ್ಪಡಿಸಿದಗುರುವಂದನೆಹಾಗೂ ಪಲ್ಲಕ್ಕಿ ಉತ್ಸವದ ಉದ್ಘಾಟನಾ ಸಮಾರಂಭದ ದಿವ್ಯ ಸನ್ನಿಧಾನ ವಹಿಸಿ ಮಾತನಾಡಿದ ಶ್ರೀಗಳು, ಮನುಷ್ಯ ನಿಜವಾಗಿಯೂ ಶ್ರೀಮಂತನಾಗುವುದು ಆತನಲ್ಲಿರುವ ಆಧ್ಯಾತ್ಮಿಕ ಮೌಲ್ಯಗಳಿಂದ.

ಜಾತ್ರೆಗಳು, ಉತ್ಸವಗಳು, ಮನುಷ್ಯನಲ್ಲಿ ಧರ್ಮ ಜಾಗೃತಿಯನ್ನುಂಟು ಮಾಡುತ್ತವೆ.

ಧರ್ಮಪ್ರಜ್ಞೆಯುಳ್ಳವರು ಸಮಾಜದಲ್ಲಿ ಯಾವತ್ತೂ ಭೂಷಿತರಾಗಿದ್ದು, ತಮ್ಮ ನಡೆ ನುಡಿ, ಆಚಾರ ವಿಚಾರಗಳಿಂದ ಇಡೀ ಸಮಾಜದ ಉನ್ನತಿಗಾಗಿ ಶ್ರಮಿಸುತ್ತಿರುತ್ತಾರೆ ಎಂದು ನುಡಿದರು.

ಕೋಹಿನೂರ ಗ್ರಾಮದ ಜನತೆ ಅರ್ಥಪೂರ್ಣವಾಗಿ ಆಚರಿಸಿಕೊಂಡು ಬರುತ್ತಿರುವ ಸದ್ಗುರು ಚೆನ್ನಮಲ್ಲೇಶ್ವರ ಜಾತ್ರಾ ಮಹೋತ್ಸವ ಉತ್ತರೋತ್ತರವಾಗಿ ಬೆಳೆಯಲಿ, ಹಾಗೂ ಸರ್ವರಿಗೂ ಹಾರಕೂಡಧೀಶ ಸನ್ಮಂಗಳ ಕೃಪೆ ಮಾಡಲಿ ಎಂದು ಶುಭ ಹಾರೈಸಿದರು.

ಈ ಸಮಾರಂಭದಲ್ಲಿ ಗಡಿಗೌಂಡಗಾವ ಪೂಜ್ಯಶ್ರೀ ಡಾ. ಶಾಂತವೀರ ಶಿವಾಚಾರ್ಯರು. ಹಾಗೂ ಸಂಗಮೇಶ್ವರ ದೇವರು ಕೋಹಿನೂರ ರವರು ನೇತೃತ್ವ ವಹಿಸಿದ್ದರು. ಗ್ರಾಮ ಪಂಚಾಯಿತಿ ಅಧ್ಯಕ್ಷೆ ಲಕ್ಷ್ಮಿ ಪರಶುರಾಮ ಜಡಗೆ, ಉಪಾಧ್ಯಕ್ಷೆ ರಾಜಶ್ರೀ ಹಿತವಂತ, ವೀರಣ್ಣ ಮೂಲಗೆ, ಮಲ್ಲಿನಾಥ ಹಿರೇಮಠ ಹಾರಕೂಡ, ಶಿವಾನಂದ ಪಾಟೀಲ, ಆನಂದ ಪಾಟೀಲ, ಅಂಬರಾಯ ಉಗಾಜಿ, ಶಿವಾ ಕಲೋಜಿ, ಅನಿಲ ಮಣಕೋಜಿ, ಶರಣು ಭೂತೆ, ಚಂದ್ರಕಾಂತ ಹುಸ್ಕೆ, ನರಸಪ್ಪ ನಾಯಕ, ಚಂದ್ರಕಾಂತ ಮನೋಳೆ, ಸಿದ್ರಾಮಯ್ಯ ಸ್ವಾಮಿ, ಅಣವೀರಯ್ಯ ಸ್ವಾಮಿ, ಧನರಾಜ ಲೋಖಂಡೆ, ಪ್ರಶಾಂತ ಲಕಮಾಜಿ, ಪೀರಪ್ಪ ಪೂಜಾರಿ, ದೇವಿದಾಸ ಗರಡಕರ್, ಕಲ್ಯಾಣರಾವ ವಿಸಾಜಿ, ಅಂಬಾದಾಸ ಸಜ್ಜನ ಸೇರಿದಂತೆ ಅನೇಕ ಭಕ್ತಾದಿಗಳು ಪಲ್ಲಕ್ಕಿ ಉತ್ಸವದಲ್ಲಿ ಶ್ರದ್ಧೆಯಿಂದ ಪಾಲ್ಗೊಂಡಿದ್ದರು. ಕರಬಸಯ್ಯ ಸ್ವಾಮಿ ಪ್ರಾರ್ಥನಾ ಗೀತೆ ಹಾಡಿದರು. ರತಿಕಾಂತ ಕೋಹಿನೂರ ಸ್ವಾಗತಿಸಿದರು. ಸಂಗಮೇಶ ಮಹಾಜನ ನಿರೂಪಿಸಿದರು.

# ಹಾರಕೂಡ ಗ್ರಾ. ಪಂ. ನಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ.



ಮಲ್ಲಮ್ಮ ನುಡಿ ವಾರ್ತೆ

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:ಅ .8 -ತಾಲೂಕಿನ ಹಾರಕೂಡ ಗ್ರಾಮದ ಗ್ರಾಮ ಪಂಚಾಯತ ದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಿಸಲಾಗಿತ್ತು . ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಸದಸ್ಯರಾದ ಚನ್ನಪ್ಪ ಎ. ಹೋಳ್ಕರ್. ಪ್ರಮುಖರಾದ ಜಿತೇಂದ್ರ ಮೂಲಗೆ. ಪಂಚಾಯತ ಸಿಬ್ಬಂದಿಗಳಾದ ಲಕ್ಷ್ಮಣ್ ಪರಿಟ. ಮಲ್ಲಿಕಾರ್ಜುನ ಸಕ್ಪಲ .ಗಣಪತಿ ಭಂಡಾರಿ ಮಿಥುನ ಗ್ರಂಥಾಲಯ ಮೇಲ್ವಿಚಾರಕರು ಕಲ್ಯಾಣರಾವ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ರಾಮಾಯಣ ಮಹಾಕಾವ್ಯ ರಚಿಸಿದವರು ಶ್ರೀ ಮಹರ್ಷಿ ವಾಲ್ಮೀಕಿ ಅವರು ರಾಮಾಯಣದಲ್ಲಿ ಉಲ್ಲೇಖಿಸಿರುವ ಅಂಶಗಳು ಇಂದಿಗೂ ಎಂದೆಂದಿಗೂ ಪ್ರಸ್ತುತವಾಗಿವೆ. ರಾಮಾಯಣದ ಮೌಲ್ಯಗಳು ಭವಿಷ್ಯಕ್ಕೆ ದಾರಿ ದೀಪವಾಗಿವೆ ಎಂದು ಪಟ್ಟಣದ ಪುರಸಭೆ ಕಾರ್ಯಾಲಯದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಅವರ ಜಯಂತಿ ಅಂಗವಾಗಿ ಶ್ರೀ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ಪುರಸಭೆ ಅಧ್ಯಕ್ಷ ದಿಲೀಪಕುಮಾರ್ ಬಗ್ದಲಕರ್ ಪೂಜೆ ಸಲ್ಲಿಸಿ ಮಾತನಾಡುತ್ತ ತಿಳಿಸಿದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷ ನಸೀರ ಖಾನ, ಮುಖ್ಯಾಧಿಕಾರಿ ಹುಸಾಮುದ್ದಿನ್ ಬಾಬಾ, ಸದಸ್ಯರಾದ ರೇವಣ್ಣಪ್ಪ ಭುತ್ತಾಳೆ, ಮುಜಾಫರ ಪಟೇಲ, ಬಾಬಾ ಆರ್.ಸಿ.ಸಿ., ವಿಶಾಲ ಬೋರಳೆ, ಹಬೀಬ್, ಪ್ರಮುಖರಾದ ಅಶೋಕ ಸ್ವಾಮಿ, ವಿಠಲರಾವ ಪಟ್ಟಣಕರ್, ಶಾಮರಾವ ಭುತ್ತಾಳೆ, ಭಾಸ್ಕರ್, ನರಸಪ್ಪ ನರನಾಳ, ಶರಣು ಗಡಮಿ, ಸಂಜು ಪಟ್ಟಣಕರ್, ನಾಗರಾಜ, ದೇವೀಂದ್ರ ಸೀತಾಳಗೇರಾ, ಅಮೃತ ಸಿಬ್ಬಂದಿಗಳಾದ ಚಿದಾನಂದ ಪತ್ರಿ, ಕವಿತಾ, ಮಲ್ಲಮ್ಮ, ಇಲಾಹಿ, ಅಶ್ವಿನಿ ಚವ್ಹಾಣ, ಮಂಜುಳಾ, ನಾಗೇಂದ್ರ, ಭೀಮಶಾ, ಬಕ್ಕಪ್ಪ ಸೇರಿದಂತೆ ಸಮಾಜದ ಮುಖಂಡರು, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಜನ ಸ್ನೇಹಿ ಸೈಯದ್ ಅಜೀಮ್ ಜನ್ಮ ದಿನಾಚರಣೆ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ ಗೆಳೆಯರ ಬಳಗದ ವತಿಯಿಂದ ಕೆಪಿ ನ್ಯೂಸ್ ತಾಲೂಕ ವರದಿಗಾರ ಸೈಯದ್ ಅಜೀಮ್ ರವರ 29ನೇ ವರ್ಷದ ಹುಟ್ಟು ಹಬ್ಬವನ್ನು ಪಟ್ಟಣದ ಗಾಂಧಿ ವೃತ್ತದ ಹತ್ತಿರ ಕೇಕ್ ಕತ್ತರಿಸುವ ಮೂಲಕ ಆಚರಣೆ ಮಾಡಲಾಯಿತ್ತು. ಹುಟ್ಟುಹಬ್ಬಕ್ಕೆ ಶುಭಾಷಯಗಳನ್ನು ಕೋರುತ್ತಾ ಪತ್ರಕರ್ತ ರಾಜಕುಮಾರ ಆರ್. ಹಡಪದ ಮಾತನಾಡಿ, ಸೈಯದ್ ಅಜೀಮ್ ಒಬ್ಬ ಅತ್ಯಂತ ಶ್ರಮ, ಸ್ನೇಹಜೀವಿ ಸಮಾಜದಲ್ಲಾಗುವ ಅನ್ಯಾಯವನ್ನು ಅತ್ಯಂತ ಯಶಸ್ವಿಯಾಗಿ ಬಿತ್ತರಿಸುತ್ತಾ ಬರುತ್ತಿದ್ದಾರೆ. ಹೀಗೆ ಇನ್ನು ಸಮಾಜಕ್ಕೆ ಹೆಚ್ಚಿನ ಕೆಲಸ ಕಾರ್ಯಗಳು ಪ್ರಮಾಣಿಕವಾಗಿ ಪ್ರಯತ್ನಪಟ್ಟುಮತ್ತಷ್ಟು ಬೆನೆತ್ತರಕ್ಕೆ ಸಾಗಲಿ ಎಂದು ಹೇಳುತ್ತಾ, ಹುಟ್ಟುಹಬ್ಬದ ಶುಭಾಶಯಗಳು ಕೋರಿದರು. ಸೈಯದ್ ಅಜೀಮ್ ಮಾತನಾಡಿ, ನಾಡ ಹಬ್ಬ ದಸರಾ ಹಬ್ಬದ ಶುಭಾಶಯಗಳು ತಿಳಿಸುತ್ತಾ, ನನ್ನ ಹುಟ್ಟು ಹಬ್ಬಕ್ಕೆ ಶುಭ ಕೋರಿದ ನನ್ನ ಎಲ್ಲ ಆತ್ಮೀಯ ಸ್ನೇಹಿತರಿಗೂ, ಗುರು ಹಿರಿಯರಿಗೂ ಹಾಗೂ ನನ್ನ ಹಿತೈಷಿಗಳಿಗೂ ತುಂಬು ಹೃದಯದ ಧನ್ಯವಾದಗಳು ತಿಳಿಸಿದರು. ಸದಾ ಕಾಲ ನಿಮ್ಮೆಲ್ಲರ ಪ್ರೀತಿ, ಸಹಕಾರ, ಆಶೀರ್ವಾದ ನನ್ನ ಮೇಲೆ ಇರಲೆಂದು ನುಡಿದರು. ಸೈಯದ್ ಮಝುರ್ ಮಾತನಾಡಿ, ನನ್ನ ಸಹೋದರ ಪತ್ರಿಕಾ ರಂಗದಲ್ಲಿ ಸೇವೆ ಸಲ್ಲಿಸುತ್ತಾ, ಸಮಾಜದಲ್ಲಿ ಬಡವರ, ಧ್ವನಿ ಇಲ್ಲದವರ ಧ್ವನಿಯಾಗಿ ಕಾರ್ಯ ಮಾಡುತ್ತಿರುವುದು ನನಗೆ ತುಂಬಾ ಸಂತೋಷವಾಗುತ್ತಿದೆ. ಇನ್ನು ಮುಂದಿನ ದಿನಗಳಲ್ಲಿ ಕ್ರಿಯಾಶೀಲ ಪತ್ರಕರ್ತನಾಗಿ ಸಮಾಜದ, ಬಡವರ ಸೇವೆ ಮಾಡಲಿ ಎಂದು ಶುಭ ಹಾರೈಸಿದರು. ಕಾರ್ಯಕ್ರಮವನ್ನು ಹಸನ್ ಲಚ್ಚಿಕೆ ನಿರೂಪಿಸಿ ವಂದಿಸಿದರು. ಈ ಸಂದರ್ಭದಲ್ಲಿ ಸೈಯದ್ ರಿಯಾಜ್, ಸೈಯದ್ ವಾಜೀದ್, ಸೈಯದ್ ಸಾಬ್, ಸೈಯದ್ ಅಸ್ಲಾಂ, ಜಿಶಾನ್ ಸಿದ್ದಿಖಿ, ಮಹಮ್ಮದ್ ಸರ್ವರ್, ಅತ್ತಉಲ್ಲಾಹ್, ಅಮ್ಜದ್ ಖಾನ, ಮಹಮ್ಮದ್ ಶಹಾಬಜ್, ದತ್ತಾತ್ರೇಯ ಪೂಜಾರಿ, ನರೇಂದ್ರ-ರೆಡ್ಡಿ, ಮಹಮ್ಮದ್ ಮುಸ್ತಫಾ, ಮಹಮ್ಮದ್ ಮುಜೀಬ್, ಮಹಮ್ಮದ್ ಫೇರೋಜ್, ಮಹಮ್ಮದ್ ಸಿರಾಜ್, ಮಹಮ್ಮದ್ ಖದೀರ್, ಸೈಯದ್ ಅಲ್ಲಿಂ, ಸೈಯದ್ ಮುನೀರ್, ಸೈಯದ್ ಹುಸೇನ್, ಮಹಮ್ಮದ್ ಅಷ್ಫಾಕ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

:CITATION:

IN THE COURT OF THE PRI, CIVIL JUDGE AND JMFC., AT HUMNABAD.

CRL. MISC. No.1123/2025.

Petitioners:

1. Annapurna W/o Veeranna Pochampali, Age: 59yrs. Occu: Household

2. Veeranna S/o late Rudrappa, Age: 62yrs. Both R/o H. No. 14-113 Bappann Galli, Humnabad. Dist. Bidar.

Respondent:

The Registrar of Birth and Death through The Chief officer TMC Humabad. Dist: Humnabad.

Sub:- Petition U/Sec. 13(3) of Birth and Death Registration Act-1969

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of Father in law of petitioner No.1 and Father of petitioner No.2 by namely LATE. RUDRAPPA S/O BASAPPA, who was died on 03.01.2003 at Bappann Galli, Humnabad, Tq.Humnabad, Dist. Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 04.11.2025 at 11.00 AM in person or any authorized pleader to answer such claim otherwise the matter will be heard and determined in your absence as per law

Given under my hand and seal of he court, this the 27-09-2025.

//By order of the court//

Chief Ministerial Officer,

Prl. Civil Judge & JMFC Court,

Humnabad.

# ಶಿವಾನಂದ ಪಾವಡಶೆಟ್ಟಿ ರವರಿಗೆ ಅತ್ಯುತ್ತಮ ಜನಸ್ನೇಹಿ ಡಿವೈಎಸ್ಪಿ ಪ್ರಶಸ್ತಿ ಪ್ರಧಾನ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:- ಪೋಲಿಸ್ ಉಪ ವಿಭಾಗದ ಡಿವೈಎಸ್ಪಿ ಶಿವಾನಂದ್ ಪಾವಡಶೆಟ್ಟಿ ಅವರಿಗೆ ಪರಿಸರ ವಾಹಿನಿ ಬೀದರ್ 2025ರ ಪರಿಸರೋತ್ಸವ ಅಂಗವಾಗಿ ನೀಡುವ ಪರಿಸರೋತ್ಸವ ಪ್ರಶಸ್ತಿಯಾದ ಅತ್ಯುತ್ತಮ ಜನಸ್ನೇಹಿ ಡಿವೈಎಸ್ಪಿ ಪ್ರಶಸ್ತಿ ನೀಡಿ ಪರಿಸರವಾದಿ ಶೈಲೇಂದ್ರ ಕಾವಡಿ ಸನ್ಮಾನಿಸಿ ಗೌರವಿಸಿದರು. ಸಮಾಜ ಕಾರ್ಯಕರ್ತ ಮಹ್ಮದ್ ಅಸ್ಲಾಂಮಿಯಾ ಚಿಟಗುಪ್ಪ, ಪತ್ರಕರ್ತ ರಾಜಕುಮಾರ ಆರ್. ಹಡಪದ್ ಸೇರಿದಂತೆ ಭಾಲ್ಕಿ ಪಟ್ಟಣದ ಕುಂಬಾರ್ ಓಣಿಯ ಜೈ ಭವಾನಿ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು. ಈ ಒಂದು ಪರಿಸರ ಪ್ರಶಸ್ತಿ ಬೀದರ್ ತಾಲೂಕಿನ ಮರಕುಂದದಲ್ಲಿ ಸಪ್ಟೆಂಬರ್ 16ರಂದು ಜರುಗಿ-ತ್ತು. ಆ ಕಾರ್ಯಕ್ರಮದಲ್ಲಿ ಅನಿವಾರ್ಯ ಕಾರಣಗಳಿಂದ ಭಾಗವಹಿಸದೆ ಇದ್ದದ್ದಕ್ಕಾಗಿ ಮಂಗಳವಾರ ಇಲ್ಲಿಯ ಜೈ ಭವಾನಿ ನವರಾತ್ರಿ ಮಹೋತ್ಸವ ಸಮಾರಂಭದಲ್ಲಿ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

# ಮಹರ್ಷಿ ವಾಲ್ಮೀಕಿಯ ಚಿಂತನೆಗಳು ಅಜರಾಮರ: ಪ್ರೊ.ವೆಂಕಟಗಿರಿ ದಳವಾಯಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.08–ಮಹರ್ಷಿ ವಾಲ್ಮೀಕಿಯ ಚಿಂತನೆಗಳು ಮತ್ತು ಮೌಲ್ಯಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ನಮ್ಮ ಜೀವನ ಅರ್ಥಪೂರ್ಣವಾಗುತ್ತದೆ ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ಕನ್ನಡ ಸಾಹಿತ್ಯ ಅಧ್ಯಯನ ವಿಭಾಗದ ಪ್ರೊ.ವೆಂಕಟಗಿರಿ ದಳವಾಯಿ ಅವರು ಹೇಳಿದರು.



ಮಂಗಳವಾರ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ ಆಯೋಜಿಸಿದ್ದ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ ಕಾರ್ಯಕ್ರಮವನ್ನು ವಾಲ್ಮೀಕಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ದೇಶದ ಪರಂಪರೆ ಕಾಪಾಡುವುದರಲ್ಲಿ ಯುವಕರ ಪಾತ್ರ ಬಹುಮುಖ್ಯವಾಗಿದೆ. ವ್ಯಕ್ತಿಯ ನಡತೆ ಮತ್ತು ಅವನ ಜೀವನವನ್ನು ನಡೆಸಲು ವಾಲ್ಮೀಕಿ ಅವರ ಚಿಂತನೆಗಳು ಮಾರ್ಗದರ್ಶಕವಾಗಿವೆ. ಆಧುನಿಕ ದಿನಗಳಲ್ಲಿ ಜಯಂತಿಗಳು ವರ್ತಮಾನಗಳ ಬಗ್ಗೆ ತಿಳಿಸುತ್ತದೆ ಎಂದರು.

ವಿಶ್ವವಿದ್ಯಾಲಯದ ಕುಲಸಚಿವ ಸಿ.ನಾಗರಾಜು ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಮಹನೀಯರ ಜಯಂತಿಗಳು ಜೀವನದ ಯಶೋಗಾಥೆಗಳನ್ನು ಪಸರಿಸುವುದು ಉದ್ದೇಶವಾಗಿದೆ. ರಾಮಾಯಣವನ್ನು ಮುಂದಿನ ಪೀಳಿಗೆಗೆ ಕೊಂಡಯ್ಯುವುದು ನಮ್ಮ ಕರ್ತವ್ಯವಾಗಿದೆ. ವಾಲ್ಮೀಕಿ ರಾಮಾಯಣವನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಯಶಸ್ವಿ ವ್ಯಕ್ತಿಯಾಗಬಹುದು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ವಿಶ್ವವಿದ್ಯಾಲಯದ ಕುಲಸಚಿವ (ಮೌಲ್ಯಮಾಪನ) ಪ್ರೊ.ಎನ್.ಎಂ ಸಾಲಿ ಮಾತನಾಡಿ, ರಾಮಾಯಣದಲ್ಲಿ ಒಂದು ಪ್ರಮುಖವಾದ ಅಂಶವೆಂದರೆ ಜೀವನದ ಮೌಲ್ಯ. ಒಬ್ಬ ವ್ಯಕ್ತಿಯ ನಡತೆ, ಪ್ರಾಮಾಣಿಕತೆ, ಸತ್ಯ ಸೇರಿದ ಚಿತ್ರಣವೇ ರಾಮಾಯಣವಾಗಿದೆ ಎಂದು ಅಭಿಪ್ರಾಯ ಪಟ್ಟರು.

ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ಜಯಲಕ್ಷ್ಮೀ ಅವರು ಮಾತನಾಡಿ, ಆಧುನಿಕ ಕಾಲದ ವಿದ್ಯಾರ್ಥಿಗಳು ಮಹನೀಯರ ಜೀವನದ ಬಗ್ಗೆ ತಿಳಿದುಕೊಳ್ಳಬೇಕು. ಆಗ ಮಾತ್ರ ಯಶಸ್ವಿಯಾಗಲು ಸಾಧ್ಯ. ಅಂದಿನ ಕಾಲದ ಗುರು–ಶಿಷ್ಯರ ಸಂಬಂಧ ಹಾಗೂ ಗುರುಕುಲ ಶಿಕ್ಷಣದ ಕುರಿತು ವಿದ್ಯಾರ್ಥಿಗಳಿಗೆ ತಿಳಿಸಿದರು. ಈ ವೇಳೆ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಶಿವಕುಮಾರ, ಪ.ಜಾತಿ ಮತ್ತು ಪ.ಪಂಗಡಗಳ ವಿಶೇಷ ಘಟಕದ ಸಂಯೋಜಕ ಡಾ.ಕುಮಾರ, ವಿದ್ಯಾರ್ಥಿ ಕ್ಷೇಮಪಾಲನ ಘಟಕದ ನಿರ್ದೇಶಕರಾದ ಡಾ.ಗೌರಿ ಮಾಣಿಕ್ ಮಾನಸ ಸೇರಿದಂತೆ ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಅ.10 ರಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ 50 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ 'ಸುವರ್ಣ ಮಹೋತ್ಸವ' ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.08–ಜಿಲ್ಲಾಡಳಿತ ಮತ್ತು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸಂಸ್ಥಾಪನೆಗೊಂಡು 50 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಅ.10 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸರ್ಕಾರಿ (ಮಾ.ಪು) ಪದವಿ ಪೂರ್ವ ಕಾಲೇಜು ಮೈದಾನದಲ್ಲಿ 'ಸುವರ್ಣ ಮಹೋತ್ಸವ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವರಾದ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಇಲಾಖೆಯ ಸಚಿವರಾದ ಈಶ್ವರ್ ಖಂಡ್ರೆ, ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣ ಪ್ರಕಾಶ್ ಆರ್.ಪಾಟೀಲ ಮತ್ತು ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜ ಅವರು ಘನ ಉಪಸ್ಥಿತರಿರುವರು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷರು ಆಗಿರುವ ಮಳವಳ್ಳಿ ವಿಧಾನಸಭಾ ಕ್ಷೇತ್ರ ಶಾಸಕ ಪಿ.ಎಂ.ನರೇಂದ್ರಸ್ವಾಮಿ ಅವರು ವಿಶೇಷ ಆಹ್ವಾನಿತರಾಗಿ ಭಾಗವಹಿಸುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಕಂಪ್ಲಿ ಶಾಸಕ ಜೆ.ಎನ್ ಗಣೇಶ್, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಅಧ್ಯಕ್ಷ ಹಾಗೂ ರಾಯಚೂರು ಗ್ರಾಮಾಂತರ ಶಾಸಕ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷ ಹಾಗೂ ಮಸ್ಕಿ ಶಾಸಕರು ಆರ್.ಬಸನಗೌಡ ತುರುವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮ ಅಧ್ಯಕ್ಷ ಹಾಗೂ ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಹಾಗೂ ಬೀಳಗಿ ಶಾಸಕ ಜೆ.ಟಿ ಪಾಟೀಲ್, ಬಳ್ಳಾರಿ ಸಂಸದ ಈ.ತುಕಾರಾಮ್, ಕೊಪ್ಪಳ ಸಂಸದ ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ರಾಯಚೂರು ಸಂಸದ ಜಿ.ಕುಮಾರ ನಾಯಕ, ರಾಜ್ಯಸಭೆ ಸಂಸದ ಡಾ.ಸೈಯದ್ ನಾಸೀರ್ ಹುಸೇನ್, ಬಳ್ಳಾರಿ ಗ್ರಾಮಾಂತರ ಶಾಸಕ ಬಿ.ನಾಗೇಂದ್ರ, ರಾಯಚೂರು ನಗರ ಶಾಸಕ ಡಾ.ಎಸ್.ಶಿವರಾಜ್ ಪಾಟೀಲ್, ವಿಧಾನಪರಿಷತ್ ಶಾಸಕ ಡಾ.ಚಂದ್ರಶೇಖರ್ ಬಿ.ಪಾಟೀಲ, ಮಾನವಿ ಶಾಸಕ ಜಿ.ಹಂಪಯ್ಯ ನಾಯಕ, ಲಿಂಗಸುಗೂರು ಶಾಸಕ ಮಾನಪ್ಪ ಡಿ.ವಜ್ಜಲ್, ಸಿರುಗುಪ್ಪ ಶಾಸಕ ಬಿ.ಎಂ.ನಾಗರಾಜ, ದೇವದುರ್ಗ ಶಾಸಕಿ ಕರೆಮ್ಮ ಜಿ.ನಾಯಕ, ಸಂಡೂರು ಶಾಸಕಿ ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕ ಶಶೀಲ್ ಜಿ.ನಮೋಶಿ, ವಿಧಾನಪರಿಷತ್ ಸದಸ್ಯ ವೈ.ಎಂ.ಸತೀಶ್, ವಿಧಾನಪರಿಷತ್ ಶಾಸಕರಾದ ಶರಣಗೌಡ ಪಾಟೀಲ್ ಬಯ್ಯಾಪೂರ, ಎ.ವಸಂತ ಕುಮಾರ, ಬಸನಗೌಡ ಬಾದರ್ಲಿ, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು ಸೇರಿದಂತೆ ಬಳ್ಳಾರಿ ಮತ್ತು ರಾಯಚೂರು ಜಿಲ್ಲೆಯ ಎಲ್ಲಾ ಚುನಾಯಿತ ಪ್ರತಿನಿಧಿಗಳು ಹಾಗೂ ಇತರರು ಭಾಗವಹಿಸುವರು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸದಸ್ಯ ಕಾರ್ಯದರ್ಶಿ ಎಸ್.ಎಸ್.ಲಿಂಗರಾಜ, ಬಳ್ಳಾರಿ ವಲಯ ಪೊಲೀಸ್ ಮಹಾನಿರೀಕ್ಷಕರಾದ ವರ್ತಿಕಾ ಕಟಿಯಾರ್, ಬಳ್ಳಾರಿ ಜಿಲ್ಲಾಧಿಕಾರಿ ನಾಗೇಂದ್ರಪ್ರಸಾದ್.ಕೆ., ರಾಯಚೂರು ಜಿಲ್ಲಾಧಿಕಾರಿ ಕೆ.ನಿತೀಶ್, ಬಳ್ಳಾರಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್, ರಾಯಚೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕುಮಾರ ಕಾಂದೂ, ಬಳ್ಳಾರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪುಟ್ಟಮಾದಯ್ಯ, ಬಳ್ಳಾರಿ ಮಹಾನಗರ ಪಾಲಿಕೆಯ ಆಯುಕ್ತ ಪಿ.ಎಸ್.ಮಂಜುನಾಥ, ರಾಯಚೂರು ಮಹಾನಗರ ಪಾಲಿಕೆ ಆಯುಕ್ತ ಜುಬೀನ್ ಮೊಹಪಾತ್ರ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ವಿಜಯನಗರ ವಲಯ ಕಚೇರಿಯ ಹಿರಿಯ ಪರಿಸರ ಅಧಿಕಾರಿ ಬಿ.ಎಸ್.ಮುರಳಿಧರ, ಬಳ್ಳಾರಿ ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿ ಟಿ.ಎಂ.ಸಿದ್ದೇಶ್ವರ ಬಾಬು, ರಾಯಚೂರು ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿ ಶೈಲಕಾ ಅಮೀನ್ ಗಡ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

## ಸಂಡೂರು: ಭಾಗ್ಯಲಕ್ಷ್ಮೀ ಬಾಂಡ್ ಪಡೆದ ಫಲಾನುಭವಿಗಳಿಂದ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.08–ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ 2006–07ನೇ ಸಾಲಿನಲ್ಲಿ ಭಾಗ್ಯಲಕ್ಷ್ಮೀ ಯೋಜನೆಯಡಿ ಬಾಂಡ್ ಪಡೆದ ಫಲಾನುಭವಿಗಳಿಗೆ ಪರಿಪಕ್ವ ಮೊತ್ತ ಪಾವತಿಸಲು ಉದ್ದೇಶಿಸಲಾಗಿದ್ದು, ಸಂಡೂರು ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಕಚೇರಿ ವ್ಯಾಪ್ತಿಯ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

2006–07ನೇ ಸಾಲಿನಲ್ಲಿ ಜನಿಸಿ, 18 ವರ್ಷ ಪೂರ್ಣಗೊಂಡಿರುವ ಫಲಾನುಭವಿಗಳಿಗೆ ಪರಿಪಕ್ವ ಮೊತ್ತ ಪಡೆಯಲು ಅರ್ಹರಾಗಿರುತ್ತಾರೆ. ಅಗತ್ಯ ದಾಖಲೆಗಳೊಂದಿಗೆ ಪ್ರಸ್ತಾವನೆ ಸಲ್ಲಿಸಲು ಅಕ್ಟೋಬರ್ 31 ಕೊನೆಯ ದಿನವಾಗಿದೆ. ಅವಧಿ ಮೀರಿ ಬಂದಂತಹ ಅರ್ಜಿಗಳನ್ನು ಪರಿಗಣಿಸುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಂಗನವಾಡಿ ಕೇಂದ್ರ ಅಥವಾ ಸಂಡೂರು ಪಟ್ಟಣದ ಕೆಹೆಚ್‌ಬಿ ಕಾಲೋನಿಯ ಸ್ತ್ರೀಶಕ್ತಿ ಭವನದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಸಂಡೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಪಿಎಫ್‌ಓ: ಅ.13 ರಂದು ಪಿಂಚಣಿ ಅದಾಲತ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.08–ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆಯ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಪಿಂಚಣಿದಾರರ ಕುಂದು ಕೊರತೆ ಆಲಿಸಿ, ಪರಿಹರಿಸಲು ಅಕ್ಟೋಬರ್ 13 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ನಗರದ ಪ್ರಾದೇಶಿಕ ಕಚೇರಿಯಲ್ಲಿ ಪಿಂಚಣಿ ಅದಾಲತ್ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪ್ರಾದೇಶಿಕ ಕಚೇ–ರಿಯ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತ ಕೆ.ವಿ ಪ್ರವೀಣ್ ಅವರು ತಿಳಿಸಿದ್ದಾರೆ. ಬಳ್ಳಾರಿ, ವಿಜಯನಗರ, ಕೊಪ್ಪಳ, ಚಿತ್ರದುರ್ಗ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆಗಳಿದ್ದಲ್ಲಿ ಬಳ್ಳಾರಿ ಪ್ರಾದೇಶಿಕ ಕಚೇ–ರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿಗೆ ಪತ್ರ ಅಥವಾ ಇ–ಮೇಲ್ ಮೂಲಕ ಪಿ.ಪಿ.ಓ ಸಂಖ್ಯೆ, ವಿಳಾಸ, ದೂರವಾಣಿ, ಮೊಬೈಲ್ ಸಂಖ್ಯೆ ಮತ್ತು ಕುಂದು ಕೊರತೆಯ ಸ್ವರೂಪ ಹಾಗೂ ಇತ್ಯಾದಿಗಳನ್ನು ಅಂಚೆ ಪತ್ರದ ಮೂಲಕ ಅಕ್ಟೋಬರ್ 10 ರೊಳಗಾಗಿ ತಿಳಿಸಬಹುದು. ಪತ್ರಲಕೋಟೆ ಮೇಲೆ ಪಿಂಚಣಿ ಅದಾಲತ್ ಎಂದು ಬರೆಯಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.08392–268943 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಬೆಳಕಿಲ್ಲದ ದಾರಿಯಲ್ಲಿ ನಡೆಯಬಹುದು, ಆದರೆ ಕನಸುಗಳಿಲ್ಲದ ದಾರಿಯಲ್ಲಿ ನಡೆಯಲಾಗುವುದಿಲ್ಲ**

| ಗಿರೀಶ್ ಕಾರ್ನಾಡ್

# ಬಳ್ಳಾರಿ: "ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ" 90 ದಿನಗಳ ವಿಶೇಷ ಮಧ್ಯಸ್ಥಿಕೆ ಅಭಿಯಾನ ಯಶಸ್ವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.08–ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ, ಮಧ್ಯಸ್ಥಿಕೆ ಮತ್ತು ಸಂಧಾನ ಯೋಜನಾ ಸಮಿತಿ ಇವರ ಆದೇಶದಂತೆ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ನಿರ್ದೇಶನದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಜುಲೈ 01 ರಿಂದ ಅಕ್ಟೋಬರ್ 07 ರ ವರೆಗೆ ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಆಯೋಜಿಸಿದ್ದ "ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ" 90 ದಿನಗಳ ವಿಶೇಷ ಮಧ್ಯಸ್ಥಿಕೆ ಅಭಿಯಾನವು ಯಶಸ್ವಿಯಾಗಿದೆ



ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ತಿಳಿಸಿದ್ದಾರೆ. ಈ ವಿಶೇಷ ಅಭಿಯಾನದಲ್ಲಿ ವೈವಾಹಿಕ ವಿವಾದಗಳು, ಅಪಘಾತ ಪರಿಹಾರ ಪ್ರಕರಣಗಳು, ಕೌಟುಂಬಿಕ ದೌರ್ಜನ್ಯ ಪ್ರಕರಣಗಳು, ಚೆಕ್ ಬೌನ್ಸ್ ಪ್ರಕರಣಗಳು, ಅಪರಾಧಿಕ ರಾಜೀಯಾಗಬಹುದಾದ ಪ್ರಕರಣಗಳು, ಪಾಲು ವಿಭಾಗ ದಾವೆಗಳು ಹಾಗೂ ಇತರೆ ಸಿವಿಲ್ ಪ್ರಕರಣಗಳು ಸೇರಿದಂತೆ ಸುಮಾರು 117 ಪ್ರಕರಣಗಳು ಮಧ್ಯಸ್ಥಿಕೆ ಮೂಲಕ ಇತ್ಯರ್ಥಗೊಂಡಿವೆ.

ಈ "ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ" 90 ದಿನಗಳ ವಿಶೇಷ ಮಧ್ಯಸ್ಥಿಕೆ ಅಭಿಯಾನ ಯಶಸ್ವಿಗೆ ಸಹಕರಿಸಿದ ಜಿಲ್ಲಾ ನ್ಯಾಯಾಂಗ, ವಕೀಲರು, ಕಕ್ಷಿದಾರರು, ಮಧ್ಯಸ್ಥಿಕೆದಾರರು ಮತ್ತು ಸಾರ್ವಜನಿಕರಿಗೆ ಅಭಿನಂದನೆ ತಿಳಿಸಿದ್ದಾರೆ.

## ಕಂಪ್ಲಿ: ಮೂರು ದಿನಗಳ ಕೃಷಿ ತರಬೇತಿಗೆ ನೋಂದಾಯಿಸಿಕೊಳ್ಳಲು ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.08–ಕಂಪ್ಲಿಯ ಸಹಾಯಕ ಕೃಷಿ ನಿರ್ದೇಶಕರ ಕಚೇರಿ ವತಿಯಿಂದ ಸಾವಯವ ಕೃಷಿ, ನೈಸರ್ಗಿಕ ಕೃಷಿ, ತೋಟಗಾರಿಕೆ ಹಾಗೂ ಹೈನುಗಾರಿಕೆ ಕುರಿತು ಅ.16 ರಿಂದ ಅ.18 ರವರೆಗೆ ಮೂರು ದಿನಗಳ ವಿಶೇಷ ಸಾಂಸ್ಥಿಕ ತರಬೇತಿ ಕಾರ್ಯಕ್ರಮವನ್ನು ಕಂಪ್ಲಿಯ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಆಯೋಜಿಸಲಾಗಿದ್ದು, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಯ ರೈತರು, ಮಹಿಳಾ ರೈತರು ನೋಂದಾಯಿಸಿಕೊಳ್ಳಬಹುದು.

ತರಬೇತಿಗೆ ಭಾಗವಹಿಸುವ ರೈತರಿಗೆ ಉಚಿತ ಊಟ ಹಾಗೂ ವಸತಿ ವ್ಯವಸ್ಥೆ ಇದ್ದು, ಆಸಕ್ತಿಯುಳ್ಳ ರೈತರು ಜಮೀನಿನ ಎಫ್.ಐ.ಡಿ ಸಂಖ್ಯೆ ಅಥವಾ ಆಧಾರ್ ಸಂಖ್ಯೆಯೊಂದಿಗೆ ನೋಂದಣಿ ಮಾಡಿಕೊಳ್ಳಬಹುದು.

ಹೆಸರನ್ನು ನೊಂದಾಯಿಸಿಕೊಳ್ಳಲು ಇಚ್ಛಿಸುವವರು ಕೃಷಿ ಅಧಿಕಾರಿ ಯೇಸುಬಾಬು–ಮೊ.6360645255 ಮತ್ತು ಸಹಾಯಕ ಕೃಷಿ ನಿರ್ದೇಶಕಿ ವಿದ್ಯಾವತಿ ಹೊಸಮನಿ–ಮೊ.7353533138 ಗೆ ಸಂಪರ್ಕಿಸಬಹುದು ಎಂದು ಕಂಪ್ಲಿಯ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಳ್ಳಾರಿ: ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಒಳಪಡದೇ ಇದ್ದಲ್ಲಿ ಕಂಟ್ರೋಲ್ ರೂಂ ಸಂಖ್ಯೆಗೆ ಕರೆ ಮಾಡಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.08–ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ಕೈಗೊಂಡಿರುವ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಜಿಲ್ಲೆಯ ಸಾರ್ವಜನಿಕರು ತಮ್ಮ ಮನೆ ಸಮೀಕ್ಷೆಗೆ ಒಳಪಡದೇ ಇದ್ದಲ್ಲಿ ಕಂಟ್ರೋಲ್ ರೂಂ



ಸಂಖ್ಯೆ: 8277888866 ಗೆ ಕರೆ ಮಾಡಿ ಮಾಹಿತಿ ನೀಡಿದಲ್ಲಿ ಗಣತಿದಾರರು ಮನೆಗೆ ಭೇಟಿ ನೀಡಿ ಸಮೀಕ್ಷೆ ಮಾಡುವರು. ಸಾರ್ವಜನಿಕರು ಈ ಸಮೀಕ್ಷಾ ಕಾರ್ಯಕ್ಕೆ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಚಿಟಗುಪ್ಪದಲ್ಲಿ ಅದ್ದೂರಿಯಾಗಿ ಜರುಗಿದ ಭವಾನಿ ತಾಯಿಯ ಮೆರವಣಿಗೆ

## ಬೇಡಿದವರಿಗೆ ಬೇಡಿದ ವರ ನೀಡುವ ಚಿಟಗುಪ್ಪ ಅಂಬಾ ಭವಾನಿ ತಾಯಿ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಬೇಡಿದವರಿಗೆ ಬೇಡಿದ ವರ ಕೊಟ್ಟು ಭಕ್ತರನ್ನು ರಕ್ಷಿಸುತ್ತಿರುವ ಪಟ್ಟಣದ ಐತಿಹಾಸ ಪ್ರಸಿದ್ಧ ಭವಾನಿ ದೇವಿಯ ಭವ್ಯ ಪಲ್ಲಕ್ಕಿ ಉತ್ಸವ ಸಡಗರ






ಸಂಭ್ರಮದಿಂದ ಜರುಗಿತು. ನವರಾತ್ರಿಯಿಂದ ಆರಂಭವಾದ ವಿವಿಧ ಸಾಂಸ್ಕೃತಿಕ ಹಾಗೂ ಧಾರ್ಮಿಕ ಕಾರ್ಯಕ್ರಮಗಳು ಪ್ರತಿದಿನ ಬೆಳಿಗ್ಗೆ ವಿಶೇಷ ಪೂಜಾಭಿಷೇಕ ಸೇರಿದಂತೆ ನಾನಾ ಕಾರ್ಯಕ್ರಮಗಳು ಜರುಗಿದವು. ಮಂಗಳವಾರ ಸಂಜೆ ಭವಾನಿ ದೇವಸ್ಥಾನದಿಂದ ಆರಂಭವಾದ ಭವ್ಯ ಪಲ್ಲಕ್ಕಿ ಉತ್ಸವವೂ ಪಟ್ಟಣದ ಪ್ರಮುಖ ರಸ್ತೆಯ ಮೂಲಕ ಕುನಬಿವಾಡ್ ಓಣಿಯ ಅಂಬಾ ಭವಾನಿ ದೇವಸ್ಥಾನದ ವರೆಗೆ ಭವ್ಯ ಮೆರವಣಿಗೆ ಜರುಗಿ–ತು. ಮಂಗಳವಾರ ರಾತ್ರಿಯಿಡಿ ಪಟ್ಟಣದಾದ್ಯಂತ ಸಂಚರಿಸಿದ ಪಲ್ಲಕ್ಕಿ ಉತ್ಸವವೂ ಬುಧವಾರ ಬೆಳಿಗ್ಗೆ ದೇವಸ್ಥಾನಕ್ಕೆ ಪಲ್ಲಕ್ಕಿ ಆಗಮಿಸಿದ ನಂತರ ದೇವಿಗೆ ಮಹಾಮಂಗಳಾರತಿ ಸೇರಿದಂತೆ ಇತರೆ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು. ಖ್ಯಾತ ಡೊಳ್ಳು ಕಲಾವಿದರು ವಿಶೇಷ ಪ್ರದರ್ಶನ ನೀಡಿ ಪಲ್ಲಕ್ಕಿ ಉತ್ಸವಕ್ಕೆ ವಿಶೇಷ ಕಳೆ ತಂದರು. ಮಾಜಿ ಸಚಿವ ರಾಜಶೇಖರ ಪಾಟೀಲ, ಹುಮನಾಬಾದ ಶಾಸಕ ಡಾ. ಸಿದ್ದು ಪಾಟೀಲ, ಡಾ. ಚಂದ್ರಶೇಖರ ಪಾಟೀಲ, ಡಿಸಿಸಿ ಬ್ಯಾಂಕ ಜಿಲ್ಲಾ ಉಪಾಧ್ಯಕ್ಷ ಅಭಿಷೇಕ ಆರ್. ಪಾಟೀಲ್, ರಾಮಣಗೌಡರ ಬಿ. ಪಾಟೀಲ ಯತ್ನಾಳ, ಪುರಸಭೆ ಅಧ್ಯಕ್ಷ ದೀಲೀಪಕುಮಾರ ಬಗದಲಕರ, ಉಪಾಧ್ಯಕ್ಷ ನಸೀರಖಾನ ಭವಾನಿ ದೇವಸ್ಥಾನ ಸಮಿತಿಯ ಅಧ್ಯಕ್ಷ ಉತ್ತಮ ಧೂಮಳೆ ಹಾಗೂ ಪುರಸಭೆ ಸದಸ್ಯರು, ಸಮಿತಿಯ ಪದಾಧಿಕಾರಿಗಳು, ಪಟ್ಟಣ ಸೇರಿದಂತೆ ತಾಲೂಕಿನ ಸುತ್ತ ಮುತ್ತಲಿನ ಗ್ರಾಮಸ್ಥರು ಸಾವಿರಾರು ಸಂಖ್ಯೆಯಲ್ಲಿ ಭಕ್ತಾದಿಗಳು ಭಾಗವಹಿಸಿ ಪಲ್ಲಕ್ಕಿ ಮಹೋತ್ಸವದ ಅಂಗವಾಗಿ ದೇವಸ್ಥಾನಕ್ಕೆ ಆಗಮಿಸಿ ಭವಾನಿ ತಾಯಿಯ ಹಾಗೂ ಪಲ್ಲಕ್ಕಿ ದರ್ಶನ ಪಡೆದುಕೊಂಡರು.

# 'ಕಲಾ ಕೌಸ್ತುಭ' ಟ್ರಸ್ಟ್ ವತಿಯಿಂದ ಬಾಬಾ ದೇಗುಲದಲ್ಲಿ ಅನ್ನಸಂತರ್ಪಣೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ನಗರದ ಸೊನ್ನೆನಹಳ್ಳಿಯ ಶ್ರೀ ಸಾಯಿಬಾಬಾ ದೇವಾಲಯದಲ್ಲಿ ವಿಜಯದಶಮಿ ಹಾಗೂ ಸಾಯಿಬಾಬಾ ಪುಣ್ಯತಿಥಿ ಪ್ರಯುಕ್ತ ಸಂಕಲ್ಪ ಸೇವೆ ಹಾಗೂ ಅನ್ನಸಂತರ್ಪಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.



ಹವ್ಯಾಸಿ ನಾಟಕಗಳ ಮೂಲಕ ಮನರಂಜನೆ ಹಾಗೂ ಬೀದಿನಾಟಕಗಳ ಮೂಲಕ ಜಾಗೃತಿ ಮೂಡಿಸುತ್ತಿದ್ದ ಕಲಾ ಕೌಸ್ತುಭ ಟ್ರಸ್ಟ್ ಕಲಾವಿದರು ಈ ಬಾರಿ ಅನ್ನಸಂತರ್ಪಣೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು.

ಸಾಯಿಬಾಬಾ ದೇಗುಲದ ಸಂಸ್ಥಾಪಕರಾದ ಶ್ರೀ ಸನತ್ ಕುಮಾರ್ ಗುರೂಜಿ ವಿಶೇಷ ಪೂಜಾ ಕೈಂಕರ್ಯಗಳನ್ನು ನೆರವೇರಿಸಿ ಎಲ್ಲ ಕಲಾವಿದರು ಹಾಗೂ ಟ್ರಸ್ಟ್ ನ ಸದಸ್ಯರಿಗೆ ಒಳಿತಾಗಲಿ ಎಂದು ಹರಸಿದರು.

ಈ ಸಂದರ್ಭದಲ್ಲಿ ಹಿರಿಯರಾದ ಎಂ.ಎಸ್.ರಮೇಶ್, ವೃತ್ತಿರಂಗ ಟ್ರಸ್ಟ್ ಹಾಗೂ ಕಾಮಿಡಿ ಕಿಲಾಡಿ ಮೆಂಟರ್ ಗಣಪ ಗೌಡ, ಕಲಾ ಕೌಸ್ತುಭ ಟ್ರಸ್ಟ್ ಅಧ್ಯಕ್ಷೆ ಪೂರ್ಣಿಮಾ ಪವಾರ್, ಸದಸ್ಯರಾದ ಸುಮಿತ್ರಾ, ನೇತ್ರಾವತಿ, ಕಾಂಚನಾ, ಚಿಗಟೇರಿ ಕೊಟ್ರೇಶ್, ನಂದನ್ ಕುಮಾರ್, ಕಿರಣ್ ನಾಯ್ಕ್ ಸೇರಿದಂತೆ ಹಲವರು ಭಾಗಿಯಾಗಿದ್ದರು. ಭಕ್ತರಿಗೆ ಅನ್ನದಾಸೋಹ ನೆರವೇರಿಸುವುದರ ಮೂಲಕ ಎಲ್ಲ ಕಲಾವಿದರು ಬಾಬಾ ಕೃಪೆಗೆ ಪಾತ್ರರಾದರು.

## ಬೆಳೆ ಹಾನಿ ಶೀಘ್ರ ರೈತರ ಖಾತೆಗೆ ಪರಿಹಾರ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.8

ರಾಜ್ಯದಲ್ಲಿ ಪ್ರವಾಹದಿಂದ ಬೆಳೆ ಹಾನಿಯಾಗಿರುವ ರೈತರಿಗೆ ಅತಿ ಶೀಘ್ರವಾಗಿ ಪರಿಹಾರ ವನ್ನ ಅವರ ಖಾತೆಗೆ ಜಮಾ ಮಾಡ ಲಾಗುವುದು ಎಂದು ಕಂದಾಯ ಸಚಿವ ಕೃಷ್ಣ



ಬೈರೇಗೌಡ ಹೇಳಿದರು.

ಉತ್ತರ ಕರ್ನಾಟಕ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಪ್ರವಾಹ ಹಿನ್ನೆಲೆಯಲ್ಲಿ ಸರ್ಕಾರ ಮಾಡಿದ ಬೆಳೆಹಾನಿ ಜಂಟಿ ಸಮೀಕ್ಷೆ ಹಾಗೂ ಪರಿಹಾರ ವಿವರಗಳ ಕಂದಾಯ ಸಚಿವ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿದ್ದು, ಈವರೆಗೂ ಬಿಡುಗಡೆಯಾದ ಪರಿಹಾರದ ಬಗ್ಗೆ ಮಾಹಿತಿ ನೀಡಿದ್ದಾರೆ.

# ವಾಲ್ಮೀಕಿ ಮನುಕುಲದ ಚೈತನ್ಯ: ಡಾ.ಅರುಣಕುಮಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.8–ಮಹರ್ಷಿ ವಾಲ್ಮೀಕಿ ರಾಮಾಯಣ ಮಹಾಕಾವ್ಯ ರಚಿಸುವ ಮೂಲಕ ಭಾರತೀಯರ ಪ್ರಾಚೀನ ಬದುಕು, ಸಂಸ್ಕೃತಿ, ಪರಂಪರೆ,ಸಂಬಂಧಗಳು,ಜೀವನದ ಮೌಲ್ಯಗಳನ್ನುಕಟ್ಟಿಕೊಡುವದರೊಂದಿಗೆ ಮಾನವ ಕುಲಕ್ಕೆ ಚೈತನ್ಯದ ಸ್ಫೂರ್ತಿಯಾಗಿದ್ದಾರೆ ಎಂದು ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ಹೇಳಿದರು.

ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು,ಜಾತಿರಹಿತ,ವರ್ಗರಹಿತ, ಶೋಷಣೆರಹಿತ, ಸಮಪಾಲು–ಸಮಬಾಳು,ಸಮಾನತೆಯಸಮಾಜವೇ ರಾಮರಾಜ್ಯ ಎಂಬ ಪರಿಕಲ್ಪನೆ ನೀಡಿ, ಮೌಲ್ಯಯುತ ನ್ಯಾಯ, ನಿಷ್ಠೆ, ಪ್ರಾಮಾಣಿಕ ಸ್ವಾರ್ಥರಹಿತ ಬದುಕಿನ ಮಾರ್ಗವನ್ನುಮಹರ್ಷಿ ವಾಲ್ಮೀಕಿ ಅವರು ಮನುಕುಲಕ್ಕೆ ತೋರಿಸಿದ್ದಾರೆ ಎಂದರು.

ಅವರು ತೋರಿಸಿದ ಬೆಳಕಿನ ದಾರಿಯಲ್ಲಿ ನಾವು ಸಾಗಬೇಕಿದೆ. ಮಹರ್ಷಿ ತಿಳಿಸಿಕೊಟ್ಟ ಮೌಲ್ಯಯುತ ಜೀವನದ ಮಾರ್ಗ ನಮಗೆಲ್ಲರಿಗೂ ಆದರ್ಶವಾಗಿದೆ. ಮಹರ್ಷಿ ವಾಲ್ಮೀಕಿ ಅವರು'ರಾಮಾಯಣ'ಮಹಾಕಾವ್ಯದಲ್ಲಿ ರಾಮ–ರಾವಣರ ಯುದ್ಧದ ಸಂದರ್ಭದಲ್ಲಿ ಸಾವು–ಬದುಕಿನ ಹೋರಾಟದಲ್ಲಿದ್ದ ಲಕ್ಷ್ಮಣನನ್ನು ಉಳಿಸಲು ಸಂಜೀವಿನಿ ಪರ್ವತವನ್ನು ಹೊತ್ತು ತಂದ ಆಂಜನೇಯನ ಮೂಲಕ ಗಿಡಮೂಲಿಕೆಗಳನ್ನು ಬಳಸಿಕೊಂಡು ಲಕ್ಷ್ಮಣನ ಪ್ರಾಣ ಉಳಿಸಿದ ಪ್ರಸಂಗದಲ್ಲಿ ಪ್ರಕೃತಿಯೊಂದಿಗಿನ ಮಾನವ ಸಾಂಗತ್ಯ ಕುರಿತು ಮಹರ್ಷಿ ವಾಲ್ಮೀಕಿ ಅವರು ಸ್ಪಷ್ಟ ಸಂದೇಶವನ್ನು ನಮಗೆ ನೀಡಿದ್ದಾರೆ ಎಂದು ಹೇಳಿದರು.

ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕರು,ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಅ.10 ಆಯುರ್ವೇದ ಕಾಲೇಜಿನ ಪದವಿ ಪ್ರದಾನ ಸಮಾರಂಭ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.8–ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಬಿವಿವಿಎಸ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಸಮಾವರ್ತನ–2025 ಪದವಿ ಪ್ರದಾನ ಸಮಾರಂಭ ಅಕ್ಟೋಬರ 10 ರಂದು ಶುಕ್ರವಾರ ಸಾಯಂಕಾಲ 4 ಗಂ–ಟೆಗೆ ಬಿ.ವಿ.ವಿ.ಸಂಘದ ನೂತನ ಸಭಾಭವನದಲ್ಲಿ ಜರುಗಲಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಿ.ವಿ.ವಿ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ವಹಿಸಲಿದ್ದಾರೆ. ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ ಹಾಗೂ ಬಿವಿವಿಎಸ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ ಉಪಸ್ಥಿತರಿರುವರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ನವದೆಹಲಿಯ ಬೋರ್ಡ ಆಫ್ ಆಯುರ್ವೇದ, ಎನ್.ಸಿ.ಆಯ್.ಎಸ್.ಎಮ್ ನ ಅಧ್ಯಕ್ಷರಾದ ಡಾ.ಸಿದ್ಧಲಿಂಗೇಶ ಕುದರಿ ಇವರು ಆಗಮಿಸಿಲಿದ್ದಾರೆ. ಸಮಾರಂಭದಲ್ಲಿ ಒಟ್ಟು 87 ಸ್ನಾತಕ ಮತ್ತು ಸ್ನಾತಕೋತ್ತರ ಪದವೀಧರರಿಗೆ ಪ್ರತಿಜ್ಞಾವಿಧಿ ಬೋಧನೆ ಹಾಗೂ ಪದವಿ ಪ್ರದಾನ ಮಾಡಲಾಗುವದೆಂದು ಮಹಾವಿದ್ಯಾಲಯದ ಪ್ರಭಾರಿ ಪ್ರಾಚಾರ್ಯ ಡಾ.ಎಮ್.ಎಸ್.ಹಿರೇಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಜೆಪಿ ಮುಖಂಡನ ಹತ್ಯೆ: ನಾಲ್ವರ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು ಅ.8–ಗಂಗಾವತಿ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ವೆಂಕಟೇಶ್ ಕೊಲೆ ಪ್ರಕರಣ ಸಂಬಂಧ ನಾಲ್ವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ಗಂಗಾವತಿ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ವೆಂಕಟೇಶ್ ಕೊಲೆ ಪ್ರಕರಣ ಸಂಬಂಧ ಐವರು ಆರೋಪಿಗಳ ಪೈಕಿ ನಾಲ್ವರು ಆರೋಪಿಗಳನ್ನು ಬಳ್ಳಾರಿ ಜಿಲ್ಲೆ ಕಂಪ್ಲಿಯಲ್ಲಿ ಪೊಲೀಸರು ಬಂಧಿಸಿದ್ದಾರೆ.ಧನಂಜಯ್,ಮೈಲಾರಿ ಅಲಿಯಾಸ್ ವಿಜಯ್,ಸಲೀಂ, ಭೀಮ ಎಂಬುವರನ್ನು ಪೊಲೀಸರು ಬಂಧಿಸಿದ್ದಾರೆ.

# ಆರೋಗ್ಯವಂತ ಮಹಿಳೆಯಿಂದ ಸಶಕ್ತ ಸಮಾಜ ನಿರ್ಮಾಣ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.8–ಮಹಿಳೆ ಆರೋಗ್ಯವಾಗಿದ್ದರೆ ಅವರದು ಆರೋಗ್ಯವಂತ ಪರಿವಾರವಾಗಿರುತ್ತದೆ ಎಂದು ಡಾ.ಅಶೋಕ ಡೋರ್ಲೆ ಹೇಳಿದರು.

ತಾಲೂಕಿನ ಶಿರೂರ ಪಟ್ಟಣದಲ್ಲಿ ಮಂಗಳವಾರ ಬಾಗಲಕೋಟೆಯ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಕುಮಾರೇಶ್ವರ ಆಸ್ಪತ್ರೆ, ಶಿರೂರ ಪಟ್ಟಣ ಪಂಚಾಯತಿ, ಪ್ರಾಥಮಿಕ ಆರೋಗ್ಯ ಕೇಂದ್ರದ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ 'ಸ್ವಸ್ಥ ನಾರಿ ಸಶಕ್ತ ಪರಿವಾರ' ಅಭಿಯಾನ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ಇಂದು ಜನರಲ್ಲಿ ಪೌಷ್ಠಿಕ ಆಹಾರ ಸೇವನೆ ಮತ್ತು ಆರೋಗ್ಯದ ಬಗೆಗಿನ ಕಾಳಜಿ ಕಡಿಮೆಯಾಗುತ್ತಿದೆ. ಇದರಿಂದ ಮಕ್ಕಳಲ್ಲಿ ಅಪೌಷ್ಠಿಕತೆ ಹೆಚ್ಚಾಗಿ ಸಾವಿನ ಪ್ರಕರಣಗಳು ಸಂಭವಿಸುತ್ತಿವೆ. ಈ ಬಗ್ಗೆ ಜನರಲ್ಲಿ ಅದರಲ್ಲೂ ಮಹಿಳೆಯರಿಗೆ ಜಾಗೃತಿ ಮೂಡಿಸಬೇಕಿದೆ ಎಂದ ಡಾ.ಡೋರ್ಲೆ, ನಾರಿಯರು ಶಕ್ತರಾಗಿದ್ದರೆ ಅವರ ಪರಿವಾರ ಹಾಗೂ ಸಮಾಜ ಶಕ್ತಿಯುತವಾಗಿರಲು ಸಾಧ್ಯವಾಗುತ್ತದೆ ಎಂದರು.

ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ರಂಗಪ್ಪ ಮಳ್ಳಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಶಿರೂರ ಪಟ್ಟಣದ ಮಹಿಳೆಯರು ಪೌಷ್ಠಿಕತೆಯ ಬಗ್ಗೆ ತಿಳಿದು ಸರ್ಕಾರದಿಂದ ದೊರೆಯುವ ಸೌಲಭ್ಯಗಳನ್ನು ಪಡೆದು ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಹೇಳಿದರು.

ನೇತ್ರ ತಜ್ಞೆ ಡಾ.ಆರತಿ ಚೌಧರಿ, ಮಹಿಳೆಯರು, ಹದಿಹರೆಯದವರು ಮತ್ತು ಮಕ್ಕಳಿಗೆ ಆರೋಗ್ಯದ ಮಾಹಿತಿ ನೀಡಿದರು. ಸಂಯೋಜಕ ಡಾ.ಜಯರಾಜ ಮೇತ್ರಿ,ಡಾ.ಶ್ರೀನಿವಾಸ ಪಾಟೀಲ, ಆರೋಗ್ಯ ನಿರೀಕ್ಷಣಾಧಿಕಾರಿ ಕೆ.ಎಫ್. ಮಾಯಾಚಾರಿ, ಡಾ.ಚನಗೌಡ ಚನ್ನದಾಸರ,ಸಂತೋಷ ಕೊರ್ತಿ, ಈರಣ್ಣ ಬಿದರಿ, ಎ.ಬಿ.ಪೂಜಾರಿ, ಎಸ್.ಸಿ.ಮಠಪತಿ,ಎಚ್.ಐ.ಮ್ಯಾಗೇರಿ ಇದ್ದರು.

# ರಾಮಾಯಣ ಹಲವು ಆದರ್ಶಗಳ ಸಂಗಮ–ನರಗುಂದ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.8–ಮಹರ್ಷಿ ವಾಲ್ಮೀಕಿ ರಚಿಸಿದ ರಾಮಾಯಣ ಬರೀ ಕತೆಯಲ್ಲ. ಅದು ಹಲವು ಮೌಲ್ಯಗಳ ಆಗರ ಮತ್ತು ಆದರ್ಶಗಳ ಸಂಗಮವಾಗಿದೆ ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು.



ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ. ಶಿರೂರ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಮಂಗಳವಾರ ನಡೆದ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಾಲ್ಮೀಕಿ ರಾಮಾಯಣದಲ್ಲಿನ ಶ್ರೀರಾಮನ ಕಥೆ ಜೀವನಕ್ಕೆ ಶಕ್ತಿ ಮತ್ತು ಪ್ರೇರಣೆಯನ್ನು ನೀಡುತ್ತದೆ. ಉತ್ತಮ ಜೀವನ ಸಾಗಿಸಲು ಮಾರ್ಗದರ್ಶನ ನೀಡುತ್ತದೆ. ಧರ್ಮವನ್ನು ಗಾಳಿಗೆ ತೂರಿ ಮುಂದೆ ಸಾಗಿದಾಗ ನಮ್ಮನ್ನು ಎಚ್ಚರಿಸುತ್ತದೆ. ಆಗ ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ಹೇಳಿದ ನರಗುಂದ, ಮಹರ್ಷಿ ವಾಲ್ಮೀಕಿಯಂತಹ ಮಹಾತ್ಮರ ಬದುಕು–ಬರಹ,ಚಿಂತನೆ–ತತ್ವಗಳು ಮನುಕುಲಕ್ಕೆ ದಾರಿದೀಪವಾಗಿವೆ. ಅವರ ಸಂದೇಶವನ್ನು ಜೀವನದಲ್ಲಿ ಅಳವಡಿಸಿಕೊಂಡು ಆದರ್ಶಮಯ ಬದುಕನ್ನು ಕಟ್ಟಿಕೊಳ್ಳಬೇಕು ಎಂದರು.

ಕೀರ್ತಿ ದಾಸರ ಪ್ರಾರ್ಥಿಸಿದರು. ಕೆ.ಜಿ.ಲಮಾಣಿ ನಿರೂಪಿಸಿದರು. ಏಕನಾಥ ರಾಠೋಡ ವಂದಿಸಿದರು.

# ರಾಮಾಯಣ ಆದರ್ಶ ಬದುಕಿಗೆ ಕೈಗನ್ನಡಿ : ಶಾಸಕ ಕಾಶಪ್ಪನವರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.8–ಆದಿಕವಿ ಮಹರ್ಷಿ ವಾಲ್ಮೀಕಿ ರಚಿಸಿದ ಮಹಾಕಾವ್ಯ ರಾಮಾಯಣ ಸರ್ವರ ಆದರ್ಶ ಬದುಕಿಗೆ ಕೈಗನ್ನಡಿಯಾಗಿದೆ ಎಂದು ಶಾಸಕ ವಿಜಯಾನಂದ ಕಾಶಪ್ಪನವರು ಹೇಳಿದರು.

ಜಿಲ್ಲೆಯ ಹುನಗುಂದ ಪಟ್ಟಣದಲ್ಲಿ ಮಂಗಳವಾರ ಗುರುಭವನದಲ್ಲಿ ತಾಲೂಕಾ ಆಡಳಿತ, ತಾಲೂಕ ಪಂಚಾಯತಿ, ಪುರಸಭೆ ಮತ್ತು ಸಮಾಜ ಕಲ್ಯಾಣ ಇಲಾಖೆ ಹಾಗೂ ವಾಲ್ಮೀಕಿ ಸಮಾಜದ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಮಹರ್ಷಿ ವಾಲ್ಮೀಕಿ ಜಯಂತೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಮಾಯಣದಿಂದ ಮನುಷ್ಯ ಮಾನವೀಯತೆ,ಸಂಸ್ಕಾರ,ಸಂಸ್ಕೃತಿ ರೂಢಿಸಿಕೊಳ್ಳಲು ಸಾಧ್ಯವಾಗಿದೆ.ಮಹರ್ಷಿ ವಾಲ್ಮೀಕಿ ಅವರ ಆದರ್ಶಮಯ ಜೀವನ ಮತ್ತು ತತ್ವಾದರ್ಶಗಳು ಹಾಗೂ ಜೀವನ ಸಂದೇಶಗಳು ನಮ್ಮೆಲ್ಲರಿಗೂ ಪ್ರೇರಣೆಯಾಗಿದೆ. ಇಂತಹ ಮಹಾತ್ಮರನ್ನು ಒಂದು ಧರ್ಮ,ಜಾತಿಗೆ ಸೀಮಿತಗೊಳಿಸದೇ ಸರ್ವ ಜನಾಂಗವು ಕೂಡಾ ಪೂಜಿಸುವಂತಾಗಬೇಕು.ರಾಮಾಯಣ ಮತ್ತು ಮಹಾಭಾರತದಲ್ಲಿರುವ ಅನೇಕ ತತ್ವ ಸಿದ್ಧಾಂತಗಳನ್ನು ಡಾ.ಬಾಬಾಸಾಹೇಬ ಅಂಬೇಡ್ಕರ ಅವರು ಸಂವಿಧಾನದಲ್ಲಿ ಅಳವಡಿಸಿದ್ದಾರೆ ಎಂದು ಕಾಶಪ್ಪನವರ ಹೇಳಿದರು.

ನನ್ನ ಅವಧಿಯಲ್ಲಿ ಹುನಗುಂದ ಮತ್ತು ಇಳಕಲ್ ಅವಳಿ ತಾಲೂಕಿಗೆ 50 ಲಕ್ಷ ರೂ ಅನುದಾನ ನೀಡಿ ವಾಲ್ಮೀಕಿ ಸಮುದಾಯ ಭವನ ಕಾಮಗಾರಿಗೆ ಚಾಲನೆ ನೀಡಲಾಗಿತ್ತು. ಸದ್ಯ ಅವಳಿ ತಾಲೂಕಿನ ಸಮುದಾಯ ಭವನಕ್ಕೆ ಸರ್ಕಾರದಿಂದ ಪುನಃ 75 ಲಕ್ಷ ಅನುದಾನ ಮಂಜುರಾಗಿದ್ದು ಶೀಘ್ರದಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿ ಭವನವನ್ನು ಉದ್ಘಾಟಿಸುವುದರ ಜೊತೆಗೆ ಮುಂದಿನ ವರ್ಷ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ನೂತನ ಸಮುದಾಯ ಭವನದಲ್ಲಿ ಆಚರಿಸಲಾಗುವುದು ಎಂದ ಶಾಸಕರು, ಬರುವ ದಿನಗಳಲ್ಲಿ ಅವಳಿ ತಾಲೂಕಿಗೆ ಒಂದೊಂದು ಪರಿಶಿಷ್ಟಪಂಗಡ ವಸತಿ ನಿಲಯವನ್ನು ಆರಂಭಿಸುವ ಮೂಲಕ ಪರಿಶಿಷ್ಟ ಪಂಗಡದ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಶ್ರಮಿಸುತ್ತೇನೆ ಎಂದರು.

ಬಸವನ ಬಾಗೇವಾಡಿಯ ಸಂಗನಬಸವ ಮಹಾಸ್ವಾಮಿಗಳು ಸಾನಿಧ್ಯ ವಹಿಸಿ ಮಾತನಾಡಿ, ಸಾಮಾನ್ಯ ಮನುಷನಾಗಿದ್ದ ವ್ಯಕ್ತಿಯೊಬ್ಬ ರಾಮಾಯಣದಂತ ಮಹಾಕಾವ್ಯವನ್ನು ರಚಿಸಿದ್ದು ಅಗಾಧ ಸಾಧನೆಯಾಗಿದೆ. ಅವರ ಜೀವನ ಸಂದೇಶ ಹಾಗೂ ಪ್ರತಿಪಾದಿಸಿದ ತತ್ವಗಳು ನಾಡಿನ ಎಲ್ಲೆಡೆ ಪಸರಿಸಬೇಕು ಎಂದರು. ಬಾಗಲಕೋಟೆಯ ನಿವೃತ್ತ ಉಪನ್ಯಾಸಕ ಜಿ.ಕೆ.ತಳವಾರ ಉಪನ್ಯಾಸ ನೀಡಿ, ಮಹರ್ಷಿ ವಾಲ್ಮೀಕಿ ರಚಿಸಿದ ರಾಮಾಯಣ ಜಗತ್ತಿಗೆ ಮಾದರಿಯಾಗಿದ್ದು, ಭಾರತದಲ್ಲಿ ಅಷ್ಟೇ ಅಲ್ಲ ವಿದೇಶದಲ್ಲೂ ಕೂಡಾ ವಿವಿಧ ಹೆಸರಿನಲ್ಲಿ ಆಚರಣೆ–ಯಾಗುತ್ತಿದೆ. ಮನುಕುಲಕ್ಕೆ ಕೌಟುಂಬಿಕ ನಡವಳಿಕೆಯನ್ನು ಹೇಳಿಕೊಟ್ಟ ಮಹಾ ಕಾವ್ಯವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಪಡೆದ ಸಮಾಜದ ಪ್ರತಿಭಾನ್ವಿತ ಮಕ್ಕಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಚಂದ್ರಶೇಖರ ಮಹಾಸ್ವಾಮಿಗಳು, ತಹಶೀಲ್ದಾರ ಪ್ರದೀಪಕುಮಾರ ಹಿರೇಮಠ, ತಾಪಂ ಇಒ ಮುರಳಿಧರ್ ದೇಶಪಾಂಡೆ, ಕ್ಷೇತ್ರ ಶಿಕ್ಷಣಾಧಿಕಾರಿ ಜಸ್ಮೀನ್ ಕಿಲ್ಲೇದಾರ,ಕ್ಷೇತ್ರ ಸಮನ್ವಯಾಧಿಕಾರಿ ಸದಾಶಿವ ಗುಡಗುಂಟಿ,ನಾಗರಾಜ ಹೊಸೂರ, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಮಲ್ಲಿಕಾರ್ಜುನ ಕಟ್ಟಿಮನಿ, ವಿಜಯಮಹಾಂತೇಶ ಗತ್ತನಕೇರಿ, ಮಲ್ಲಣ್ಣ ಅಂಟರತಾನಿ, ವಾಲ್ಮೀಕಿ ಸಮಾಜದ ತಾಲೂಕ ಅಧ್ಯಕ್ಷ ಚಂದ್ರು ತಳವಾರ, ಸೋಮಶೇಖರ ಬಲಕುಂದಿ, ಬಸವರಾಜ ಹಿರೇಗೌಡರ, ಶಿವಶಂಕ್ರಪ್ಪ ವಾಲಿಕಾರ, ಹನಮಂತ ಕೆಲೂರ, ಹನಮಂತ ಬೊಳಲಗಿಡದ ಸೇರಿದಂತೆ ಅನೇಕರು ಇದ್ದರು.

ಜಿ.ವೈ.ಆಲೂರ ಸ್ವಾಗತಿಸಿದರು. ಎಸ್.ಟಿ.ರಂಗಾಪುರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಂಗಮೇಶ ಹೊದ್ಲೂರ ನಿರೂಪಿಸಿ ವಂದಿಸಿದರು.

# ವಾಲ್ಮೀಕಿಯ ರಾಮರಾಜ್ಯ ಪಿಎಂ ಮೋದಿಯಿಂದ ಕಾರ್ಯಗತ: ಚರಂತಿಮಠ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.8–ಅಧಿಕಾರಕ್ಕಿಂತ ಧರ್ಮದ ಮೌಲ್ಯಗಳು ಮುಖ್ಯ ಎಂದು ಸಾರಿದ ಮಹರ್ಷಿ ವಾಲ್ಮೀಕಿಯ ರಾಮರಾಜ್ಯವನ್ನು ಪ್ರಧಾನಿ ಮೋದಿ ನನಸು ಮಾಡುತ್ತಿದ್ದಾರೆ ಎಂದು ಮಾಜಿ ಶಾಸಕ ವೀರಣ್ಣ ಚರಂತಿಮಠ ಹೇಳಿದರು. ನಗರದ ಶಿವಾನಂದ ಜೀನನಲ್ಲಿರುವ ಬಿಜೆಪಿ ಕಾರ್ಯಾಲಯದಲ್ಲಿ ಭಾರತೀಯ ಜನತಾ ಪಾರ್ಟಿ ಬಾಗಲಕೋಟೆ ಮತಕ್ಷೇತ್ರದಿಂದ ಹಮ್ಮಿಕೊಂಡ ಮಹರ್ಷಿ ವಾಲ್ಮೀಕಿಯವರ ಜಯಂತಿ ದಿನಾಚರಣೆ ನಿಮಿತ್ಯ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದ ಅವರು, ಪ್ರತಿಯೊಬ್ಬರು ಅಧಿಕಾರವನ್ನು ಧರ್ಮದ ಹಾದಿಯಲ್ಲಿ ಪಡೆಯಬೇಕು ಎಂದರು.

ನ್ಯಾಯ ನಿಷ್ಠೆ,ಪ್ರಾಮಾಣಿಕತೆಯಿಂದ ಅಧಿಕಾರ ನಡೆಸಬೇಕೆಂಬ ಮಹರ್ಷಿ ವಾಲ್ಮೀಕಿ ಬಯಸಿದ ರಾಮರಾಜ್ಯವನ್ನು ಪ್ರಧಾನಿ ಮೋದಿ ಕಟ್ಟುತ್ತಿದ್ದಾರೆ. ಪ್ರತಿಯೊಬ್ಬ ಪ್ರಜೆಯ ಸಮಸ್ಯೆಗಳ ಪರಿಹಾರವನ್ನು ರಾಮಾಯಣದಲ್ಲಿ ನಿತ್ಯನೂತನವಾಗಿ ಕಾಣಬಹುದು. ಕಲೆ,ಸಾಹಿತ್ಯ, ಸಂಗೀತ, ಶಾಸ್ತ್ರಗಳ ಬಳಕೆ, ವೈಜ್ಞಾನಿಕ ಬಳಕೆಮ ವಿನೂತನ ವಿದ್ಯಾಬ್ಯಾಸ ಕ್ರಮ, ಪರಿಸರ, ಸಾಮಾಜಿಕ ನ್ಯಾಯ, ಅರ್ಥ ನೀತಿ, ನ್ಯಾಯ ನೀತಿ, ಮನುಷ್ಯ ಸಂಬಂಧಗಳು ಮುಂತಾದ ಎಲ್ಲ ವಿಚಾರಗಳನ್ನು ಸಾರ್ವಕಾಲಿಕ ಸತ್ಯವಾಗಿ ರಚಿಸಲಾಗಿದೆ ಎಂದು ಚರಂತಿಮಠ ಹೇಳಿದರು.

ಡಾ.ಎಂ.ಎಸ್.ದಡ್ಡೇನವರ, ಅಯ್ಯಪ್ಪ ವಾಲ್ಮೀಕಿ, ರಾಜು ಮುದೇನೂರ, ಬಸವರಾಜ ಯಂಕಂಚಿ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಉಪಾಧ್ಯಕ್ಷೆ ಶೋಭಾ ರಾವ,ಸದಸ್ಯರಾದ ಸರಸ್ವತಿ ಕುರಬರ,ಶಶಿಕಲಾ ಮಜ್ಜಗಿ,ಶಾಂತಾ ಹನಮಕ್ಕನವರ,ಪ್ರೇಮಾ ಅಂಬಿಗೇರ, ಚೆನ್ನಯ್ಯ ಹಿರೇಮಠ,ಮಹಾಂತೇಶ ಹಿರೇಮಠ,ಕುಮಾರ ಯಳ್ಳಿಗುತ್ತಿ, ಗುಂಡುರಾವ ಶಿಂಧೆ,ಶಿವಾನಂದ ಟವಳಿ, ಯಲ್ಲಪ್ಪ ನಾರಾಯಣಿ, ಬಸವರಾಜ ಹುನಗುಂದ,ಉಮೇಶ ಹಂಚಿನಾಳ,ಶ್ರೀಧರ ನಾಗರಬೆಟ್ಟ, ರವಿ ನಾಯಕ, ಶಂಕರ ಗಲಗ, ಚಂದ್ರು ರಾಮೊಡಗಿ,ನಾಗರಾಜ ನಾರಾಯಣಕರ,ಅಶೋಕ ಪವಾರ, ದೂಳಪ್ಪ ಕೊಪ್ಪದ ಜ್ಯೋತಿ ಬಂಡಿವಡ್ಡರ ಹಾಗೂ ಅನೇಕ ಕಾರ್ಯಕರ್ತರು ಭಾಗವಹಿಸಿದ್ದರು.

# ಕಿಶೋರನ ವಿರುದ್ಧ ಕಾನೂನಾತ್ಮಕ ಕ್ರಮಕೈಗೊಳ್ಳಲು ಮನವಿ




ಮಲ್ಲಮ್ಮ ನುಡಿ ವಾರ್ತೆ

ಔರಾದ್ : ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ ಆರ್ ಗವಾಯಿ ಅವರ ಮೇಲೆ ಶೂ ಎಸೆದ ವಕೀಲ ರಾಕೇಶ್ ಕಿಶೋರನ ವಿರುದ್ಧ ಕಾನೂನಾತ್ಮಕ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಎಸ್ಸಿ–ಎಸ್ಟಿ ನೌಕರರ ಸಮನ್ವಯ ಸಮಿತಿಯಿಂದ ರಾಷ್ಟ್ರಪತಿಗಳಿಗೆ ಬರೆದ ಮನವಿ ಪತ್ರ ತಹಸೀಲ್ದಾರ್ ಅವರಿಗೆ ಬುಧವಾರ ಸಲ್ಲಿಸಲಾಯಿತು.

ತಾಲೂಕು ಅಧ್ಯಕ್ಷ ರಾಜಕುಮಾರ ಡೊಂಗರೆ ಮಾತನಾಡಿ, ಅಕ್ಟೋಬರ್ 6ರಂದು ಸರ್ವೋಚ್ಚನ್ಯಾಯಾಲಯದ ಆವರಣದಲ್ಲಿ ನಡೆದ ಈ ಘಟನೆ ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಮೇಲಿನ ದಾಳಿಯಾಗಿದೆ.

ಶೂ ಎಸೆದ ವಕೀಲ ರಾಕೇಶ್ ಕಿಶೋರನ ಕೃತ್ಯದಿಂದ ದೇಶ ಹಾಗೂ ದೇಶದ ಸಂವಿಧಾನಕ್ಕೆ ಅಪಮಾನಿಸಿದಂತಿದೆ. ಈ ಘಟನೆಯ ಕುರಿತು ತೀವ್ರ ತನಿಖೆ ನಡೆಯಬೇಕು ಮತ್ತು ತಪ್ಪಿತಸ್ಥ ಪೂರ್ವಗ್ರಹ ಪೀಡಿತ ವಕೀಲನ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸರ್ಕಾರಿ ನೌಕರ ಸಂಘದ ಅಧ್ಯಕ್ಷ ಪಂಡರಿ ಆಡೆ, ಎಸ್ಸಿ ಎಸ್ಟಿ ನೌಕರತ ಸಮನ್ವಯ ಸಮಿತಿ ಪ್ರಧಾನ ಕಾರ್ಯದರ್ಶಿ ಬಾಲಾಜಿ ಅಮರವಾಡಿ, ಗೊಂಡ್ ನೌಕರ ಸಂಘದ ಅಧ್ಯಕ್ಷ ಗಣಪತಿ ಮೇತ್ರೆ, ಕಲ್ಯಾಣ ಕರ್ನಾಟಕ ನೌಕರ ಸಂಘದ ಅಧ್ಯಕ್ಷ ರವಿ ಡೋಳೆ, ತಾಲೂಕು ಮಟ್ಟದ ಅಧಿಕಾರಿಗಳಾದ ಬಿ.ಜೆ ರಂಗೇಶ, ಇಮಾಲಪ್ಪ, ಅನೀಲಕುಮಾರ್, ಆರೋಗ್ಯ ಇಲಾಖೆಯ ಅನೀತಾ ಸೇರಿದಂತೆ ಇನ್ನಿತರರಿದ್ದರು.

# ಸಂಘಟನೆ ಬಲಗೊಳ್ಳಲು ಶಿಕ್ಷಕರ ಸಹಕಾರ ಅವಶ್ಯ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.8–ಸಂಘಟನೆಯ ಮೂಲಕ ಶಿಕ್ಷಕರ ಹಲವು ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲಾಗುತ್ತಿದ್ದು,ಸಂಘಟನೆ ಇನ್ನಷ್ಟು ಬಲಗೊಳ್ಳಲು ಶಿಕ್ಷಕರ ಸಹಕಾರ ಅವಶ್ಯವಾಗಿದೆ ಎಂದು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಕಾಲೇಜು ಅಧ್ಯಾಪಕರ ಸಂಘದ(ರುಕ್ವಾ)ಅಧ್ಯಕ್ಷ ಎಂ.ಎ.ಬಿರಾದಾರ ಹೇಳಿದರು.




ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ. ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಆಶ್ರಯದಲ್ಲಿ ನಡೆದ ರುಕ್ವಾ ಕಾರ್ಯಕಾರಿ ಮಂಡಳಿಯ ಸಭೆಯಲ್ಲಿ ಅವರು ಮಾತನಾಡಿದರು.

ಶಿಕ್ಷಕರು ಸಹಕಾರ ನೀಡುವುದರ ಜೊತೆಗೆ ಒಗ್ಗಟ್ಟನ್ನು ಪ್ರದರ್ಶಿಸಿದಲ್ಲಿ ಸಮಸ್ಯೆಗಳಿಗೆ ತ್ವರಿತಗತಿಯಲ್ಲಿ ಪರಿಹಾರವನ್ನು ಪಡೆಯಬಹುದಾಗಿದೆ. ಬಾಕಿ ಇರುವ ತಮ್ಮ ಕೆಲಸಗಳನ್ನು ಮಾಡಿಕೊಳ್ಳಲು ಬೇರೆ ಮಾರ್ಗ ಹಿಡಿಯದೇ ರುಕ್ವಾದ ಗಮನಕ್ಕೆ ತರುವಂತೆ ತಿಳಿಸಿದ ಬಿರಾದಾರ, ಪರೀಕ್ಷಾ ಸಂಬಂಧಿ ಸಮಸ್ಯೆಗಳ ಬಗ್ಗೆ ಈಗಾಗಲೇ ವಿಶ್ವವಿದ್ಯಾಲಯದ ಕುಲಸಚಿವರೊಂದಿಗೆ ಚರ್ಚಿಸಲಾಗಿದ್ದು, ಅವರು ಧನಾತ್ಮಕವಾಗಿ ಸ್ಪಂದಿಸಿದ್ದಾರೆ. ಸೇವಾ ಜೇಷ್ಠತೆಗೆ ಅನುಗುಣವಾಗಿ ಶಿಕ್ಷಕರಿಗೆ ಪರೀಕ್ಷಾ ಕಾರ್ಯವನ್ನು ವಹಿಸಿಕೊಡಬೇಕು ಎಂಬುದು ರುಕ್ವಾದ ನಿಲುವು ಆಗಿದೆ ಎಂದರು.

ಗೌರವ ಅಧ್ಯಕ್ಷ ಶ್ರೀನಿವಾಸ ಗೌಡರ ಮಾತನಾಡಿ, ಶಿಕ್ಷಣ ಕ್ಷೇತ್ರದಲ್ಲಿ ಹಲವು ಸಮಸ್ಯೆಗಳಿದ್ದು ಅವುಗಳನ್ನು ಪರಿಹರಿಸುವಲ್ಲಿ ರುಕ್ವಾದ ಪಾತ್ರ ಮಹತ್ವದ್ದಾಗಿದೆ. ಇತ್ತೀಚಿನ ದಿನಗಳಲ್ಲಿ ತಮ್ಮ ನೆಲೆಯನ್ನು ಕಳೆದುಕೊಳ್ಳುತ್ತಿರುವ ಸಂಘಟನೆಗೆ ಶಕ್ತಿ ತುಂಬಬೇಕಿದೆ.ಇದಕ್ಕೆ ಎಲ್ಲರ ಸಹಕಾರ ಅವಶ್ಯವಾಗಿದೆ. ಅನುದಾನರಹಿತ ಉಪನ್ಯಾಸಕರು ಕೂಡಾ ರುಕ್ವಾದ ಜೊತೆಗೆ ಸಂಪರ್ಕವನ್ನಿಟ್ಟುಕೊಂಡು ಹೋರಾಟದಲ್ಲಿ ಕೈಜೋಡಿಸಬೇಕು ಎಂದರು.

1.1.2016ರಿಂದ 31.12.2020ರವರೆಗೆ ಸೇವಾ ನಿವೃತ್ತಿ, ನಿಧನ ಮುಂತಾದ ಕಾರಣಗಳಿಂದ ತೆರವಾದ ಹುದ್ದೆಗಳನ್ನು ಸರಕಾರ ಭರ್ತಿ ಮಾಡಿಕೊಳ್ಳಲಿದ್ದು, ಅನುದಾನ ರಹಿತ ಶಿಕ್ಷಕರು ಆ ನಿಟ್ಟಿನಲ್ಲಿ ಬೇಕಾಗುವ ಶೈಕ್ಷಣಿಕ ಅರ್ಹತೆಗಳನ್ನು ಪಡೆದುಕೊಳ್ಳಬೇಕು ಎಂದು ಅವರು ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಶ್ರೀನಿವಾಸ ನರಗುಂದ, ಚರ್ಚೆ ಮತ್ತು ವೈಜ್ಞಾನಿಕ ಹಿನ್ನೆಲೆಯಲ್ಲಿ ನಿರ್ಣಯಗಳನ್ನು ತಗೆದುಕೊಂಡಲ್ಲಿ ಶೈಕ್ಷಣಿಕ ಚಟುವಟಿಕೆ ಮತ್ತು ಪರೀಕ್ಷಾ ಸಂಬಂಧಿತ ಸಮಸ್ಯೆಗಳ ಸಂ–ಖ್ಯೆ ತಗ್ಗಿಸಬಹುದು. ಬದಲಾದ ಸನ್ನಿವೇಶದಲ್ಲಿ ಹಲವು ಸಮಸ್ಯೆ–ಸವಾಲುಗಳಿವೆ. ದುಪ್ಪಟ್ಟು ದರದ ಬೋಧನಾ ಶುಲ್ಕ,ಕಾಲ್ಪನಿಕ ವೇತನ ಮುಂತಾದ ವಿಷಯಗಳ ಮೇಲೆ ಬೆಳಕು ಹರಡಬೇಕಿದೆ. ಈ ಹಿನ್ನೆಲೆಯಲ್ಲಿ ಸಂಘಟನೆಯ ಸಹಾಯ, ಸಹಕಾರ ಅವಶ್ಯವಾಗಿದೆ ಎಂದರು.

ಕೀರ್ತಿ ದಾಸರ ಪ್ರಾರ್ಥಿಸಿದರು. ಪ್ರೊ.ಎಸ್.ಎಸ್.ಹಂಗರಗಿ ಸ್ವಾಗತಿಸಿದರು. ಕೆ.ಜಿ.ಲಮಾಣಿ ನಿರೂಪಿಸಿದರು.ಎಂ.ಡಿ.ಕೋರವಾರ ವಂದಿಸಿದರು.ಗೌರವ ಕಾರ್ಯದರ್ಶಿ ಡಾ.ಗಿರೀಶ ಮಸೂರಕರ, ಸಹ ಕಾರ್ಯದರ್ಶಿ ಎಸ್.ಬಿ.ಪರ್ವತೀಕರ, ರುಕ್ವಾ ಕಾರ್ಯಕಾರಿ ಮಂಡಳಿ ಸದಸ್ಯರಾದ ಡಾ.ಬಿ.ಎಂ.ತುರಡಗಿ, ಎಸ್.ಬಿ.ಬಿರಾದಾರ,ಡಾ.ಎ.ಆರ್. ರಾಠೋಡ,ಆಯ್.ಜೆ.ಬೆಳ್ಳಣ್ಣವರ, ನಾಗರೆಡ್ಡಿ,ಶಿಕ್ಷಕ–ಶಿಕ್ಷಕೇತರ ಸಿಬ್ಬಂದಿ ಇದ್ದರು.

# ಆಯ್ಕೆಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

ಕಲಬುರಗಿ,ಅ.8–ಪ್ರಸಕ್ತ 2025–26ನೇ ಸಾಲಿನ ಶೇ.7.25ರ ಅನುದಾನದಲ್ಲಿ ಸೇಡಂ ಪುರಸಭೆ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಇತರೆ ಹಿಂದುಳಿದ ವರ್ಗಗಳ ಜನಾಂಗದ ಪದವಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಶಿಷ್ಯವೇತನ ನೀಡಲು ಅರ್ಜಿ ಆಹ್ವಾನಿಸಿ, ಶಿಷ್ಯವೇತನಕ್ಕಾಗಿ ಆಯ್ಕೆಯಾದ ವಿದ್ಯಾರ್ಥಿಗಳ ಆಯ್ಕೆ ಪಟ್ಟಿಯನ್ನು ಸೇಡಂ ಪುರಸಭೆಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಈ ಆಯ್ಕೆ ಪಟ್ಟಿಗೆ ಸಾರ್ವಜನಿಕರಿಂದ ಏನಾದರೂ ಆಕ್ಷೇಪಣೆಗಳಿದ್ದಲ್ಲಿ ಲಿಖಿತವಾಗಿ ಪೂರಕ ದಾಖಲಾತಿಗಳೊಂದಿಗೆ 2025ರ ಅಕ್ಟೋಬರ್ 18ರೊಳಗಾಗಿ ಸೇಡಂ ಪುರಸಭೆಯಲ್ಲಿ ಆಕ್ಷೇಪಣೆ ಸಲ್ಲಿಸಬೇಕೆಂದು ಸೇಡಂ ಪುರಸಭೆಯ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

# ನಾರಾಯಣಪುರ ಬಸವಸಾಗರ
## ಜಲಾಶಯಕ್ಕೆ ಸಚಿವರಿಂದ ಬಾಗಿನ ಅರ್ಪಣೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ಅ 08: ಜಿಲ್ಲೆಯ ಹುಣಸಗಿತಾಲ್ಲೂಕಿನನಾರಾಯಣಪುರ ಬಸವಸಾಗರ ಜಲಾಶಯಕ್ಕೆ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಅವರು ಬುಧವಾರ ದಂದು ಬಾಗಿನ ಅರ್ಪಿಸಿದರು.

ಈ ವೇಳೆ ಅವರು ಮಾತನಾಡಿ, ಬಾಗಿನ ಅರ್ಪಣೆ ಸ್ವಲ್ಪ ತಡವಾಗಿದ್ದು, ರೈತರು ಎರಡನೇ ಬೆಳೆಯನ್ನು ತೊಂಬತ್ತು ದಿನಗಳಲ್ಲಿ ಬರುವ ಬೆಳೆಗಳನ್ನು ಹಾಕಬೇಕು. ರೈತರು ಹಾಳಾದರೆ ದೇಶ ಹಾಳಾಗುತ್ತದೆ. ಈ ಬಾರಿ ನೀರಿನ ಮಟ್ಟದ ಸರಿಯಾಗಿದೆ. ಸಣ್ಣಪುಟ್ಟ ಕೆಲಸಗಳನ್ನು ನಿರ್ವಹಣಾ ಮಾಡಬೇಕು. ಈ ಬಾರಿ ಸಾಕಷ್ಟು ಪ್ರಮಾಣದಲ್ಲಿ ಬೆಳೆ ಹಾನಿಯಾಗಿದ್ದು, ಈ ಕುರಿತು ಮುಖ್ಯಮಂತ್ರಿಗ 'ಳೊಂದಿಗೆ ಚರ್ಚಿಸಲಾಗಿದೆ. ಮುಂದಿನ ನಾಲ್ಕು- ಐದು ದಿನಗಳಲ್ಲಿ ಕೇಂದ್ರ ಸರ್ಕಾರಕ್ಕೆ ವರದಿ ಸಲ್ಲಿಸಿ ಎನ್ ಡಿ ಆರ್ ಎಫ್ ಅಡಿಯಲ್ಲಿ ರೈತರಿಗೆ ಪರಿಹಾರ ನೀಡುವ ಕಾರ್ಯ ವಾಗಲಿದೆ ಎಂದರು.

ರೈತರು ಸದೃಢವಾಗಬೇಕು . ಕೆರೆ 'ಗಳನ್ನು ತುಂಬುವ ಕಾರ್ಯ ಈಗಾಗಲೇ ಬಿಜಾಪುರ, ಯಾದಗಿರಿ ಸೇರಿದಂತೆ ಎಲ್ಲಾ ಜಿಲ್ಲೆಯಲ್ಲಿ ಆರಂಭವಾಗಿದ್ದು, ಮಾ??9 ಎರಡನೇ ವಾರದಲ್ಲಿ ಕೈ ಸೇರುವ ಬೆಳೆಗಳನ್ನು ಹಾಕಬೇಕು. ಈ ಬಗ್ಗೆ ಮುಂಜಾಗ್ರತಾ ಕ್ರಮಗಳನ್ನು ರೈತರು ವಹಿಸಬೇಕು ಎಂದರು.

ಮುಂದಿನ ವರ್ಷ ಮಾ??9 ತಿಂಗಳಲ್ಲಿ ಜಲಧಾರ ಯೋಜನೆಯನ್ನು ಪೂರ್ಣಗೊಳಿಸಲಾಗುತ್ತದೆ. ಅಲ್ಲದೆ

ಬೂದಿಹಾಳ ಏತ ನೀರಾವರಿ ಯೋಜನೆಯಡಿ ಪೈಪ್ ಲೈನ್ ಕೆಲಸವಾಗಿದ್ದು, ಯೋಜನೆ ನೀರಿನಿಂದ 20-30 ಹೆಕ್ಟೇರ್ ಪ್ರದೇಶಕ್ಕೆ ನೀರು ಒದಗಿಸಲಾಗುತ್ತದೆ ಎಂದರು.

ಆಲಮಟ್ಟಿ ಅಣೆಕಟ್ಟಿನ ಎತ್ತರವನ್ನು ಹೆಚ್ಚಿಸುವ ರಾಜ್ಯ ಸರ್ಕಾರದ ಬದ್ಧತೆಯನ್ನು ಹೊಂದಿದೆ. ಕೃಷ್ಣಾ ಮೇಲ್ದಂಡೆ ಯೋಜನೆಯನ್ನು ಪೂರ್ಣಗೊಳಿಸಿ ರೈತರ ಜಮೀನುಗಳಿಗೆ ನೀರು ಹರಿಸುವುದು ನಮ್ಮ ಸರ್ಕಾರದ ವಾಗ್ದಾನವಾಗಿದೆ. ಇದಕ್ಕಾಗಿ ಆದಷ್ಟು ಬೇಗ ಭೂಸ್ವಾಧೀನ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ, ನಮ್ಮ ಪಾಲಿನ ನೀರಿನ ಸದ್ಬಳಕೆ ಮಾಡಿಕೊಳ್ಳಲು ನಾವು ಬದ್ಧರಿದ್ದೇವೆ ಎಂದು ಹೇಳಿದರು.

ಅದ್ದೂರಿ ಮೆರವಣಿಗೆ ಇದಕ್ಕೂ ಮೊದಲು ಗೇಜ್ ರೂಂನಲ್ಲಿ ಶಕ್ತಿ ಮಾತೆಯ ಚಿತ್ರಕ್ಕೆ ಸಚಿವರು ಪೂಜೆ ಸಲ್ಲಿಸಿದರು. ಅಲ್ಲಿಂದ ಸಚಿವ, ಶಾಸಕರನ್ನು, ದೇಶಮುಖ ವಿದ್ಯಾ ಸಂಸ್ಥೆಯ ಕುಂಭಹೊತ್ತ ವಿದ್ಯಾರ್ಥಿನಿಯರು ಬಾಗಿನ ಅರ್ಪಿಸುವ ಸ್ಥಳದ ವರೆಗೂ ಅದ್ದೂರಿ ಮೆರವಣಿಗೆಯಲ್ಲಿ ಕ- ರೆದೊಯ್ದರು. ಈ ವೇಳೆ ಅರ್ಚಕ ರಾಘವೇಂದ್ರ ಜೋಷಿ ಅವರು ಪೂಜಾ ಕಾರ್ಯ ನೆರವೇರಿಸಿದರು.

ಜಲಾಶಯದಲ್ಲಿ 33.313 ಟಿಎಂಸಿ ನೀರು ಸಂಗ್ರಹಿಸಿ: ಜಲಾಶಯ 33.313 ಟಿಎಂಸಿ ಸಂಗ್ರಹ ಸಾಮರ್ಥ್ಯ ಹೊಂದಿದ್ದು, 33.313 ಟಿಎಂಸಿ ಸಂಗ್ರಹಿಸಿ ಕೊಳ್ಳಲಾಗಿದೆ. ಇದಕ್ಕೂ ಮುನ್ನ ವಾದ್ಯ ಮೇಳ ಮತ್ತು ಕುಂಭಕಳಸ ಮೆರವಣಿಗೆ ಮೂಲಕ ಸಚಿವ, ಜಿಲ್ಲಾಧಿಕಾರಿಯನ್ನು ಸ್ವಾಗತಿಸಲಾಯಿತು.

ಇದೇ ಸಂದರ್ಭದಲ್ಲಿ ಸುರಪುರ ಕ್ಷೇತ್ರದ ಶಾಸಕ ರಾಜಾ ವೇಣುಗೋಪಾಲ ನಾಯಕ, ಯಾದಗಿರಿ ಕ್ಷೇತ್ರದ ಶಾಸಕರಾದ ಚನ್ನರೆಡ್ಡಿ ಪಾಟೀಲ್ ತುನ್ನೂರು, ಜಿಲ್ಲಾಧಿಕಾರಿಗಳಾದ ಹರ್ಷಲ್ ಭೋಯರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, ಡ್ಯಾಂ ಮುಖ್ಯ ಎಂಜಿನಿಯರ್

ರಮೇಶ ಜಿ.ರಾಠೋಡ, ಇಇ ಹನಮಂತಪ್ಪಕನ್ನೂರು, ಎಇಇಗಳಾದ ವಿದ್ಯಾಧರ್, ರಾಘವೇಂದ್ರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು,

ಮುಖಂಡರು ಹಾಗೂ ಕಾರ್ಯಕರ್ತರು ಇದ್ದರು.

# ಅಮರ ಖಂಡ್ರೆ ಪೆನಲ್‌ಗೆ ಭರ್ಜರಿ ಗೆಲುವು



ಬೀದರ.ಅ.08: ಭಾಲ್ಕಿ ತಾಲ್ಲೂಕಿನ ಹುಣಜಿ(ಎ) ಸಮೀಪದ ಮಹಾತ್ಮ ಗಾಂಧಿ ಸಹಕಾರ ಸಕ್ಕರೆ ಕಾರ್ಖಾನೆ ಆಡಳಿತ ಮಂಡಳಿಯ ನಿರ್ದೇಶಕರ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಬೀದರ್ ಡಿಸಿಸಿ ಬ್ಯಾಂಕ್‌ನ ಅಧ್ಯಕ್ಷ ಅಮರಕುಮಾರ ಖಂಡ್ರೆ ನೇತೃತ್ವದ ಪೆನಲ್‌ಗೆ ಭಾರಿ ಗೆಲುವು ದೊರೆತಿದೆ. ಬಿಜೆಪಿ ಅಭ್ಯರ್ಥಿಗಳು ಸೋಲು ಅನುಭವಿಸಿದರು.

ಕಾರ್ಖಾನೆಯ ಒಟ್ಟು 13 ನಿರ್ದೇಶಕರ ಸ್ಥಾನಗಳಲ್ಲಿ 8 ಸ್ಥಾನಗಳಿಗೆ ಸೋಮವಾರ ಕಾರ್ಖಾನೆ ಆವರಣದಲ್ಲಿ ಚುನಾವಣೆ ನಡೆದಿತ್ತು. 5 ಸ್ಥಾನಗಳು ಅವಿರೋಧವಾಗಿ ಆಯ್ಕೆಯಾಗಿದ್ದವು. ಚುನಾವಣೆ ನಂತರ ರಾತ್ರಿ 11 ಗಂಟೆ ಸುಮಾರಿಗೆ ಫಲಿತಾಂಶ ಹೊರಬಿದ್ದಿದ್ದು, ಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಮರಕುಮಾರ ಖಂಡ್ರೆ ನೇತೃತ್ವದ ಪೆನಲ್ ಎಲ್ಲ ಸ್ಥಾನಗಳಲ್ಲಿ ಗೆಲುವು ಸಾಧಿಸಿದೆ. ಈ ಬಾರಿಯ ಚುನಾವಣೆಯಲ್ಲಿ ಬಿಜೆಪಿಯ 6 ಅಭ್ಯರ್ಥಿಗಳು ಸ್ಪರ್ಧಿಸಿದ್ದರು. ಹೀಗಾಗಿ ಚುನಾವಣಾ ಕಣ ಕುತೂಹಲ ಮೂಡಿಸಿತ್ತು. ಒಟ್ಟು 4452 ರೈತ ಮತದಾರರು ತಮ್ಮ ಹಕ್ಕು ಚಲಾಯಿಸಿದ್ದರು. ಆದರೆ ಬಿಜೆಪಿ ಒಬ್ಬ ಅಭ್ಯರ್ಥಿ ಕೂಡ 400 ಮತಗಳ ಗಡಿ ದಾಟಲು ಸಾಧ್ಯವಾಗಲಿಲ್ಲ. ಹೀಗಾಗಿ ನಿರೀಕ್ಷೆಯಂತೆ ಅಮರಕುಮಾರ ಖಂಡ್ರೆ ನೇತೃತ್ವದ ಪೆನಲ್‌ನ 5 ಅವಿರೋಧ ಆಯ್ಕೆ ಸೇರಿದಂತೆ ಎಲ್ಲ 13 ಸ್ಥಾನಗಳಲ್ಲಿ ಗೆಲುವು ಸಾಧಿಸಿದರು.

ಗೆಲುವು ಸಾಧಿಸಿದವರ ವಿವರ: ಸಾಮಾನ್ಯ ಕ್ಷೇತ್ರದಿಂದ 5, ಸಾಮಾನ್ಯ ಮಹಿಳಾ ಕ್ಷೇತ್ರದಿಂದ 2 ಮತ್ತು ಪರಿಶಿಷ್ಟ ಜಾತಿ 1 ಸ್ಥಾನಕ್ಕೆ ಚುನಾವಣೆ ನಡೆಯಿತು.

ಸಾಮಾನ್ಯ ಕ್ಷೇತ್ರದಿಂದ ಅಮರಕುಮಾರ ಖಂಡ್ರೆ 2,643, ಅಂಕುಶ ತುಳಿಸಿರಾಮ ಪಾಟೀಲ 2,538, ಮಲ್ಲಿಕಾರ್ಜುನ ಪಾಟೀಲ ಮುಗನೂರ 2,522, ಸಂತೋಷಕುಮಾರ ವೈಜಿನಾಥರಾವ್ ಪಾಟೀಲ 2,352 ಮತ್ತು ಸಂದೀಪ ಮಾನೆ 2,419 ಮತಗಳನ್ನು ಪಡೆದು ಗೆಲುವು ಸಾಧಿಸಿದ್ದಾರೆ. ಸಾಮಾನ್ಯ ಮಹಿಳಾ ಕ್ಷೇತ್ರದಿಂದ ನಳಿನಿ ಪಾಟೀಲ 2,446, ಸುರೇಖಾ ಶೆಟಕಾರ್ 2,352 ಮತಗಳನ್ನು ಪಡೆದು ಗೆಲುವು ಸಾಧಿಸಿದ್ದಾರೆ. ಪರಿಶಿಷ್ಟ ಜಾತಿ ಕ್ಷೇತ್ರದಿಂದ ಶಂಕರ ಚವಾಣ್ 2,566 ಮತಗಳನ್ನು ಪಡೆದು ವಿಜಯಿ ಆಗಿದ್ದಾರೆ.

ಚುನಾವಣೆಯಲ್ಲಿ ಫಲಿತಾಂಶ ಹೊರಬೀಳುತ್ತಲೇ ಅಮರಕುಮಾರ ಖಂಡ್ರೆ ನೇತೃತ್ವದ ಪೆನಲ್‌ನ ಅಭಿಮಾನಿಗಳು ಪಟಾಕಿ ಸಿಡಿಸಿ, ಸಿಹಿ ವಿನಿಮಯ ಮಾಡಿಕೊಂಡು ಸಂಭ್ರಮಿಸಿದರು. ಕಾರ್ಖಾನೆ ಕಚೇರಿ ಅಧೀಕ್ಷಕ ರಮೇಶ ಚಿದ್ರಿ, ಲೆಕ್ಕಿಗ ಅಮರೇಶ್ವರ ಮೋಹಿತೆ, ಶ್ರೀನಿವಾಸ ನೆಲವಾಡೆ, ಗಣೇಶ ಪಾಟೀಲ, ಉಮಾಕಾಂತ ಚಿಟ್ಮೆ, ದಿಲೀಪ, ರಾಜೇಂದ್ರ, ವೈಜಿನಾಥ ಸೇರಿದಂತೆ ಮುಂತಾದವರು ಅಮರ ಖಂಡ್ರೆ ಅವರನ್ನು ಸನ್ಮಾನಿಸಿದರು.

# ಅವರ್‌ನಲ್ಲಿನ ಕಲ್ಲು ತೆಗೆದು
# ಯಶಸ್ವಿ ಶಸ್ತ್ರಚಿಕಿತ್ಸೆ




ಕಲಬುರಗಿ: ಅ.8: ಮಧ್ಯವಯಸ್ಸಿನ ಮಹಿಳೆಯೊಬ್ಬರ ಯಕೃತ್ತಿನ ನಾಳದಲ್ಲಿ ಇದ್ದ ಕಲ್ಲನ್ನು ಲ್ಯಾಪರೋಸ್ಕಫಿಕ್ ಮೂಲಕ ಪರಿಶೋಧನೆ ಮಾಡಿ, ಅದನ್ನು ಶಸ್ತ್ರ ಚಿಕಿತ್ಸೆಯ ಮೂಲಕ ತೆರವುಗೊಳಿಸಲಾಗಿದೆ ಎಂದು ಯಶೋಧಾ ಆಸ್ಪತ್ರೆಯ ಖ್ಯಾತ ವೈದ್ಯ ತಜ್ಞಡಾ. ವಿಜಯಕುಮಾರ್ ಬಡಾ ಅವರು ಹೇಳಿದರು.

ನಗರದ ಯಶೋಧಾ ಆಸ್ಪತ್ರೆಯಲ್ಲಿ ಯಶಸ್ವಿಯಾಗಿ ಶಸ್ತ್ರಚಿಕಿತ್ಸೆಗೆ ಒಳಗಾದ ಮಹಿಳೆ ವಿಜಯಪುರ ಜಿಲ್ಲೆಯ ಇಂಡಿ ನಿವಾಸಿ ಶ್ರೀಮತಿ ಸಲಿಮಾ ಹಾಗೂ ಕುಟುಂಬಸ್ಥರೊಂದಿಗೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾನು ಜಿಲ್ಲೆಯಲ್ಲಿಯೇ ಜನಿಸಿದ್ದು, ಇಲ್ಲಿಯೇ ಶಿಕ್ಷಣವನ್ನು ಪಡೆದು, ಈಗ ಹೈದ್ರಾಬಾದ್ ಯಶೋಧಾ ಆಸ್ಪತ್ರೆಯಲ್ಲಿಯೂ ಸಹ ತಜ್ಞ ವೈದ್ಯರಾಗಿ ಕಾರ್ಯನಿರ್ವಹಿಸುತ್ತಿದ್ದು, ಪ್ರತಿ ಮಂಗಳವಾರ ಸ್ಥಳೀಯ ಆಸ್ಪತ್ರೆಗೆ ಭೇಟಿ ನೀಡುತ್ತಿರುವೆ. ಇಂತಹ ಸಂದರ್ಭದಲ್ಲಿ ಇಂಡಿಯ ಮಹಿಳೆ ಸಲೀಮಾ ಅವರು ನಿರಂತರ ಹೊಟ್ಟೆನೋವು, ಎದೆಯುರಿ ಮತ್ತು ವಾಯುಭಾರದಿಂದ ಬಳಲುತ್ತಿದ್ದು, ಅವರು ನಮ್ಮ ಸಂಪರ್ಕಕ್ಕೆ ಬಂದಾಗ ಅವರಿಗೆ ಹೈದ್ರಾಬಾದ್‌ಗೆ ಕರೆದೊಯ್ದು ಯಶಸ್ವಿ ಶಸ್ತ್ರಚಿಕಿತ್ಸೆ ಮಾಡಲಾಗಿದೆ ಎಂದರು. ಮಹಿಳೆಯು ಮೌಲ್ಯಮಾಪನಕ್ಕೆ ಒಳಗಾದ ನಂತರ ಇಮೇಜಿಂಗ ಪರೀಕ್ಷೆಗಳು (ಸಿಇಸಿಟಿ ಮತ್ತು ಎಂಆರ್‌ಸಿಪಿ) ಹೆಪಟೊಲೆಥಿಯಾಸಿಸ್ ಮತ್ತು ಕೊಲೆಲಿಥಿಯಾಸೆಸ್ಸೊಂದಿಗೆ ಎಡ ಯಕೃತ್ತಿನ ನಾಳದ ಚೀಲವನ್ನು ಬಹಿರಂಗಪಡಿಸಿದವು. ರೋಗಿಯು ಸಾಮಾನ್ಯ ಅರಿವಳಿಕೆ ಅಡಿಯಲ್ಲಿ ಲ್ಯಾಪರೋಸ್ಕೋಪಿಕ್ ಸಿಬಿಡಿ ಎಕ್ಸ್ಪ್ಲೋರೇಷನ್, ಹಪಾಟಿಕ್ ಡಕ್ಟ್ ಸ್ಟೋನ್ ಕ್ಲಿಯರನ್ಸ್, ಕೊಲೆಡೋಕೋಸ್ಕೋಪಿ, ಕೊಲೆಸಿಸ್ಟಕ್ಟಮಿ ಮತ್ತು ಹೆಪಾಟಿಕೊಡ್ಯೂಡೆನೊಸ್ಟೋಮಿಗೆ ಒಳಗಾದರು. ಕೇವಲ ನಾಲ್ಕು ಗಂಟೆಗಳಲ್ಲಿ ಯಶಸ್ವಿ ಶಸ್ತ್ರ ಚಿಕಿತ್ಸೆ ಆಗಿದೆ. ಕಲ್ಲು ಸುಮಾರು ಎರಡು ಸೆಂಟಿಮೀಟರ್ ಇತ್ತು ಎಂದು ಅವರು ವಿವರಿಸಿದರು.

ಈಗ ಸಂಪೂರ್ಣ ಗುಣಮುಖವಾಗಿರುವ ಮಹಿಳೆಯು ಆಸ್ಪತ್ರೆಯಿಂದ ಬಿಡುಗಡೆ ಹೊಂದಿದ್ದಾರೆ ಎಂದು ಹೇಳಿದ ಅವರು, ಯಶೋಧಾ ಆಸ್ಪತ್ರೆಯು ಅತ್ಯಾಧುನಿಕ ಶಸ್ತ್ರ ಚಿಕಿಸಾ ಸೌಲಭ್ಯಗಳನ್ನು ಹೊಂದಿದ್ದು, ರೋಗಿಗಳಿಗೆ ಅತ್ಯುನ್ನತ ಮಟ್ಟದಲ್ಲಿ ಚಿಕಿತ್ಸೆಯನ್ನು ಒದಗಿಸುತ್ತಿದೆ. ಯಾವುದೇ ಕಾರಣಕ್ಕೂ ರೋಗಿಗಳು ಹೆದರಬಾರದು. ರೋಗಿಗಳು ಕೇವಲ ತಾತ್ಕಾಲಿಕ ಪರಿಹಾರದ ಮೊರೆ ಹೋಗುವುದು

ಅಪಾಯಕಾರಿಯಾಗಿದೆ. ಹಾಗಾಗಿ ಯಾವುದೇ ಸಮಸ್ಯೆ ಇದ್ದರೂ ಸಹ ಶಾಶ್ವತ ಪರಿಹಾರಕ್ಕಾಗಿ ಚಿಕಿತ್ಸೆ ಪಡೆಯುವುದು ಉತ್ತಮ ಎಂದರು.

ಯಶೋಧಾ ಆಸ್ಪತ್ರೆಯು ಹೈದ್ರಾಬಾದ್, ಸೋಮಾಜಿಗುಡ, ಸಿಕಂದ್ರಾಬಾದ್ ಮಲಕ್ಪೇಟೆ ಮುಂತಾದ ಹೈಟೆಕ್ ನಗರದಲ್ಲಿ 4000 ಹಾಸಿಗೆಗಳನ್ನು ಹೊಂದಿರುವ ನಾಲ್ಕು ಸ್ವತಂತ್ರ ಆಸ್ಪತ್ರೆಗಳನ್ನು ಹೊಂದಿದೆ. ಕೈಗೆಟುಕುವ ದರದಲ್ಲಿ ವಿಶ್ವದರ್ಜೆಯ ಆರೋಗ್ಯ ಸೇವೆಗಳನ್ನು ಒದಗಿಸುತ್ತಿದೆ ಎಂದು ಅವರು ತಿಳಿಸಿದರು.

ಚಿಕಿತ್ಸೆಗೆ ಒಳಗಾದ ಮಹಿಳೆ ಸಲಿಮಾ ಅವರು ಮಾತನಾಡಿ, ನನಗೆ ಎದೆನೋವು ಹಾಗೂ ಎದೆಯುರಿ ಮತ್ತು ಉಸಿರಾಟದ ತೊಂದರೆಯನ್ನು ಅನುಭವಿಸಿದ್ದೆ. ನಂತರ ವಿಜಯಪುರ ಜಿಲ್ಲೆಯಲ್ಲಿಯೇ ವೈದ್ಯರಿಗೆ ತೋರಿಸಿದೆ. ಕಡಿಮೆಯಾಗಲಿಲ್ಲ. ವೈದ್ಯರೊಬ್ಬರು ಕಲಬುರ್ಗಿಯ ಯಶೋಧಾ ಆಸ್ಪತ್ರೆಯ ಹೆಸರು ಹೇಳಿದಾಗ ನಾವು ಆಸ್ಪತ್ರೆಗೆ ಬಂದು ಚಿಕಿತ್ಸೆ ತೆಗೆದುಕೊಂಡಿದ್ದು, ನನ್ನ ಎಲ್ಲ ನೋವುಗಳು ನಿವಾರಣೆಯಾಗಿವೆ ಎಂದರು. ಮಹಿಳೆಯ ಸಂಬಂಧಿ ಹಾರೂನ್ ಅವರು ಮಾತನಾಡಿ, ಯಶೋಧಾ ಆಸ್ಪತ್ರೆಯು ನಮಗೆ ಜೀವವನ್ನು ಉಳಿಸಿದೆ. ಶಸ್ತ್ರ ಚಿಕಿತ್ಸೆಗೆ ಸುಮಾರು ನಾಲ್ಕು ಲಕ್ಷ ರೂ.ಗಳನ್ನು ವೆಚ್ಚ ಮಾಡಲಾಗಿದೆ ಎಂದರು.

# ಮಹಾತ್ಮ ಗಾಂಧೀಜಿಯವರ 157 ಜನ್ಮ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 08 : ಕಿತ್ತೂರ ರಾಣಿ ಚನ್ನಮ್ಮ ಮಹಿಳಾ ಮಂಡಲ ಶಕ್ತಿಸದನ (ಸ್ವದಾರ ಗ್ರಹ) ಟೀಚರ್ಸ್ ಕಾಲೋನಿ ಬೀದರ ಕೇಂದ್ರದಲ್ಲಿ ಮಹಾತ್ಮ ಗಾಂಧೀಜಿಯವರ 157ನೇ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮಕ್ಕೆ ಸಂಸ್ಥೆಯ ಸಿಬ್ಬಂದಿಗಳಾದ ಶ್ರೀಮತಿ ಗೀತಾ ಶ್ರೀಹರಿ ಅವರು ಮಹಾತ್ಮ ಗಾಂಧೀಜಿಯವರಿಗೆ ಮಾಲಾರ್ಪಣೆ ಮಾಡಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡುತ್ತ ಗಾಂಧೀಜಿಯವರ ಮಾರ್ಗದರ್ಶನದಲ್ಲಿ ಭಾರತಕ್ಕೆ ಸತ್ಯ ಮತ್ತು ಅಹಿಂಸೆಯ ಮೂಲಕ ಸ್ವಾತಂತ್ರ ತಂದು ಕೊಟ್ಟರು. ಅಲ್ಲದೆ ಅವರ ಸರಳ ಜೀವನದ ತತ್ವಗಳು ಇಂದಿನ ಯುವ ಪೀಳಿಗೆಗೆ ಅನುಕೂಲವಾಗಲಿವೆ ಎಂದು ಕರೆಕೊಟ್ಟರು.

ಈ ಕಾರ್ಯಕ್ರಮದಲ್ಲಿ ಶಕ್ತಿ ಸದನದ ಸಿಬ್ಬಂದಿಗಳು, ಸಾಂತ್ವನ ಕೇಂದ್ರದ ಸಿಬ್ಬಂದಿಗಳು ಹಾಗೂ

ಫಲಾನಿಭಾವಿಗಳು ಉಪಸ್ಥಿತ್ತರಿದ್ದರು. ಕಾರ್ಯಕ್ರಮಕ್ಕೆ ಶ್ರೀಮತಿ ಪಿಲಾಸಮತಿ ಅವರಿಂದ ವಂದನಾರ್ಪಣೆ ಮಾಡಿದರು.

# ಆರ್‌ಎಸ್‌ಎಸ್ ನಿಷೇಧಕ್ಕೆ ಆಗ್ರಹಿಸಿ ಅ. 18ರಂದು ಪ್ರತಿಭಟನೆ




ಕಲಬುರಗಿ: ಅ.8- ಅಸಮಾನತೆಯ ಪ್ರತೀಕ, ಸಂವಿಧಾನ ವಿರೋಧಿಯಾಗಿರುವ ಮನುವಾದದ ರಾಷ್ಟ್ರೀಯ ಸ್ವಯಂ ಸೇವಕ ಸಂಘವನ್ನು ನಿಷೇಧಿಸಿ ಪ್ರಜಾಪ್ರಭುತ್ವ ಉಳಿಸಿ ಎಂಬ ಪ್ರತಿಭಟನಾ ಕಾರ್ಯಕ್ರಮವನ್ನು ಅಕ್ಟೋಬರ್ 18ರಂದು ನಗರದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯ (ಕ್ರಾಂತಿಕಾರಿ) ರಾಜ್ಯ ಸಂಚಾಲಕ ಅರ್ಜುನ್ ಭದ್ರೆ ಅವರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ಆರ್‌ಎಸ್‌ಎಸ್ ಜನ್ಮಶತಾಬ್ದಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದ್ದು, ಆ ಸಂಘಟನೆಯು ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬುಡಮೇಲು ಮಾಡುತ್ತಿದೆ. ಆ ಸಂಘಟನೆಯು ಕ್ಯಾನ್ಸರ್ ರೋಗವಿದ್ದಂತೆ. ದೇಶದಲ್ಲಿ ಕೋಮುದ್ವೇಷ ಹರಡಿಸುವ ಇದನ್ನು ಬೇರು ಸಹಿತ ಕಿತ್ತು ಹಾಕಬೇಕಿದೆ. ಆ ನಿಟ್ಟಿನಲ್ಲಿ ಅಂದು ಬೆಳಿಗ್ಗೆ 11-30ಕ್ಕೆ ನಗರದ ಸರ್ದಾರ್ ವಲ್ಲಭಬಾಯಿ ಪಟೇಲ್ ವೃತ್ತದಿಂದ ಜಗತ್ ವೃತ್ತದವರೆಗೆ ಪ್ರತಿಭಟನಾ ಮೆರವಣಿಗೆ ಆಯೋಜಿಸಲಾಗಿದೆ ಎಂದರು. ಮಹಿಳಾ ಸ್ವಾತಂತ್ರ್ಯ ನಿರಾಕರಣೆ, ಶೂದ್ರರಿಗೆ ವಿದ್ಯೆಯ ನಿರಾಕರಣೆ, ಬ್ರಾಹ್ಮಣ ಸಾಮ್ರಾಜ್ಯ ಸ್ಥಾಪನೆ, ಸಂವಿಧಾನ, ರಾಷ್ಟ್ರಧ್ವಜ, ರಾಷ್ಟ್ರಗೀತೆ ಒಪ್ಪದ, ನೊಂದಣಿ ಇಲ್ಲದ, ಬ್ಯಾಂಕ್ ಖಾತೆ ಇಲ್ಲದ, ಬೇನಾಮಿ ಸಂಸ್ಥೆ ಆರ್‌ಎಸ್‌ಎಸ್ ನಮ್ಮ ದೇಶದ ಸಾಂಸ್ಕೃತಿಕ ಸಂಘಟನೆಯೇ ಅಲ್ಲ ಎಂದು ಅವರು ದೂರಿದರು. ರಾಷ್ಟ್ರೀಯ ಸ್ವಯಂ ಸೇವಕ ಸಂಘವು ಜಾತ್ಯತೀತ ನಾಗರಿಕತೆ ವಿರುದ್ಧ ಹಾಗೂ ಸರ್ವಾಧಿಕಾರಿ ವ್ಯವಸ್ಥೆಯ ಪರವಾದ ಆಶಯಗಳನ್ನು ಹೊಂದಿದೆ. ಹಿಟ್ಲರ್, ಮುಸಲೋನಿಯಂಥವರು ಅನುಸರಿಸಿದ ಫ್ಯಾಸಿಸಂ ಅನ್ನು ದೇಶದಲ್ಲಿ ಆರ್‌ಎಸ್‌ಎಸ್ ಪೋಷಿಸುತ್ತಿದೆ. ಅನ್ಯ ಧರ್ಮೀಯರನ್ನು ಕೀಳಾಗಿ ಕಾಣುವ, ಹಿಂದುತ್ವದ ಹೆಸರಿನಲ್ಲಿ ದೇಶದ ಹಿಂದುಳಿದ ಸಮುದಾಯದ ಯುವಕರ ಮಿದುಳಿನಲ್ಲಿ ಕೋಮುದ್ವೇಷ, ಹಗೆತನ, ಶತೃತ್ವ ಬೆಳೆಸುತ್ತಿರುವ ಆರ್‌ಎಸ್‌ಎಸ್‌ನ್ನು ಕೇಂದ್ರ ಸರ್ಕಾರ ನಿಷೇಧಿಸಬೇಕು ಎಂದು ಅವರು ಆಗ್ರಹಿಸಿದರು. ಭಾರತದ ದೇಶವನ್ನು ರಾಜಕೀಯ, ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ಸಾಂಸ್ಕೃತಿಕವಾಗಿ ವಿನಾಶದ ಅಂಚಿಗೆ ತಂದಿಟ್ಟ ಆರ್‌ಎಸ್‌ಎಸ್ 100 ವರ್ಷಗಳನ್ನು ಪೂರೈಸಿದೆ. ದೇಶದ ಸಂವಿಧಾನ, ರಾಷ್ಟ್ರಧ್ವಜ ಹಾಗೂ ರಾಷ್ಟ್ರಗೀತೆ ಒಪ್ಪದ ಈ ಸಂಘಟನೆಯು ದೇಶ ಕಟ್ಟಲು ಏನು ಕೊಡುಗೆ ನೀಡಿದೆ? ಎಂದು ಪ್ರಶ್ನಿಸಿದ ಅವರು, ಕೇಂದ್ರ ಸರ್ಕಾರ ಯಾ-

ಕಾಗಿ ಅದರ 100ನೇ ವರ್ಷಾಚರಣೆ ಸಂದರ್ಭದಲ್ಲಿ ನಾಣ್ಯ, ಅಂಚೆ ಚೀಟಿ ಬಿಡುಗಡೆ ಮಾಡಿದೆ? ಇದನ್ನು ನಾವು ಖಂಡಿಸುತ್ತೇವೆ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಸುಪ್ರಿಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರತ್ತ ಮನುವಾದಿ, ಸನಾತನವಾದಿ ಬೆಳಿಗ್ಗೆ ಶೂ ಎಸೆಯಲು ಯತ್ನಿಸಿದ. ಅದನ್ನು ಪ್ರಧಾನಿ ನರೇಂದ್ರ ಮೋದಿ ಅವರು ರಾತ್ರಿ 8.30ಕ್ಕೆ ಖಂಡಿಸುತ್ತಾರೆ. ಇದೇ ಕೃತ್ಯ ಆರ್‌ಎಸ್‌ಎಸ್ ಮುಖ್ಯಸ್ಥರ ವಿರುದ್ಧ ನಡೆದಿದ್ದರೆ ಪ್ರಧಾನಿ ಅಷ್ಟು ಹೊತ್ತು ಮೌನವಹಿಸುತ್ತಿದ್ದರೇ ಎಂದು ಅವರು ಖಾರವಾಗಿ ಪ್ರಶ್ನಿಸಿದರು. ಸುದ್ದಿಗೋಷ್ಠಿಯಲ್ಲಿ ರಾಜ್ಯ ಸಂಘಟನಾ ಸಂಚಾಲಕ ಮಲ್ಲಿಕಾರ್ಜುನ್ ಕ್ರಾಂತಿ, ಜಿಲ್ಲಾ ಸಂಚಾಲಕ ಮಹಾಂತೇಶ್ ಬಡದಾಳ್, ಜಿಲ್ಲಾ ಸಂಘಟನಾ ಸಂಚಾಲಕರಾದ ಮಲ್ಲಿಕಾರ್ಜುನ್ ಖನ್ನಾ, ಸೂರ್ಯಕಾಂತ್ ಆಜಾದಪೂರ್, ತಾಲ್ಲೂಕು ಸಂಚಾಲಕ ಮಹೇಶ ಕೋಕಿಲೆ, ಅಜೀಜಸಾಬ್ ಐಕೂರ್ ಯಾದಗಿರಿ ಮುಂತಾದವರು ಉಪಸ್ಥಿತರಿದ್ದರು.

# ಭಾರತದೊಂದಿಗೆ ಯುದ್ಧದ ಸಾಧ್ಯತೆ
## ನಿಜ: ಪಾಕಿಸ್ತಾನ ರಕ್ಷಣಾ ಸಚಿವ



ಇಸ್ಲಾಮಾಬಾದ್: ಪಾಕಿಸ್ತಾನದ ರಕ್ಷಣಾ ಸಚಿವ ಖವಾಜಾ ಆಸಿಫ್ ಮತ್ತೊಂದು ಆಧಾರರಹಿತ ಹೇಳಿಕೆಯನ್ನು ನೀಡಿದ್ದಾರೆ. ಮೊಘಲ್ ಚಕ್ರವರ್ತಿ ಔರಂಗಜೇಬನ ಆಳ್ವಿಕೆಯಲ್ಲಿ ಹೊರತುಪಡಿಸಿ ಭಾರತ "ನಿಜವಾಗಿಯೂ ಎಂದಿಗೂ ಒಗ್ಗಟ್ಟಾಗಿರಲಿಲ್ಲ ಅಥವಾ ಅಖಂಡವಾಗಿರಲಿಲ್ಲ" ಎಂದು ಆಸಿಫ್ ಹೇಳಿದ್ದಾರೆ.

ಮೂಲಭೂತ ಐತಿಹಾಸಿಕ ಸಂಗತಿಗಳಿಗೆ ತದ್ವಿರುದ್ಧವಾಗಿರುವ ಈ ಹೇಳಿಕೆ ಈಗ ನಗೆಪಾಟಲಿಗೀಡಾಗಿದೆ. ಪಾಕಿಸ್ತಾನದ ಸಮಾ ಟಿವಿಗೆ ನೀಡಿದ ಸಂದರ್ಶನದಲ್ಲಿ, ಆಸಿಫ್ "ಭಾರತದೊಂದಿಗೆ ಯುದ್ಧದ ಸಾಧ್ಯತೆಗಳು ನಿಜ" ಎಂದು ಇದೇ ವೇಳೆ ಹೇಳಿದ್ದಾರೆ.

ಸರ್ಕಾರಿ ಪ್ರಾಯೋಜಿತ ಭಯೋತ್ಪಾದನೆಯನ್ನು ಬೆಂಬಲಿಸುವುದನ್ನು ಪಾಕಿಸ್ತಾನ ಮುಂದುವರೆಸಿದರೆ, ಅದರ ಭೌಗೋಳಿಕ ಉಪಸ್ಥಿತಿಯನ್ನೇ ಅಳಿಸಿಹಾಕುತ್ತೇವೆ ಎಂದು ಬಗ್ಗೆ ಭಾರತ ಇಸ್ಲಾಮಾಬಾದ್‌ಗೆ ಎಚ್ಚರಿಕೆ ನೀಡಿದ ಕೆಲವು ದಿನಗಳ ನಂತರ ಖವಾಜಾ ಆಸಿಫ್ ಹೇಳಿಕೆಗಳು ಬಂದಿವೆ.

"ಔರಂಗಜೇಬನ ಆಳ್ವಿಕೆಯಲ್ಲಿ ಸಂಕ್ಷಿಪ್ತವಾಗಿ ಹೊರತುಪಡಿಸಿ, ಭಾರತ ಎಂದಿಗೂ ಒಂದೇ ಏಕೀಕೃತ ರಾಷ್ಟ್ರವಾಗಿರಲಿಲ್ಲ ಎಂದು ಇತಿಹಾಸ ತೋರಿಸುತ್ತದೆ. ಪಾಕಿಸ್ತಾನವನ್ನು ಅಲ್ಲಾಹನ ಹೆಸರಿನಲ್ಲಿ ರಚಿಸಲಾಗಿದೆ. ದೇಶದ ಆಂತರಿಕವಾಗಿ ನಾವು ವಾದಿಸುತ್ತೇವೆ ಮತ್ತು ಸ್ಪರ್ಧಿಸುತ್ತೇವೆ. ಆದರೆ ಭಾರತದೊಂದಿಗಿನ ಹೋರಾಟದಲ್ಲಿ, ನಾವು ಒಟ್ಟಿಗೆ ಬರುತ್ತೇವೆ" ಎಂದು ಆಸಿಫ್ ದೂರದರ್ಶನ ಸಂದರ್ಶನದಲ್ಲಿ ಹೇಳಿದರು.

ಬ್ರಿಟಿಷ್ ವಸಾಹತುಶಾಹಿಗಳಿಂದ ಸ್ವಾತಂತ್ರ್ಯ ಪಡೆದ ನಂತರ ಏಳು ದಶಕಗಳಿಗೂ ಹೆಚ್ಚು ಕಾಲ, ಭಾರತವು ಸ್ಥಿರ ಮತ್ತು ಏಕೀಕೃತ ಪ್ರಜಾಪ್ರಭುತ್ವವಾಗಿ ಉಳಿದಿದೆ, ಪಾಕಿಸ್ತಾನವು ಬಹು ಮಿಲಿಟರಿ ದಂಗೆಗಳು ಮತ್ತು ಆಂತರಿಕ ವಿಭಜನೆಗಳನ್ನು ಕಂಡಿದೆ. ಅದಕ್ಕೂ ಮುಂಚೆಯೇ, ಕ್ರಿ.ಪೂ 322 ರಿಂದ 185 ರವರೆಗಿನ ಮೌರ್ಯ ಸಾಮ್ರಾಜ್ಯವು ಭಾರತೀಯ ಉಪಖಂಡದ ಹೆಚ್ಚಿನ ಭಾಗವನ್ನು ಒಂದು ರಾಜ್ಯವಾಗಿ ಏಕೀಕರಿಸಿತು. ಇದು ಭಾರತೀಯ ಉಪಖಂಡದಲ್ಲಿ ಅಸ್ತಿತ್ವದಲ್ಲಿದ್ದ ಅತಿದೊಡ್ಡ ಸಾಮ್ರಾಜ್ಯಗಳಲ್ಲಿ ಒಂದಾಗಿತ್ತು. ಬಹಳ ಸಮಯದ ನಂತರ, ಗುಪ್ತ ರಾಜವಂಶದ ಸಮುದ್ರಗುಪ್ತ ಮತ್ತು ಪುಷ್ಯಭೂತಿ ರಾಜವಂಶದ ಹರ್ಷವರ್ಧನ ಕೂಡ ಪ್ರಾಚೀನ ಭಾರತದ ದೊಡ್ಡ ಭಾಗಗಳಿಗೆ ರಾಜಕೀಯ ಏಕತೆಯನ್ನು ತಂದರು.

ಮೊಘಲ್ ಆಳ್ವಿಕೆಯಲ್ಲಿ, ಪ್ರಾದೇಶಿಕ ವ್ಯಾಪ್ತಿಯ ವಿಷಯದಲ್ಲಿ, ಔರಂಗಜೇಬನ ಆಳ್ವಿಕೆಯು ಬಹುತೇಕ ಇಡೀ ಭಾರತೀಯ ಉಪಖಂಡವನ್ನು ಆವರಿಸುವಂತೆ ವಿಸ್ತರಿಸಿತು. ಆದಾಗ್ಯೂ, ಅವನ ಆಳ್ವಿಕೆಯು ಅಂತ್ಯವಿಲ್ಲದ ಯುದ್ಧಗಳು ಮತ್ತು ದಂಗೆಗಳಿಂದ ಗುರುತಿಸಲ್ಪಟ್ಟಿತು, ಅಕ್ಬರ್ ಆಳ್ವಿಕೆಯಂತಲ್ಲದೆ, ಇದು ಸ್ಥಿರತೆಯೊಂದಿಗೆ ದೊಡ್ಡ ಏಕೀಕರಣವನ್ನು ಕಂಡಿತು ಎಂದು ಖವಾಜಾ ಆಸಿಫ್ ಹೇಳಿದ್ದಾರೆ.

ಭಾರತದೊಂದಿಗೆ ಯುದ್ಧದ ಸಾಧ್ಯತೆಗಳು ನಿಜವೆಂದು ಆಸಿಫ್ ಹೇಳಿದ್ದಾರೆ. "ಪರಿಸ್ಥಿತಿ ಉಲ್ಬಣಗೊಳ್ಳುವುದನ್ನು ನಾನು ಬಯಸುವುದಿಲ್ಲ, ಆದರೆ ಅಪಾಯಗಳು ನಿಜ, ಮತ್ತು ನಾನು ಅದನ್ನು ನಿರಾಕರಿಸುತ್ತಿಲ್ಲ. ಯುದ್ಧದ ವಿಷಯಕ್ಕೆ ಬಂದರೆ, ದೇವರು ಬಯಸಿದರೆ, ನಾವು ಮೊದಲಿಗಿಂತ ಉತ್ತಮ ಫಲಿತಾಂಶವನ್ನು ಸಾಧಿಸುತ್ತೇವೆ" ಎಂದು ಅವರು ಹೇಳಿದರು.

ಪರಮಾಣು ಚಾಲಿತ ಎರಡು ರಾಷ್ಟ್ರಗಳ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ ಈ ಹೇಳಿಕೆಗಳು ಬಂದಿವೆ. ಕಳೆದ ವಾರ, ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಪಾಕಿಸ್ತಾನಕ್ಕೆ ಕಠಿಣ ಎಚ್ಚರಿಕೆ ನೀಡಿ, "ಭಯೋತ್ಪಾದನೆಗೆ ಬೆಂಬಲ ನೀಡುವುದನ್ನು ನಿಲ್ಲಿಸಿ ಅಥವಾ ತನ್ನ ಭೌಗೋಳಿಕ ಉಪಸ್ಥಿತಿಯನ್ನು ಕಳೆದುಕೊಳ್ಳಲು ಸಿದ್ಧರಾಗಿ" ಎಂದು ಹೇಳಿದ್ದರು.

"ಈ ಬಾರಿ ಭಾರತ ಸಂಪೂರ್ಣವಾಗಿ ಸಿದ್ಧವಾಗಿದೆ. ಆಪರೇಷನ್ ಸಿಂಧೂರ್ 1.0 ಸಮಯದಲ್ಲಿ ನಾವು ಪ್ರದರ್ಶಿಸಿದ ಸಂಯಮವನ್ನು ನಾವು ತೋರಿಸುವುದಿಲ್ಲ. ಈ ಬಾರಿ, ಪಾಕಿಸ್ತಾನ ಭೌಗೋಳಿಕವಾಗಿ ಅಸ್ತಿತ್ವದಲ್ಲಿರಲು ಬಯಸುತ್ತದೆಯೇ ಎಂದು ಯೋಚಿಸುವಂತೆ ಕ್ರಮ ಕೈಗೊಳ್ಳಲಾಗುವುದು" ಎಂದು ಅವರು ಹೇಳಿದರು.

ಖವಾಜಾ ಆಸಿಫ್ ಜಾಗತಿಕ ವೇದಿಕೆಗಳಲ್ಲಿ ಪಾಕಿಸ್ತಾನವನ್ನು ಮುಜುಗರಕ್ಕೀಡು ಮಾಡಿದ ಇತಿಹಾಸವನ್ನು ಹೊಂದಿದ್ದಾರೆ. ಕಳೆದ ತಿಂಗಳು, ಪಾಕಿಸ್ತಾನದ ಪ್ರವಾಹ ಪರಿಸ್ಥಿತಿಯನ್ನು ನಿಭಾಯಿಸಲು ಅವರು ವಿಚಿತ್ರ ಪರಿಹಾರವನ್ನು ನೀಡಿದರು. ತಗ್ಗು ಪ್ರದೇಶಗಳಲ್ಲಿ ವಾಸಿಸುವ ಪಾಕಿಸ್ತಾನಿಗಳು ಪ್ರವಾಹದ ನೀರನ್ನು ಚರಂಡಿಗಳಿಗೆ ಬಿಡುವ ಬದಲು ಪಾತ್ರೆಗಳಲ್ಲಿ "ಸಂಗ್ರಹಿಸಿಡಬೇಕು" ಎಂದು ಹೇಳಿ ನಗೆಪಾಟಲಿಗೀಡಾಗಿದ್ದರು. ಪ್ರವಾಹವನ್ನು "ಆಶೀರ್ವಾದ" ಎಂದು ಅವರು ಜನರಿಗೆ ಹೇಳಿದ್ದರು.

ಆಪರೇಷನ್ ಸಿಂಧೂರ್ ಸಮಯದಲ್ಲಿ, ಭಾರತ ಒಂಬತ್ತು ಭಯೋತ್ಪಾದಕ ತಾಣಗಳನ್ನು ನಾಶಪಡಿಸಿದ ನಂತರ ಪಾಕಿಸ್ತಾನದ ತಪ್ಪು ಮಾಹಿತಿ ಅಭಿಯಾನವನ್ನು ಅವರು ಬಹಿರಂಗಪಡಿಸಿದ್ದರು. ಸಿಎನ್‌ಎನ್‌ಗೆ ನೀಡಿದ ಸಂದರ್ಶನದಲ್ಲಿ, ಆಸಿಫ್ ದಾಳಿಯ ಸಮಯದಲ್ಲಿ ಭಾರತೀಯ ಫೈಟರ್ ಜೆಟ್‌ಗಳನ್ನು ಹೊಡೆದುರುಳಿಸಿದ ಪಾಕಿಸ್ತಾನದ ಬಗ್ಗೆ ನಕಲಿ ಸುದ್ದಿಯನ್ನು ಹರಡಲು ಪ್ರಯತ್ನಿಸಿದರು. ಪುರಾವೆ ಕೇಳಿದಾಗ, ಪುರಾವೆಗಳು ಸಾಮಾಜಿಕ ಮಾಧ್ಯಮದಲ್ಲಿವೆ ಎಂದು ಹೇಳಿದ್ದರು. "ಇದರ ದಾಖಲೆ ಸಾಮಾಜಿಕ ಮಾಧ್ಯಮದಲ್ಲಿ, ಭಾರತೀಯ ಸಾಮಾಜಿಕ ಮಾಧ್ಯಮದಲ್ಲಿ, ನಮ್ಮ ಸಾಮಾಜಿಕ ಮಾಧ್ಯಮದಲ್ಲಿ ಮಾತ್ರವಲ್ಲ. ಈ ಜೆಟ್‌ಗಳ ಅವಶೇಷಗಳು ಕಾಶ್ಮೀರಕ್ಕೆ ಬಿದ್ದವು" ಎಂದು ಅವರು ಹೇಳಿಕೊಂಡರು. ಸಿಎನ್‌ಎನ್ ನಿರೂಪಕಿ ಬೆಕಿ ಆಂಡರ್ಸನ್ ತ್ವರಿತವಾಗಿ ಮಧ್ಯಪ್ರವೇಶಿಸಿ, "ಕ್ಷಮಿಸಿ, ಸಾಮಾಜಿಕ ಮಾಧ್ಯಮ ವಿಷಯದ ಬಗ್ಗೆ ಮಾತನಾಡಲು ನಾವು ನಿಮ್ಮನ್ನು ಇಲ್ಲಿ ಕೇಳಲಿಲ್ಲ" ಇತ್ಯರ್ಥಗೊಳಿಸಲಾಗಿದೆ ಎಂದರು. ವೈವಾಹಿಕ ವಿವಾದ, ಕೇಳಲಿಲ್ಲ" ಎಂದು ಹೇಳಿದರು.

# ಮಧ್ಯಸ್ಥಿಕೆ ರಾಷ್ಟ್ರಕ್ಕಾಗಿ ಅಭಿಯಾನದಡಿ 138 ಪ್ರಕರಣ
## ಇತ್ಯರ್ಥ:ನ್ಯಾ. ಪ್ರಕಾಶ ಅರ್ಜುನ ಬನಸೋಡೆ

ಬೀದರ, ಅ.08 : ಮಧ್ಯಸ್ಥಿಕೆ ರಾಷ್ಟ್ರಕ್ಕಾಗಿ 90 ದಿನಗಳ ಕಾರ್ಯಾಚರಣೆ ಅಭಿಯಾನದಡಿ 138 ಪ್ರಕರಣ ಇತ್ಯರ್ಥ ಗೊಳಿಸಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ ಅರ್ಜುನ ಬನಸೋಡೆ ತಿಳಿಸಿದರು.



ಅವರಿಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸಭಾಂಗಣದಲ್ಲಿ 90 ದಿನಗಳ ವಿಶೇಷ ಮಧ್ಯಸ್ಥಿಕೆ ಅಭಿಯಾನ ಕುರಿತು ಪತ್ರಿಕಾ ಗೋಷ್ಠಿ ನಡೆಸಿದರು.

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರವು ಮಧ್ಯಸ್ಥಿಕೆ ರಾಷ್ಟ್ರಕ್ಕಾಗಿ ಅಭಿಯಾನವನ್ನು ದೇಶದಾದ್ಯಂತ ಪ್ರಾರಂಭಿಸಲಾಯಿತು. ಅದರಂತೆ ಬೀದರ ಜಿಲ್ಲೆಯಲ್ಲಿ ಜುಲೈ 1 ರಿಂದ ಅಕ್ಟೋಬರ್ 6 ವರೆಗೆ 90 ದಿನಗಳಲ್ಲಿ ಮಧ್ಯಸ್ಥಿಕೆ ಮೂಲಕ ವಿವಿಧ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ ಎಂದರು.

ವೈವಾಹಿಕ ವಿವಾದ, ಕೌಟುಂಬಿಕ ದೌರ್ಜನ್ಯ, ಅಪಘಾತದ ಹಕ್ಕುಗಳು, ಚೆಕ್ ಬೌನ್ಸ್, ವಾಣಿಜ್ಯ ವಿವಾದ, ಗ್ರಾಹಕ ವಿವಾದ, ಭೂಸ್ವಾಧೀನ ಸೇರಿದಂತೆ ವಿವಿಧ 138 ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ ಎಂದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.